RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 67 ಪುಟ: 06 ಮಂಗಳವಾರ 04-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ರುದ್ರನಾದ ರೆಬೆಲ್ ಸ್ಟಾರ್

ಸಂಪೂರ್ಣ ಬೆತ್ತಲಾದ ಬಿಯಾಂಕಾ; ಬಂಧನಕ್ಕೆ ಆಗ್ರಹ

ನಾಯಕಿಯಾಗಿ ಬದಲಾದ ಜಯಂತ್ ಪುಟ 6

# ದರೋಡೆಕೋರರಿಗೆ ಗುಂಡೇಟು

## ಎರಡು ಪ್ರತ್ಯೇಕ ಪ್ರಕರಣಗಳಲ್ಲಿ ಮೂವರು ಆರೋಪಿಗಳ ಬಂಧನ

**ಬೆಂಗಳೂರು/ಹುಬ್ಬಳ್ಳಿ:** ರಾಜ್ಯದಲ್ಲಿ ನಡೆದ ಎರಡು ಪ್ರತ್ಯೇಕ ಪ್ರಕರಣಗಳಲ್ಲಿ ಮೂವರು ಆರೋಪಿಗಳಿಗೆ ಪೊಲೀಸರು ಗುಂಡೇಟು ಹಾರಿಸಿ, ಬಂಧಿಸಿದ್ದಾರೆ.

ಬೆಂಗಳೂರು ಮತ್ತು ಹುಬ್ಬಳ್ಳಿಯಲ್ಲಿ ಇಂದು ಮುಂಜಾನೆ ನಡೆದ ಫೈರಿಂಗ್‌ನಲ್ಲಿ ಮೂವರು ಆರೋಪಿಗಳ ಕಾಲಿಗೆ ಗುಂಡೇಟು ತಾಕಿದ್ದು, ಅವರನ್ನು ಸ್ಥಳೀಯ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲು ಮಾಡಲಾಗಿದೆ.

ಕೊಲೆ, ಸುಲಿಗೆ, ಬೆದರಿಕೆ ಸೇರಿ ಗಂಭೀರ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಕುಖ್ಯಾತ ರೌಡಿ ಶ್ರೀನಿವಾಸ್ ಅಲಿಯಾಸ್ ಗುಬ್ಬಚ್ಚಿ ಸೀನನಿಗೆ ಇಂದು ಮುಂಜಾನೆ ಬೆಂಗಳೂರಿನ ಸರ್ಜಾಪುರದಲ್ಲಿ ಪೊಲೀಸರು ಗುಂಡು ಹಾರಿಸಿ ಬಂಧಿಸಿದ್ದಾರೆ.

ಗಾಯಗೊಂಡಿರುವ ರೌಡಿ ಶ್ರೀನಿವಾಸ್ ಅಲಿಯಾಸ್ ಗುಬ್ಬಚ್ಚಿ ಸೀನ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾನೆ, ಸೀನನನ್ನು ಬಂಧಿಸಲು ಬಂದ ಪೊಲೀಸರ ಮೇಲೆಯೇ ಹಲ್ಲೆ ನಡೆಸಿದ್ದು, ಚಿಕಿತ್ಸೆಗಾಗಿ ಪೊಲೀಸರುನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಕಳೆದ ಜ. 28ರಂದು ದೊಮ್ಮಸಂದ್ರ ಸಂತೆ ಮೈದಾನದಲ್ಲಿ ನಡೆದಿದ್ದ ಮಾಜಿ ರೌಡಿ ಶೀಟರ್ ಮುಸರಿ ವೆಂಕಟೇಶನ ಕೊಲೆ ಪ್ರಕರಣದಲ್ಲಿ ಗುಬ್ಬಚ್ಚಿ ಸೀನ ಹಾಗೂ ಆತನ ಸಹಚರರು ಭಾಗಿಯಾಗಿದ್ದರು.

ಪೊಲೀಸರು ಪ್ರಕರಣ ದಾಖಲಿಸಿ ಬಂಧನಕ್ಕೆ ಶೋಧ ನಡೆಸುತ್ತಿದ್ದಾಗ ತಲೆಮರೆಸಿಕೊಂಡಿದ್ದ ಗುಬ್ಬಚ್ಚಿ ಸೀನ ಮುಂಜಾನೆ ಈತ ಸರ್ಜಾಪುರದ ದೊಮ್ಮಸಂದ್ರದ ಬಳಿಯಿರುವ ಬೇಕರಿಯಿಂದ ತೆರಳುತ್ತಿದ್ದ ಬಗ್ಗೆ ಮಾಹಿತಿ ಪಡೆದ ಪೊಲೀಸರು ಮೇಲೆ ದಾಳಿ ನಡೆಸಿದ್ದಾರೆ.

ಈ ವೇಳೆ ಇನ್ ಸ್ಪೆಕ್ಟರ್ ನವೀನ್ ಕುಮಾರ್ ಹಾಗೂ ಪೊಲೀಸ್ ಕಾನ್ಸ್ ಟೇಬಲ್ ಇರ್ಫಾನ್ ಕಲಾರಿ ಮೇಲೆ ಹಲ್ಲೆಗೈಯಲು ಯತ್ನಿಸಿದ್ದಾನೆ. ಇರ್ಫಾನ್ ಕಲಾರಿ ಕೈಗೆ ಚಾಕುವಿನಿಂದ ಇರಿದಿದ್ದಾನೆ. ಕೂಡಲೇ ನವೀನ್ ಎಚ್ಚರಿಕೆ ನೀಡಿ ಶರಣಾಗುವಂತೆ ಗಾಳಿಯಲ್ಲಿ ಗುಂಡು ಹಾರಿಸಿ ಮನವಿ ಮಾಡಿಕೊಂಡಿದ್ದಾರೆ. ಈ ವೇಳೆ ತಮ್ಮ ಆತ್ಮರಕ್ಷಣೆಗಾಗಿ ಆರೋಪಿ ಕಾಲಿಗೆ ಗುಂಡು ಹಾರಿಸಿದ್ದಾರೆ.

ಕಾಲಿಗೆ ಗಾಯಗೊಂಡ ಗುಬ್ಬಚ್ಚಿ ಸೀನ ಸ್ಥಳದಲ್ಲೇ ಕುಸಿದುಬಿದ್ದಿದ್ದು, ಆತನನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಮುಂದಿನ ತನಿಖೆಯನ್ನು ಕೈಗೊಳ್ಳಲಾಗಿದೆ ಎಂದು ಗ್ರಾಮಾಂತರ ಎಸ್ ಪಿ ಚಂದ್ರಶೇಖರ ಬಾಬಾ ತಿಳಿಸಿದ್ದಾರೆ.

ಇನ್ನೂ ಹುಬ್ಬಳ್ಳಿಯಲ್ಲಿ, ನಗರಗಳ ಹೊರವಲಯದಲ್ಲಿ



ಸಂಚರಿಸುವಂತಹ ವಾಹನಗಳನ್ನು ಅಡ್ಡಗಟ್ಟಿ ದರೋಡೆ ಮಾಡುತ್ತಿದ್ದ ಗ್ಯಾಂಗ್‌ನ ಇಬ್ಬರು ನಟೋರಿಯಸ್ ದರೋಡೆಕೋರರ ಕಾಲಿಗೆ ಫೈರಿಂಗ್ ಮಾಡಿ ಬಂಧಿಸಿರುವ ಘಟನೆ ನಡೆದಿದೆ.

ಗುಜರಾತ್ ಮೂಲದ ನಿಲೇಶ್, ದಿಲೀಪ್ ಆರೋಪಿಗಳು.

ಹುಬ್ಬಳ್ಳಿಯ ಜೈನ್ ಮಂದಿರದ ಹುಂಡಿ ಹಣ ಕಳವು, ಎರಡು ಅಂಗಡಿಗಳಿಗೆ ಕನ್ನ, ಮೇಲೆ ಗದಗ, ಬಳ್ಳಾರಿ, ಚಿತ್ರದುರ್ಗ ಸೇರಿ ಹಲವು ಜಿಲ್ಲೆಗಳಲ್ಲಿ 15ಕ್ಕೂ ಹೆಚ್ಚು ಪ್ರಕರಣಗಳು ಈ ದರೋಡೆಕೋರರ ಗ್ಯಾಂಗ್ ಮೇಲೆ ದಾಖಲಾಗಿವೆ.

ತಡರಾತ್ರಿ ಬೈಕ್ ಮೇಲೆ ಹೊರಟಿದ್ದ ಕುಂದಗೋಳ ಮೂಲದ ವ್ಯಕ್ತಿಗೆ ನಾಲ್ಕೈದು ಜನರ ಗುಂಪು ಅಡ್ಡಗಟ್ಟಿ ಬೈಕ್, ನಗದು, ಮೊಬೈಲ್ ಸುಲಿಗೆ ಮಾಡಿ ಹಲ್ಲೆಗೈದು ಪರಾರಿಯಾಗಿದ್ದರು. ಇದಾದ ಸ್ವಲ್ಪ ಸಮಯದಲ್ಲಿ ರವಿಚಂದ್ರ ಎಂಬಾತರನ್ನು ಅಡ್ಡಗಟ್ಟಿ ಸುಲಿಗೆ ಮಾಡಿತ್ತು. ಆಮೇಲೆ ಮಂಟೂರ ರಸ್ತೆಯಲ್ಲಿನ ಶಾರುಕ್ ಎಂಬುವರ ಮನೆಗೆ ಕನ್ನ ಹಾಕಲು ಯತ್ನಿಸಿದ್ದಾರೆ. ಈ ವೇಳೆ ಮನೆಗೆ ಕಲ್ಲು ತೂರಾಟ ಮಾಡಿದ್ದಾರೆ.

ವಿಷಯ ತಿಳಿಯುತ್ತಿದ್ದಂತೆ ಬೆಂಡಿಗೇರಿ ಪಿಐ ಎಸ್. ಆರ್. ನಾಯಕ ನೇತೃತ್ವದ ತಂಡ ಅಲರ್ಟ್ ಆಗಿದ್ದು, ಬೈಕ್ ಮೇಲೆ ಅನುಮಾನಾಸ್ಪದವಾಗಿ ಹೋಗುತ್ತಿದ್ದವರ ತಪಾಸಣೆಗೆ ಮುಂದಾಗಿದ್ದರು. ಅದರಂತೆ ಪಿಎಸ್‌ಐ ಅಶೋಕ್ ಹಾಗೂ ಇನ್ನಿಬ್ಬರು ಸಿಬ್ಬಂದಿ ಹುಬ್ಬಳ್ಳಿಯ ಹೊರವಲಯದ ಬಿಡನಾಳ ಸಮೀಪದಲ್ಲಿ ತಪಾಸಣೆ ನಡೆಸುವ ವೇಳೆ ಪೊಲೀಸರ ಮೇಲೆಯೇ ಹಲ್ಲೆ ನಡೆಸಿ ದರೋಡೆಕೋರರು ಎಸ್ಕೇಪ್ ಆಗಲು ಮುಂದಾಗಿದ್ದರು.

ಈ ವೇಳೆ ಆತ್ಮರಕ್ಷಣೆಗಾಗಿ ಪೊಲೀಸರು 4 ಸುತ್ತು ಗುಂಡು ಹಾರಿಸಿದರು. ಬಳಿಕ ಇಬ್ಬರು ಆರೋಪಿಗಳ ಕಾಲಿಗೆ ತಲಾ ಒಂದೊಂದು ಗುಂಡು ಹೊಡೆದು ಆರೋಪಿಗಳನ್ನು ಬಂಧಿಸಲಾಗಿದೆ.

ಸದ್ಯ ಗುಂಡೇಟು ತಿಂದ ದಿಲೀಪ್ ಮತ್ತು ನಿಲೇಶ್‌ನನ್ನು ಕಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಘಟನೆಯಲ್ಲಿ ಪಿಎಸ್‌ಐ ಅಶೋಕ್, ಮತ್ತು ಕಾನ್‌ಸ್ಟೇಬಲ್‌ಗಳಾದ ಶರಣು ಹಾಗೂ ಮತ್ತೋರ್ವ ಸಿಬ್ಬಂದಿಗೆ ಗಾಯವಾಗಿದ್ದು, ಚಿಕಿತ್ಸೆ ಮುಂದುವರೆದಿದೆ. ಬೆಂಡಿಗೇರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

ಕಿಮ್ಸ್ ಆಸ್ಪತ್ರೆಗೆ ಪೊಲೀಸ್ ಕಮಿಷನರ್ ಎನ್. ಶಶಿಕುಮಾರ್ ಭೇಟಿ ನೀಡಿ, ಗಾಯಗೊಂಡ ಪೊಲೀಸ್ ಸಿಬ್ಬಂದಿಯ ಆರೋಗ್ಯ ವಿಚಾರಿಸಿದರು. ಅಲ್ಲದೇ ಗಾಯಗೊಂಡ ಇಬ್ಬರು ಆರೋಪಿಗಳನ್ನು ಪರಿಶೀಲಿಸಿದರು.

ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, "ಆರೋಪಿಗಳು ಹಲವಾರು ದರೋಡೆ ಪ್ರಕರಣದಲ್ಲಿ ಭಾಗಿಯಾಗಿದ್ದರು. ಗುಜರಾತ್‌ನಿಂದ ಬಂದು ಕಳ್ಳತನ ಮಾಡಿ ಮತ್ತೆ ಎಸ್ಕೇಪ್ ಆಗುತ್ತಿದ್ದರು. ರಾಜ್ಯದಲ್ಲಿ ನಡೆಯುತ್ತಿರುವ ದರೋಡೆ ಪ್ರಕರಣಗಳ ಹಿನ್ನೆಲೆಯಲ್ಲಿ ಅವಳಿ ನಗರದಲ್ಲಿ 17 ಕಡೆ ನಾಕಾಬಂದಿ ಹಾಕಲಾಗಿತ್ತು. ಪುಟ 2



ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಅವರು ಮಂಗಳವಾರ ದೆಹಲಿಯಲ್ಲಿ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅವರನ್ನು ಭೇಟಿಯಾಗಿ ಫೆ.11ರಿಂದ 14ರವರೆಗೆ ಬೆಂಗಳೂರಿನಲ್ಲಿ ನಡೆಯುವ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಭಾಗವಹಿಸುವಂತೆ ಕೋರಿ ಅಧಿಕೃತ ಆಹ್ವಾನ ನೀಡಿದರು. ಈ ಸಂದರ್ಭದಲ್ಲಿ ಕೈಗಾರಿಕಾ ಇಲಾಖೆ ಆಯುಕ್ತರಾದ ಗುಂಜನ್ ಕೃಷ್ಣ ಸೇರಿದಂತೆ ಇತರ ಅಧಿಕಾರಿಗಳು ಇದ್ದರು.

## ಮೈಕ್ರೋ ಫೈನಾನ್ಸ್ ಕಿರುಕುಳ: 10 ವರ್ಷ ಜೈಲುಶಿಕ್ಷೆ



**ಬೆಂಗಳೂರು:** ಮೈಕ್ರೋ ಫೈನಾನ್ಸ್‌ನವರ ಹಾವಳಿ ತಡೆಗೆ ರಾಜ್ಯ ಸರ್ಕಾರ ಸುಗ್ರೀವಾಜ್ಞೆಗೆ ಮುಂದಾಗಿದ್ದು, ಇದಕ್ಕೆ ಸಂಬಂಧಿಸಿದ ಕರಡು ಪ್ರತಿಯನ್ನು ರಾಜ್ಯಪಾಲರಿಗೆ ರವಾನಿಸಲಾಗಿದೆ. ಈ ಕುರಿತು ಮಾತನಾಡಿರುವ ಗೃಹಸಚಿವ ಡಾ.ಜಿ. ಪರಮೇಶ್ವರ್, ರಾಜ್ಯದಲ್ಲಿ ಮೈಕ್ರೋಫೈನಾನ್ಸ್ ದೌರ್ಜನ್ಯಕ್ಕೆ ಸರಣಿ ಆತ್ಮಹತ್ಯೆ ಪ್ರಕರಣಗಳು ನಡೆಯುತ್ತಿವೆ. ಇದರ ಮಧ್ಯ ನೆನ್ನೆ ರಾಜ್ಯಪಾಲರಿಗೆ ಮೈಕ್ರೋ ಫೈನಾನ್ಸ್ ದೌರ್ಜನ್ಯ ತಡೆ ಕುರಿತು ಕರಡು ಪ್ರತಿಯನ್ನು ಕಳುಹಿಸಲಾಗಿದ್ದು, ಇಂದು ರಾಜ್ಯಪಾಲರು ಕರಡು ಪ್ರತಿಯನ್ನು ಪುಟ 2

## ರಾಹುಲ್ ಗಾಂಧಿ ವಿರುದ್ಧ ಹಕ್ಕುಚ್ಯುತಿ; ಬಿಜೆಪಿ ಚಿಂತನೆ!

**ಹೊಸದಿಲ್ಲಿ:** ಚೀನಾ ಸೈನಿಕರು ಭಾರತದ ಗಡಿಯನ್ನು ಅತಿಕ್ರಮಣ ಮಾಡಿದ್ದಾರೆ ಎಂಬ ರಾಹುಲ್ ಗಾಂಧಿ ಆರೋಪವನ್ನು ಗಂಭೀರವಾಗಿ ಪರಿಗಣಿಸಿರುವ ಆಡಳಿತಾರೂಢ ಬಿಜೆಪಿ, ವಿಪಕ್ಷ ನಾಯಕ ಸದನಕ್ಕೆ ತಪ್ಪು ಮಾಹಿತಿ ನೀಡಿದ್ದಾರೆ ಎಂದು ಕಿಡಿಕಾರಿದೆ. ಅಲ್ಲದೇ ರಾಹುಲ್ ಗಾಂಧಿ ವಿರುದ್ಧ ಹಕ್ಕುಚ್ಯುತಿ ಮಂಡಿಸಲು ಬಿಜೆಪಿ ಚಿಂತನೆ ನಡೆಸಿದೆ.



"ಚೀನಾ ಅತಿಕ್ರಮಣದ ಬಗ್ಗೆ ರಾಹುಲ್ ಗಾಂಧಿ ಸದನಕ್ಕೆ ತಪ್ಪು ಮಾಹಿತಿ ನೀಡಿದ್ದಾರೆ. ಹೀಗಾಗಿ ಅವರ ವಿರುದ್ಧ ವಿಶೇಷ ಹಕ್ಕು ಉಲ್ಲಂಘನೆಯ ಪ್ರಸ್ತಾಪವನ್ನು ಮುಂದಿಡಲು ಚಿಂತನೆ ನಡೆದಿದೆ ಎಂದು ಬಿಜೆಪಿ ಸಂಸದರು ತಿಳಿಸಿದ್ದಾರೆ.

ಸಂಸತ್ತಿನ ಬಜೆಟ್ ಅಧಿವೇಶನದ ಹಿನ್ನೆಲೆಯಲ್ಲಿ ರಾಷ್ಟ್ರಪತಿಗಳ ಭಾಷಣಕ್ಕೆ ವಂದನಾ ನಿರ್ಣಯದ ಮೇಲಿನ ಚರ್ಚೆಯನ್ನು ಉದ್ದೇಶಿಸಿ ಲೋಕಸಭೆಯಲ್ಲಿ ಸೋಮವಾರ ಮಾತನಾಡಿದ್ದ ರಾಹುಲ್ ಗಾಂಧಿ, "ಚೀನಾ ಸೇನೆ ಭಾರತದ ಗಡಿಯನ್ನು ಅತಿಕ್ರಮಿಸಿಕೊಂಡಿದೆ.." ಎಂದು ಗಂಭೀರ ಆರೋಪ ಮಾಡಿದ್ದರು.

"ಚೀನೀಯರು ನಮ್ಮ ಭೂಪ್ರದೇಶದೊಳಗೆ ನುಗ್ಗಿದ್ದಾರೆ ಎಂದು ನಮ್ಮ ಭಾರತೀಯ ಸೇನಾ ಮುಖ್ಯಸ್ಥರೇ ಖಚಿತಪಡಿಸಿದ್ದಾರೆ. ನಾವು ಇದನ್ನು ಸತ್ಯ ಎಂದು ನಂಬುತ್ತೇವೆ. ಆದರೆ ಪ್ರಧಾನಿ ಪುಟ 2

## ೯ ಉಗ್ರರ ಬಂಧನ

**ಇಂಫಾಲ:** ವಿವಿಧ ನಿಷೇಧಿತ ಸಂಘಟನೆಗೆ ಸೇರಿದ್ದ 9 ಉಗ್ರರನ್ನು ಪೂರ್ವ ಮತ್ತು ಪಶ್ಚಿಮ ಇಂಫಾಲ ಹಾಗೂ ಕಕ್ಚಿಂಗ್ ಮತ್ತು ತೌಬಲ್ ಜಿಲ್ಲೆಗಳಲ್ಲಿ ಬಂಧಿಸಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಇಂಫಾಲ್ ಪೂರ್ವ ಜಿಲ್ಲೆಯ ಮಂತ್ರಿಪುಖ್ರಿ ಠಾಕುರ್ಬರಿ ಪ್ರದೇಶದಿಂದ ಕಾಂಗ್ಲೇಪಕ್ ಕಮ್ಯುನಿಸ್ಟ್ ಪಕ್ಷದ (ಸಿಟಿ ಮೈತೆ) ಐವರನ್ನು ಬಂಧಿಸಲಾಗಿದೆ ಎಂದು ತಿಳಿಸಿದರು. ಬಂಧಿತರಿಂದ ಒಂದು 9 ಎಂಎಂ ಪಿಸ್ತೂಲ್, ಮ್ಯಾಗಜೀನ್, 11 ಜೀವಂತ ಗುಂಡುಗಳು, ಎರಡು ಹ್ಯಾಂಡ್ ಪುಟ 2

## ಫೆ.೯ ರಂದು ಕುಂಭ ಮೇಳಕ್ಕೆ ಡಿಕೆಶಿ

ಬೆಂಗಳೂರು: ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳದಲ್ಲಿ ಫೆ. 9 ಮತ್ತು 10 ರಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಭಾಗವಹಿಸಲಿದ್ದಾರೆ. ಫೆ. 9 ರಂದು ಬೆಳಿಗ್ಗೆ ಡಿಕೆಶಿ ಪ್ರಯಾಗ್‌ರಾಜ್ ತಲುಪಲಿದ್ದು, ಫೆ. 10 ಮಧ್ಯಾಹ್ನ ಪ್ರಯಾಗ್‌ರಾಜ್‌ನಿಂದ ವಾಪಸ್ಸಾಗಲಿದ್ದಾರೆ. ವಿಶ್ವದ ಅತೀ ದೊಡ್ಡ ಮಹಾಕುಂಭ ಪುಟ 2

## ಬಿಜೆಪಿ ಶಾಸಕ ಕರ್ಷಣಭಾಯ್ ಸೋಲಂಕಿ ನಿಧನ

**ಅಹಮದಾಬಾದ್:** ಗುಜರಾತ್‌ನ ಬಿಜೆಪಿಯ ಹಿರಿಯ ನಾಯಕ ಹಾಗು ಶಾಸಕ ಕರ್ಶನ್‌ಭಾಯ್ ಸೋಲಂಕಿ (68) ಅವರು ಇಂದು ನಿಧನರಾಗಿದ್ದಾರೆ. ಕ್ಯಾನ್ಸರ್‌ನಿಂದ ಬಳಲುತ್ತಿದ್ದ ಅವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದರು ಆದರೆ ಇಂದು ಮುಂಜಾನೆ ನಿಧನರಾಗಿದ್ದಾರೆ ಎಂದು ಕುಟುಂಬದ ಪುಟ 2

## ರಾಗಾ ಮೇಲೆ ಒಕ್ಕೂಟದ ಮಿತ್ರರಿಗೆ ವಿಶ್ವಾಸವೇ ಇಲ್ಲ

**ನವದೆಹಲಿ:** "ಕಾಂಗ್ರೆಸ್ ನೇತಾರ ರಾಹುಲ್ ಗಾಂಧಿ ಮೇಲೆ ಇಂಡಿ ಒಕ್ಕೂಟದ ಮಿತ್ರ ಪಕ್ಷಗಳಿಗೆ ನಂಬಿಕೆಯೇ ಇಲ್ಲ" ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.

ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿ, ಇಂಡಿ ಒಕ್ಕೂಟದ ಮಿತ್ರ ಪಕ್ಷಗಳೇ ಇಂದು ತನ್ನನ್ನು ಬೆಂಬಲಿಸದಂತಹ ಸ್ಥಿತಿಗೆ ಕಾಂಗ್ರೆಸ್ ತಲುಪಿದೆ ಎಂದು ಟೀಕಿಸಿದರು.

ಸಮಾಜವಾದಿ ಪಾರ್ಟಿ ಇಂಡಿ ಒಕ್ಕೂಟದ ಅಂಗ ಪಕ್ಷವೇ ಆಗಿದ್ದರೂ ದೆಹಲಿ ಚುನಾವಣೆಯಲ್ಲಿ ಕಾಂಗ್ರೆಸ್ ಬದಲು ಆಮ್ ಆದ್ಮಿ ಪಾರ್ಟಿಯನ್ನು ಬೆಂಬಲಿಸುತ್ತಿದೆ. ಹೀಗೆ ಇಂಡಿಯ ಎಲ್ಲಾ ಮಿತ್ರಪಕ್ಷಗಳು ಕಾಂಗ್ರೆಸ್ ನಿಂದ ಅಂತರ ಕಾಯ್ದುಕೊಳ್ಳುತ್ತಿವೆ ಎಂದು ಹೇಳಿದರು.

ಶರದ್ ಪವಾರ್ ಮಮತಾ ಬ್ಯಾನರ್ಜಿ ಅವರನ್ನು ಬೆಂಬಲಿಸುತ್ತೇನೆ, ರಾಹುಲ್ ಗಾಂಧಿ ಅವರನ್ನೆಲ್ಲ ಎಂದರು. ಅದೇ ರೀತಿ ಮಮತಾ ಬ್ಯಾನರ್ಜಿ, ಓಮರ್ ಅಬ್ದುಲ್ಲಾ ಯಾರೊಬ್ಬರೂ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ಅನ್ನು ಬೆಂಬಲಿಸಲು ಸಿದ್ಧರಿಲ್ಲ. ಅಂದರೆ ಕಾಂಗ್ರೆಸ್ ಅಷ್ಟರ ಮಟ್ಟಿಗೆ ವಿಶ್ವಾಸ ಕಳೆದುಕೊಂಡಿದೆ ಎಂದರು.

ಮಿತ್ರರ ಬುದ್ಧಿಮಾತು ಕೇಳಲಿ: ಕಾಂಗ್ರೆಸ್ ಪಕ್ಷಕ್ಕೆ ಮತ್ತು ರಾಹುಲ್ ಗಾಂಧಿ ಸುಧಾರಣೆ ಕಾಣಬೇಕು ಎಂದು ಮಿತ್ರಪಕ್ಷಗಳೇ ಬುದ್ಧಿಮಾತು ಹೇಳುತ್ತಿವೆ. ರಾಹುಲ್ ಗಾಂಧಿ ವಾಸ್ತವ ಅರಿತುಕೊಳ್ಳಬೇಕು. ನಮ್ಮ ಮಾತು ಬೇಡ ಮಿತ್ರರ ಮಾತನ್ನದರೂ ಕೇಳಲಿ ಎಂದು



ಸಲಹೆ ನೀಡಿದರು.

ಸೋಲೊಪ್ಪಿಕೊಳ್ಳಲು ಸಿದ್ಧವಿಲ್ಲ: ಕಾಂಗ್ರೆಸ್ ಸೋಲೊಪ್ಪಿಕೊಳ್ಳಲು ತಯಾರಿಲ್ಲ. ಹೀಗಾಗಿ ಇಂಡಿ ಮೈತ್ರಿಕೂಟದ ಇತರ ಮಿತ್ರ ಪಕ್ಷಗಳು ಅದರಿಂದ ದೂರ ಸರಿಯುತ್ತಿವೆ. ಆದರೂ ಕಾಂಗ್ರೆಸ್ ಇನ್ನೂ ಸುಧಾರಿಸಿಕೊಳ್ಳಲು ಸಿದ್ಧವಾಗಿಲ್ಲ ಎಂದು ಜೋಶಿ ಹೇಳಿದರು.

ಜನಾಭಿಮತವನ್ನು ಗೌರವಿಸಲಿ: ಕಾಂಗ್ರೆಸ್ ಪಕ್ಷ ಮತ್ತು ರಾಹುಲ್ ಗಾಂಧಿ ಜನರ ತೀರ್ಪನ್ನು ಗೌರವದ ಭಾವನೆಯಿಂದ ಸ್ವೀಕರಿಸಬೇಕು. ಅದು ಬಿಟ್ಟು ಇವಿಎಂ ಮೇಲೆ, ಚುನಾವಣಾ ಆಯೋಗದ ಮೇಲೆ ಆರೋಪ ಹೋರಿಸುತ್ತ ಲಘುವಾಗಿ ಮಾತನಾಡುವುದು ಸಲ್ಲದು ಎಂದು ಜೋಶಿ ಆಕ್ಷೇಪಿಸಿದರು.

ಈಗ ಮತದಾರರ ಮೇಲೆ ಶಂಕೆ ಶುರುವಾಗಿದೆ ಇವರಿಗೆ. ಹಾಗಾಗಿ ರಾಹುಲ್ ಗಾಂಧಿ ಲಘು ಹೇಳಿಕೆ ನೀಡುತ್ತಿದ್ದಾರೆ. ನಾವು ಕರ್ನಾಟಕ ಮತ್ತು ಜಾರ್ಖಂಡ್ ಸೋಲನ್ನು ಒಪ್ಪಿಕೊಂಡಂತೆ ಕಾಂಗ್ರೆಸ್ ಇತರೆ ರಾಜ್ಯಗಳಲ್ಲಾದ ಸೋಲನ್ನು ಸ್ವೀಕರಿಸದೆ ವಿನಾಕಾರಣ ಆರೋಪ ಮಾಡುತ್ತಿದ್ದಾರೆ ಎಂದರು.

## ಮಹಾಕುಂಭದಲ್ಲಿ ನಾಳೆ ಮೋದಿ ಪವಿತ್ರ ಸ್ನಾನ

**ಲಕ್ನೋ:** ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭ ಮೇಳಕ್ಕೆ ಪ್ರಧಾನಿ ನರೇಂದ್ರ ಮೋದಿ ನಾಳೆ ಭೇಟಿ ನೀಡಿ ಪವಿತ್ರ ಸ್ನಾನ ಮಾಡಲಿದ್ದಾರೆ.



ಪ್ರಧಾನಿ ನಾಳೆ ಬೆಳಗ್ಗೆ 10 ಗಂಟೆಗೆ ಮಹಾಕುಂಭವನ್ನು ತಲುಪಲಿದ್ದಾರೆ. ಮಾಘ ಮಾಸದ ಅಷ್ಟಮಿಯಂದು ಅವರು ಪವಿತ್ರ ತ್ರಿವೇಣಿ ಸಂಗಮದಲ್ಲಿ ಸ್ನಾನ ಮಾಡಲಿದ್ದಾರೆ. ಸ್ನಾನದ ನಂತರ ಸಂಗಮದಲ್ಲಿ ಗಂಗೆಯನ್ನು ಪೂಜಿಸಲಿದ್ದಾರೆ. ನಂತರ ಅವರು ಅರ್ಯೆಲ್ ಘಾಟ್ ನಿಂದ ದೋಣಿ ಮೂಲಕ ಸಂಗಮ್ ಗೆ ಹೋಗಲಿದ್ದಾರೆ. ಒಟ್ಟಾರೆಯಾಗಿ, ಪ್ರಧಾನಿ ಮೋದಿ ಸುಮಾರು ಒಂದು ಗಂಟೆ ಪ್ರಯಾಗ್ ಪುಟ 2

## ರಣಜಿ ಆಡಲಿದ್ದಾರೆ ಸೂರ್ಯಕುಮಾರ್ ಮತ್ತು ಶಿವಂ ದುಬೆ

**ಮುಂಬೈ:** ಇದೇ 8 ರಿಂದ ಆರಂಭವಾಗಲಿರುವ ಹರಿಯಾಣ ವಿರುದ್ಧದ ರಣಜಿ ಟ್ರೋಫಿ ಕ್ವಾರ್ಟರ್‌ಫೈನಲ್ ಹಣಾಹಣಿಗಾಗಿ ಮುಂಬೈನ 18 ಸದಸ್ಯರ ತಂಡದಲ್ಲಿ ಭಾರತದ ಟಿ20 ನಾಯಕ ಸೂರ್ಯಕುಮಾರ್ ಯಾದವ್ ಮತ್ತು ಶಿವಂ ದುಬೆ ಅವರನ್ನು ಸೇರಿಸಿಕೊಳ್ಳಲಾಗಿದೆ. ಇತ್ತೀಚೆಗೆ ಮುಕ್ತಾಯಗೊಂಡ ಭಾರತ-ಇಂಗ್ಲೆಂಡ್ ಐದು ಪಂದ್ಯಗಳ ಟಿ20ಐ ಸರಣಿಯಲ್ಲಿ ಆತಿಥೇಯರು 4-1 ಅಂತರದಲ್ಲಿ ಗೆದ್ದಿದ್ದ ಸೂರ್ಯಕುಮಾರ್ ಮತ್ತು ದುಬೆ ಇಬ್ಬರೂ ಈ ಋತುವಿನ ರಣಜಿ ಟ್ರೋಫಿಯ ಮುಂಬೈ ಪ್ರಶಸ್ತಿ ರಕ್ಷಣೆಯಲ್ಲಿ ತಲಾ ಒಂದು ಪಂದ್ಯವನ್ನು ಆಡಿದ್ದಾರೆ. ಮುಂಬೈ ಮೇಘಾಲಯ ವಿರುದ್ಧ ಇನಿಂಗ್ಸ್ ಮತ್ತು 456 ರನ್‌ಗಳ ಹೀನಾಯ ವಿಜಯದ ನಂತರ ಕ್ವಾರ್ಟರ್‌ಫೈನಲ್‌ಗೆ ಅರ್ಹತೆ



ಪಡೆದಿದೆ, ಆದರೆ ಜಮು ಮತ್ತು ಕಾಶ್ಮೀರ ಎಲೈಟ್ ಗ್ರೂಪ್ ಎ ನಿಂದ ನಾಕೌಟ್‌ಗೆ ಪ್ರವೇಶಿಸಿದ ಇತರ ತಂಡವಾಗಿದೆ. ಅಕ್ಟೋಬರ್‌ನಲ್ಲಿ ಮಹಾರಾಷ್ಟ್ರ ವಿರುದ್ಧದ ಅವರ ಘರ್ಷಣೆಯಲ್ಲಿ ಸೂರ್ಯಕುಮಾರ್ ಮುಂಬೈ ತಂಡದ ಭಾಗವಾಗಿದ್ದರು, ಆದರೆ ದುಬೆ ಅವರು ಭಾರತ ಟೆಸ್ಟ್ ಮತ್ತು ಏಕದಿನ ಪಂದ್ಯಗಳ ನಾಯಕ ರೋಹಿತ್ ಶರ್ಮಾ ಮತ್ತು ಯಶಸ್ವಿ ಜೈಸ್ವಾಲ್ ಪುಟ 2

## ಕೆಲಸದ ಅವಧಿ ವಿಸ್ತರಣೆ; ಪ್ರಸ್ತಾವನೆ ಸರ್ಕಾರದ ಮುಂದಿಲ್ಲ

ನವದೆಹಲಿ: ದೇಶದಲ್ಲಿ ಕೆಲಸದ ಅವಧಿಯನ್ನು ವಾರಕ್ಕೆ 70 ಹಾಗೂ 90 ಗಂಟೆಗೆ ಹೆಚ್ಚಿಸುವಂತ ಯಾವ ಪ್ರಸ್ತಾವನೆಗಳೂ ಕೇಂದ್ರ ಸರ್ಕಾರದ ಮುಂದಿಲ್ಲ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭ ಕರಂದ್ಲಾಜೆ ಸ್ಪಷ್ಟಪಡಿಸಿದ್ದಾರೆ.

ಕೆಲ ಉದಿಮೆಗಳ ಮಾಲೀಕರಿಂದ ವ್ಯಕ್ತವಾಗುತ್ತಿರುವ ಪರ-ವಿರೋಧ ಚರ್ಚೆ ನಡುವೆ ಕೇಂದ್ರ ಸರ್ಕಾರ ಈ ಮಾಹಿತಿ ನೀಡಿದೆ. ಲೋಕಸಭೆಗೆ ನೀಡಿದ ಲಿಖಿತ ಉತ್ತರದಲ್ಲಿ,ಕೆಲಸದ ಅವಧಿಯನ್ನು ವಾರದಲ್ಲಿ 70 ಅಥವಾ 90 ಗಂಟೆಗೆ ಏರಿಕೆ ಮಾಡುವ ಯಾವ ಪ್ರಸ್ತಾವನೆಯೂ ಸರ್ಕಾರದ ಮುಂದೆ ಇಲ್ಲ. ನೌಕರರು ಸಮವರ್ತಿ ಪಟ್ಟಿಯ ಅಡಿ ಬರುವುದರಿಂದ ಕಾರ್ಮಿಕ ಕಾನೂನುಗಳಿಗೆ ಸಂಬಂಧಿಸಿದ ನಿರ್ಧಾರಗಳನ್ನು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ತಮ ವ್ಯಾಪ್ತಿಯಲ್ಲಿ ತೆಗೆದುಕೊಳ್ಳುತ್ತವೆ ಎಂದು ತಿಳಿಸಿದ್ದಾರೆ. ಪುಟ 2


## ಎಎಪಿಗೆ ಗೆಲುವು: ಕೇಜ್ರಿ

**ಬೆಂಗಳೂರು:** ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ತಮ್ಮ ಪಕ್ಷವು 70 ಸ್ಥಾನಗಳ ಪೈಕಿ 55 ರಲ್ಲಿ ಗೆಲ್ಲುತ್ತದೆ ಎಂದು ಆಮ್ ಆದ್ಮಿ ಪಕ್ಷದ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಭವಿಷ್ಯ ನುಡಿದಿದ್ದಾರೆ.

ಬಿಜೆಪಿ ಅಧಿಕಾರಕ್ಕೆ ಬಂದರೆ ನಗರದಲ್ಲಿನ ಎಲ್ಲಾ ಉಚಿತ ಯೋಜನೆಗಳನ್ನು ಸ್ಥಗಿತಗೊಳಿಸುತ್ತದೆ ಎಂದು ದೆಹಲಿ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಆರೋಪಿಸಿದ್ದಾರೆ.

ನಾಳೆ ನಡೆಯುವ ದೆಹಲಿ ವಿಧಾನಸಭೆ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ಸೋಮವಾರ ತೆರೆ ಬಿದ್ದಿದ್ದು, ಇದರ ಬೆನ್ನಲ್ಲೇ ಹಿಂದಿಯಲ್ಲಿ ಪೋಸ್ಟ್ ಮಾಡಿದ ಕೇಜ್ರಿವಾಲ್, ನನ್ನ ಅಂದಾಜಿನ ಪ್ರಕಾರ, ಆಮ್ ಆದ್ಮಿ ಪಕ್ಷವು 55 ಸ್ಥಾನಗಳನ್ನು ಪಡೆಯಲಿದೆ.

ಮಹಿಳಾ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಮತ ಚಲಾಯಿಸಿದರೆ ಈ ಸಂಖ್ಯೆ 60 ಮೀರಬಹುದು ಎಂದು ಅವರು



ನಂಬುತ್ತಾರೆ. ಮಹಿಳೆಯರು ಸಾಕಷ್ಟು ಪ್ರಯತ್ನ ಮಾಡಿದರೆ ಮತ್ತು ಅವರ ಕುಟುಂಬದ ಪುರುಷರನ್ನು ಆಮ್ ಆದ್ಮಿ ಪಕ್ಷಕ್ಕೆ ಮತ ಹಾಕುವಂತೆ ಮನವೊಲಿಸಿದರೆ ಎಎಪಿ 60ಕ್ಕೂ ಹೆಚ್ಚು ಸ್ಥಾನಗಳನ್ನು ಪಡೆಯಬಹುದು ಎಂದು ತಿಳಿಸಿದ್ದಾರೆ.

ಕಳೆದ ಎರಡು ವಿಧಾನಸಭಾ ಚುನಾವಣೆಗಳಲ್ಲಿ, ಎಎಪಿ ರಾಜಕೀಯ ಪ್ರಾಬಲ್ಯ ಸಾಧಿಸಿತು, 2015 ರಲ್ಲಿ 70 ಸ್ಥಾನಗಳಲ್ಲಿ 67 ಸ್ಥಾನಗಳನ್ನು ಗೆದ್ದಿತು ಮತ್ತು 2020 ರಲ್ಲಿ 62 ಸ್ಥಾನಗಳನ್ನು ಪುಟ 2

ಮೊದಲ ಪುಟದಿಂದ

## ಮಹಾಕುಂಭದಲ್ಲಿ ನಾಳೆ ಮೋದಿ ಪವಿತ್ರ ಸ್ನಾನ

ರಾಜ್‌ನಲ್ಲಿ ಇರಲಿದ್ದಾರೆ. ಮಹಾ ಕುಂಭಮೇಳಕ್ಕೂ ಮುನ್ನ, 2024 ರ ಡಿಸೆಂಬರ್ 13 ರಂದು ಮೋದಿ ಸಂಗಮದ ದಡದಲ್ಲಿ ಗಂಗಾ ನದಿಗೆ ಆರತಿ ಮತ್ತು ಪೂಜೆ ಸಲ್ಲಿಸಿದ್ದರು ಮತ್ತು ಈ ಬಹತ್ ಕಾರ್ಯಕ್ರಮ ಯಶಸ್ವಿಯಾಗಿ ಪೂರ್ಣಗೊಳ್ಳಲಿ ಎಂದು ಪ್ರಾರ್ಥಿಸಿದ್ದರು. ಅವರು 2019 ರ ಕುಂಭ ಮೇಳದ ಆರಂಭದಲ್ಲಿ ಮತ್ತು ನಂತರವೂ ಬಂದಿದ್ದರು.
ಮೂರು ಸೇನಾ ಹೆಲಿಕಾಪ್ಟರ್‌ಗಳು ಅರೈಲ್‌ನಲ್ಲಿರುವ ಡಿಪಿಎಸ್ ಮೈದಾನದ ಹೆಲಿಪ್ಯಾಡ್‌ನಲ್ಲಿ ಇಳಿಯಲಿದ್ದು, ಅಲ್ಲಿಂದ ಕಾರಿನಲ್ಲಿ ತೆರಳಲಿದ್ದಾರೆ. ಇಲ್ಲಿಂದ ಅವರು ಡಿಪಿಎಸ್ ಹೆಲಿಪ್ಯಾಡ್ ಮೂಲಕ ಪ್ರಯಾಗ್‌ರಾಜ್ ವಿಮಾನ ನಿಲ್ದಾಣವನ್ನು ತಲುಪಲಿದ್ದಾರೆ. ಪ್ರಧಾನಿ ಮೋದಿ ಅವರು ಮಧ್ಯಾಹ್ನ 12.30 ಕ್ಕೆ ವಾಯುಪಡೆಯ ವಿಮಾನದ ಮೂಲಕ ಪ್ರಯಾಗ್‌ರಾಜ್‌ನಿಂದ ಹಿಂತಿರುಗಲಿದ್ದಾರೆ.

## ಪ್ರಸ್ತಾವನೆ ಸರ್ಕಾರದ ಮುಂದಿಲ್ಲ

ಕೇಂದ್ರ ಬಜೆಟ್ ಮಂಡನೆಗೂ ಮುನ್ನ ಸಲ್ಲಿಸಲಾದ ಆರ್ಥಿಕ ಸಮೀಕ್ಷೆಯಲ್ಲಿ, ವಾರದಲ್ಲಿ 60 ಗಂಟೆ ಕೆಲಸ ಮಾಡುವುದರಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. 12 ಗಂಟೆಗಿಂತಲೂ ಅಧಿಕ ಕುಳಿತು ಕೆಲಸ ಮಾಡುವವರು ಮಾನಸಿಕ ಅಸ್ವಸ್ಥತೆಯಿಂದ ಬಳಲುತ್ತಾರೆ. ಇದರಿಂದ ಆರ್ಥಿಕವಾಗಿಯೂ ನಷ್ಟವಾಗುತ್ತದೆ ಎಂದು ತಿಳಿಸಲಾಗಿದೆ. ಪ್ರಸ್ತುತ ಇರುವ ಕಾರ್ಮಿಕ ಕಾನೂನುಗಳ ಪ್ರಕಾರ ನೌಕರರ ದುಡಿಮೆ ಸಮಯ ಸೇರಿದಂತೆ ಹಲವು ವಿಷಯಗಳನ್ನು ಕಾರ್ಖಾನೆ ಕಾಯ್ದೆ 1948, ಅಂಗಡಿ ಮತ್ತು ಸಂಸ್ಥೆಗಳ ಕಾಯ್ದೆ ಅಡಿಯಲ್ಲಿ ನಿರ್ಧಾರಿತವಾಗುತ್ತಿವೆ.

## ಎಎಪಿಗೆ ಗೆಲುವು: ಕೇಜ್ರಿ

ಗಳಿಸಿತು. ಬಿಜೆಪಿ ಕ್ರಮವಾಗಿ ಮೂರು ಮತ್ತು ಎಂಟು ಸ್ಥಾನಗಳನ್ನು ಮಾತ್ರ ಗಳಿಸಿತು, ಆದರೆ ಕಾಂಗ್ರೆಸ್ ಎರಡೂ ಬಾರಿ ಶೂನ್ಯ ಸ್ಥಾನಗಳನ್ನು ಗಳಿಸಿತು. ಈ ಬಾರಿಯ ಚುನಾವಣೆ ಪ್ರತಿಷ್ಠೆಯಾಗಿದ್ದು, ಸ್ಪರ್ಧಾತ್ಮಕವಾಗಿ ರೂಪುಗೊಳ್ಳುತ್ತಿದೆ, ಬಿಜೆಪಿ ಎಎಪಿಯ ಪರಂಪರೆಯನ್ನು ಮುರಿಯುವ ವಿಶ್ವಾಸ ಹೊಂದಿದ್ದು, ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರಲು ಆಕ್ರಮಣಕಾರಿ ಪ್ರಯತ್ನ ನಡೆಸುತ್ತಿದೆ.

## ಸೋಲಂಕಿ ನಿಧನ

ಮೂಲಗಳು ತಿಳಿಸಿವೆ. ಮೆಹ್ಸಾನಾ ಜಿಲ್ಲೆಯ ಕಡಿ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದ ಸೋಲಂಕಿ ಅವರು ಅಹಮದಾಬಾದ್‌ನ ಆಸ್ಪತ್ರೆಯಲ್ಲಿ ಪುಟ 2

ಕೊನೆಯುಸಿರೆಳೆದಿದ್ದಾರೆ .ಬಳಿಕ ಅವರ ಹುಟ್ಟೂರಾದ ಕಡಿ ತಾಲೂಕಿನ ನಾಗರಸನ್‌ಗೆ ತರಲಾಗಿ ಅಂತಿಮ ದರ್ಶನ ವ್ಯವಸ್ಥೆ ನಂತರ ಅಂತ್ಯ ಸಂಸ್ಕಾರ ನೆರವೇರಲಿದೆ.
2017 ಮತ್ತು 2022ರಲ್ಲಿ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಮೀಸಲಾದ ಕಡಿ ವಿಧಾನಸಭಾ ಕ್ಷೇತ್ರದಿಂದ ಸೋಲಂಕಿ ಮೊದಲ ಭಾರಿಗೆ ಗೆಲುವು ಸಾಧಿಸಿದ್ದರು.ನಂತರ ಮರುಆಯ್ಕೆಗೊಂಡಿದ್ದರು.
ಸರಳ ಮತ್ತು ಸೌಮ್ಯ ಸ್ವಭಾವಕ್ಕಾಗಿ ಅವರು ಸದಾ ಸರಣೀಯರು.
ದೇವರು ಅವರ ಆತ್ಮಕ್ಕೆ ಶಾಂತಿ ನೀಡಲಿ ಮತ್ತು ಅವರ ಕುಟುಂಬ ಮತ್ತು ಬೆಂಬಲಿಗರಿಗೆ ಈ ನೋವನ್ನು ಭರಿಸುವ ಶಕ್ತಿ ನೀಡಲಿ ಎಂದು ಗುಜರಾತ್ ಸಿಎಂ ಸೇರಿದಂತೆ ಸಚಿವರು ,ಶಾಸಕರು,ಪಕ್ಷದ ಮುಖಂಡರು ಕಡಿ ಶಾಸಕ ಕರ್ಷಣಭಾಯ್ ಸೋಲಂಕಿ ಅವರ ನಿಧನಕ್ಕೆ ಸಂತಾಪ ವ್ಯಕ್ತಪಡಿಸಿದ್ದಾರೆ.

## ೩ ಉಗ್ರರ ಬಂಧನ

ಗ್ರೆನೇಡ್‌ಗಳು ಮತ್ತು ಮೂರು ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ನಿಷೇಧಿತ ಕಂಗ್ಲೇಪಕ್ ಕಮ್ಯುನಿಸ್ಟ್ ಪಾರ್ಟಿ (ಎಂಸಿ) ಪ್ರಗತಿಪರ ಪುಟ 2
ಸದಸ್ಯನನ್ನು ಇಂಫಾಲ್ ಪಶ್ಚಿಮ ಜಿಲ್ಲೆಯ ಸಿಂಗ್ಜಮೇಯಿ ತೋಕ್ಚೋಮ್ ಲೈಕೈಯಲ್ಲಿ ಬಂಧಿಸಲಾಗಿದೆ. ಈತ ಸುಲಿಗೆ ಚಟುವಟಿಕೆಯಲ್ಲಿ ಭಾಗಿಯಾಗಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.
ಇದೇ ಆರೋಪದ ಮೇರೆಗೆ ಯುನೈಟೆಡ್ ಪೀಪಲ್ಸ್ ಪಾರ್ಟಿ ಆಫ್ ಕಂಗ್ಲೀಪಾಕ್ (ಯುಪಿಪಿಕೆ) ಸದಸ್ಯನನ್ನು ಕಾಕ್ಚಿಂಗ್ ಜಿಲ್ಲೆಯ ಇರೆಂಗ್‌ಬಂಡ್ ಹವ್ರೆರೌ ಪ್ರದೇಶದಲ್ಲಿ ಬಂಧಿಸಲಾಗಿದೆ. ಪ್ರೆಪಾಕ್ (ಪ್ರೊ)ದ ಸದಸ್ಯನನ್ನು ಬಲ್ ಜಿಲ್ಲೆಯ ಯೈರಿಪೋಕ್ ಬಜಾರ್‌ನಿಂದ ಅರೆಸ್ಟ್ ಮಾಡಲಾಗಿದೆ. ಕಾಕ್ಚಿಂಗ್ ಜಿಲ್ಲೆಯ ವಬಗೈ ಬಜಾರ್ ಪ್ರದೇಶದಲ್ಲಿ ನಿಷೇಧಿತ ಕಂಗ್ಲೇ ಯಾವೋಲ್ ಕನ್ನಾ ಲುಪ್‌ನ ಸಕ್ರಿಯ ಕಾರ್ಯಕರ್ತನನ್ನು ಭದ್ರತಾ ಪಡೆಗಳು ವಶಕ್ಕೆ ಪಡೆದಿವೆ ಎಂದು ಪೊಲೀಸರು ಮಾಹಿತಿ ನೀಡಿದರು.

## ಫೆ.೩ರಂದು ಕುಂಭ ಮೇಳಕ್ಕೆ ಡಿಕೆಶಿ

ಮೇಳಕ್ಕೆ ದಿನದಿಂದ ದಿನಕ್ಕೆ ಜನಸಾಗರವೇ ಹರಿದು ಬರುತ್ತಿದೆ. ದೇಶದ ವಿವಿಧ ಕಡೆಯಿಂದ ಭಕ್ತರು ಆಗಮಿಸುತ್ತಿದ್ದು, ಇದೀಗ ಡಿಕೆ ಶಿವಕುಮಾರ್ ಕುಂಭ ಮೇಳದಲ್ಲಿ ಭಾಗವಹಿಸಲು ಸಜ್ಜಾಗಿದ್ದಾರೆ. ಡಿಕೆಶಿ ಕುಟುಂಬ ಸಮೇತರಾಗಿ ಕುಂಭ ಮೇಳದಲ್ಲಿ ಭಾಗಿಯಾಗಲಿದ್ದಾರೆ. ಈ ಹಿಂದೆ ಉತ್ತರ ಪ್ರದೇಶದ ಮಂತ್ರಿಗಳು ನನಗೆ ಬಹಳಷ್ಟು ಆತ್ಮೀಯರಿದ್ದು, ಆಮಂತ್ರಣ ನೀಡಿದ್ದಾರೆ. ಹೀಗಾಗಿ ಕುಟುಂಬ ಸಮೇತರಾಗಿ ಭೇಟಿ ನೀಡುವುದಾಗಿ ಡಿಕೆಶಿ ಹೇಳಿದ್ದರು.

## ದರೋಡೆಕೋರರಿಗೆ ಗುಂಡೇಟು

ಅದರಂತೆ ಸೋಮವಾರ ತಡರಾತ್ರಿ ದಡೋರೆಗೆ ಯತ್ನಿಸಿ ಅನುಮಾನಾಸ್ಪದವಾಗಿ ಬೈಕ್ ಮೇಲೆ ವೇಗವಾಗಿ ಹೋಗುತ್ತಿದ್ದವರ ತಪಾಸಣೆಗೆ ಮುಂದಾಗಿದ್ದರು.

ಈ ವೇಳೆ ಪೊಲೀಸರ ಮೇಲೆ ಹಲ್ಲೆ ನಡೆಸಿ ದುಷ್ಕರ್ಮಿಗಳು ಎಸ್ಕೇಪ್ ಆಗಲು ಯತ್ನಿಸಿದ್ದರು. ಆಗ ಪೊಲೀಸರು ನಾಲ್ಕು ಸುತ್ತು ಗುಂಡು ಹಾರಿಸಿದ್ದಾರೆ. ಇಬ್ಬರು ಆರೋಪಿಗಳಿಗೆ ತಲಾ ಒಂದು ಗುಂಡು ತಾಗಿದೆ. ಇತರೆ ಮೂವರು ಆರೋಪಿಗಳು ಪರಾರಿಯಾಗಿದ್ದಾರೆ.

## 10 ವರ್ಷ ಜೈಲುಶಿಕ್ಷೆ

ಪರಿಶೀಲಿಸಿ ಅಂಕಿತ ಹಾಕುವ ಸಾಧ್ಯತೆ ಇದೆ. ಮೈಕ್ರೋ ಫೈನಾನ್ಸ್ ಕಿರುಕುಳ ತಪ್ಪಿಸಲು ಸುಗ್ರೀವಾಜ್ಞೆಯಲ್ಲಿ ಈ ಹಿಂದೆ ಶಿಕ್ಷೆಯನ್ನು ಮೂರು ವರ್ಷ ಬದಲು 10 ವರ್ಷಕ್ಕೆ ಏರಿಕೆ ಮಾಡಿದ್ದೇವೆ. ದಂಡದ ಮತವನ್ನು ಪುಟ 2 5 ಲಕ್ಷ ರೂಪಾಯಿಗೆ ಹೆಚ್ಚಿಸಿದ್ದೇವೆ. ಬಿಲ್ ಅನ್ನು ರಾಜ್ಯಪಾಲರಿಗೆ ಕಳುಹಿಸಿದ್ದೇವೆ. ಇವತ್ತು ಪರಿಶೀಲಿಸಿ ರಾಜಪಾಲರು ಅಂಕಿತ ಹಾಕಬಹುದು ಎಂದರು.
ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಹಿಜಾಬ್ ಬಳಕೆಗೆ ಅವಕಾಶ ನೀಡುವ ಕುರಿತು ಪ್ರತಿಕ್ರಿಯಿಸಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಹಿಜಾಬ್ ಗೆ ಅವಕಾಶ ನೀಡುವ ವಿಚಾರಕ್ಕೆ ಸಂಬಂಧಿಸಿದಂತೆ ಸುಧೀರ್ಘವಾಗಿ ಚರ್ಚೆ ಮಾಡುತ್ತೇವೆ. ಇನ್ನು ಒಂದು ತಿಂಗಳು ಸಮಯವಿದೆ ನೋಡೋಣ ಚರ್ಚೆ ಮಾಡುತ್ತೇವೆ ಎಂದರು.

# ರಾಷ್ಟ್ರಪತಿಗಳ ಭಾಷಣದ ಮೇಲಿನ ಚರ್ಚೆ, ಸಂಜೆ ಪ್ರಧಾನಿ ಮೋದಿ ಉತ್ತರ

**ನವದೆಹಲಿ:** ಸಂಸತ್‌ನ ಬಜೆಟ್ ಅಧಿವೇಶನದ ನಾಲ್ಕನೇಯ ದಿನವಾದ ಇಂದು ಲೋಕಸಭೆಯಲ್ಲಿ ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲೆ ಪ್ರಧಾನಿ ನರೇಂದ್ರ ಮೋದಿ ಅವರು ಮಾತನಾಡಲಿದ್ದಾರೆ.

ಮೂರನೇಯ ದಿನದಂದು ಅಂದರೆ ನಿನ್ನೆ ರಾಜ್ಯಸಭೆಯಲ್ಲಿ ವಿಪಕ್ಷ ನಾಯಕ ರಾಹುಲ್ ಗಾಂಧಿ ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲೆ ಮಾತನಾಡಿದ್ದರು. ಈ ವೇಳೆ ಅವರು ಎನ್‌ಡಿಎ ನೇತೃತ್ವದ ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದರು.

ಮೋದಿ ನೇತೃತ್ವದ ಸರ್ಕಾರ ಮೇಕ್ ಇನ್ ಇಂಡಿಯಾ ಯೋಜನೆಯನ್ನೇನೋ ತಂದಿದೆ. ಇದರ ಉದ್ದೇಶವೂ ಸರಿಯಿದೆ, ಆದರೆ ಗುರಿ ಮುಟ್ಟಲು ಸರ್ಕಾರ ವಿಫಲವಾಗಿದೆ ಎಂದು ಅವರು ಹೇಳಿದ್ದಾರೆ.

2014ರಲ್ಲಿ 15.3ರಷ್ಟು ಇದ್ದ ಜಿಡಿಪಿಯಲ್ಲಿ ಉತ್ಪಾದನೆಯ ಪಾಲು ಇದೀಗ ಶೇ 12.6ಕ್ಕೆ ಇಳಿಕೆ ಕಂಡಿದೆ. ಕಳೆದ 60 ವರ್ಷಗಳಲ್ಲಿ ಇದು ಕಡಿಮೆಯಾಗುತ್ತಲೇ ಸಾಗಿದೆ. ಇದೇ ವೇಳೆ ಜಾತಿ ಗಣತಿ ದತ್ತಾಂಶಕ್ಕೆ ಕೃತಕ ಬುದ್ಧಿಮತ್ತೆ (ಎಐ) ಅಳವಡಿಸುವುದರಿಂದ ಪ್ರಯೋಜನವಾಗಲಿದೆ ಎಂದು ಸಲಹೆ ನೀಡಿದರು. ರಾಹುಲ್ ಕ್ಷಮೆಯಾಚನೆಗೆ ಒತ್ತಾಯಿಸಿದ ಸಂಸದೀಯ ವ್ಯವಹಾರಗಳ ಸಚಿವ: ರಾಹುಲ್ ಗಾಂಧಿ ಭಾಷಣದ ಬೆನ್ನಲ್ಲೇ ಮಾತನಾಡಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು,



ರಾಹುಲ್ ಗಾಂಧಿ ಕ್ಷಮೆಯಾಚಿಸುವಂತೆ ಆಗ್ರಹಿಸಿದರು. ತಮ್ಮ ಆರೋಪಗಳನ್ನು ಸಾಬೀತು ಪಡಿಸಲು, ಅದಕ್ಕೆ ಅಗತ್ಯ ದಾಖಲೆಗಳನ್ನು ಒದಗಿಸುವಂತೆ ಸ್ವೀಕರು ನಾಲ್ಕು ಮನವಿ ಮಾಡಿದರು. ಆದರೆ, ರಾಹುಲ್ ಗಾಂಧಿ ಅವರು ಯಾವುದೇ ಅಗತ್ಯ ಪುರಾವೆಗಳನ್ನು ನೀಡದ ಅವರು ಭಾಷಣ ಮಾಡಿ ತೆರಳಿದರು ಎಂದು ಆಕ್ರೋಶ ವ್ಯಕ್ತಪಡಿಸಿದರು. ವಿಪಕ್ಷ ನಾಯಕನ ಸ್ಥಾನ ಎಂಬುದು ಜವಾಬ್ದಾರಿಯುತ ಸ್ಥಾನವಾಗಿದ್ದು, ಅವರು ಯೋಚಿಸದೇ ತಮ್ಮ ಹೇಳಿಕೆಯನ್ನು ನೀಡಬಾರದು. ರಾಹುಲ್ ಗಾಂಧಿ ಅವರ ಹೇಳಿಕೆಗಳು ಹಗುರವಾಗಿದ್ದವು. ಅವರು ತಮ್ಮ ಹೇಳಿಕೆಗಳನ್ನು ದೃಢೀಕರಿಸಬೇಕು, ಇಲ್ಲದಿದ್ದರೆ ಅಧ್ಯಕ್ಷರು ಅವರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಮೂರನೇ ದಿನದ ಬಜೆಟ್ ಅಧಿವೇಶನದಲ್ಲಿ ಮಹಾ ಕುಂಭ ಮೇಳ ಕಾಲ್ತುಳಿತ ವಿಚಾರವನ್ನು ಪ್ರಸ್ತಾಪಿಸಿ ಚರ್ಚೆಗೆ ವಿಪಕ್ಷಗಳು ಪಟ್ಟು ಹಿಡಿದವು. ಈ ಬೆನ್ನಲ್ಲೇ ಗದ್ದಲ ಏರ್ಪಟ್ಟವು. ಅನೇಕ ಸಂಸದರು ಸದನದಿಂದ ಹೊರ ನಡೆದರು. ಜನವರಿ 31ರಿಂದ ಸಂಸತ್‌ನ ಬಜೆಟ್ ಅಧಿವೇಶನ ಆರಂಭವಾಗಿದ್ದು, ಮೊದಲ ದಿನದಂದು ಜಂಟಿ ಸದನ ಉದ್ದೇಶಿಸಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಷಣ ಮಾಡಿದ್ದರು. ಫೆ. 1ರಂದು ಕೇಂದ್ರ ಬಜೆಟ್ ಮಂಡನೆ ಮಾಡಲಾಗಿತ್ತು. ಸೋಮವಾರದಿಂದ 3 ಬಜೆಟ್ ಮೇಲಿನ ವಂದನಾ ನಿರ್ಣಯ ಸಾಗಿದೆ. ಮೊದಲ ಹಂತದ ಬಜೆಟ್ ಅಧಿವೇಶನ ಫೆ. 13ಕ್ಕೆ ಮುಕ್ತಾಯಗೊಳ್ಳಲಿದ್ದು, ಮಾರ್ಚ್ 10 ರಿಂದ ಬಜೆಟ್ ಅಧಿವೇಶನದ 2ನೇ ಹಂತದ ಕಲಾಪಗಳು ಆರಂಭಗೊಳ್ಳಲಿವೆ. ಏಪ್ರಿಲ್ 4ಕ್ಕೆ ಅಧಿವೇಶನ ಮುಕ್ತಯವಾಗಲಿದೆ.

# ದೆಹಲಿ ಚುನಾವಣೆಗೂ ಮುನ್ನವೇ ಸಿಎಂ ಅತಿಶಿ ಮೇಲೆ ಬಿತ್ತು ಕೇಸ್

**ದೆಹಲಿ:** ಚುನಾವಣೆಗೂ ಮುನ್ನ ಮುಖ್ಯಮಂತ್ರಿ ಅತಿಶಿ ವಿರುದ್ಧ ಪ್ರಕರಣ ದಾಖಲಾಗಿದೆ. ಅತಿಶಿ ವಿರುದ್ಧ ಬಿಎನ್‌ಎಸ್ ಸೆಕ್ಷನ್ 188 ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸಿದ ಆರೋಪದ ಮೇಲೆ ಅತಿಶಿ ಮತ್ತು ಅವರ ಬೆಂಬಲಿಗರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ವಿಡಿಯೋದಲ್ಲಿ, ಅತಿಶಿ ಅವರ ಬೆಂಬಲಿಗ ಸಾಗರ್ ಮೆಹ್ತಾ ಪೊಲೀಸ್ ಅಧಿಕಾರಿಯೊಬ್ಬರಿಗೆ ಕಪಾಳಮೋಕ್ಷ ಮಾಡುತ್ತಿರುವುದು ಕಂಡುಬಂದಿದೆ.

ದೆಹಲಿ ವಿಧಾನಸಭಾ ಚುನಾವಣಾ ಪ್ರಚಾರ ಸೋಮವಾರಕ್ಕೆ ಕೊನೆಗೊಂಡಿತ್ತು. ಆದರೆ ತಡರಾತ್ರಿಯವರೆಗೂ ಪಕ್ಷದ ಕಾರ್ಯಕರ್ತರು ಅನೇಕ ಸ್ಥಳಗಳಲ್ಲಿ ಪ್ರಚಾರ ನಡೆಸುತ್ತಿದ್ದರು. ಇದರಿಂದಾಗಿ ಹಲವೆಡೆ ಅವ್ಯವಸ್ಥೆ ಉಂಟಾಯಿತು.

ಗೋವಿಂದಪುರಿ ಪೊಲೀಸ್ ಠಾಣೆಯ ಪೊಲೀಸರು ಅತಿಶಿ ವಿರುದ್ಧ ನೀತಿ ಸಂಹಿತೆ ಉಲ್ಲಂಘಿಸಿದ್ದಕ್ಕಾಗಿ ಎಫ್‌ಐಆರ್ ದಾಖಲಿಸಿದ್ದಾರೆ.

ಮಂಗಳವಾರ ಬೆಳಗಿನ ಜಾವ 1 ಗಂಟೆ ಸುಮಾರಿಗೆ ಗೋವಿಂದಪುರಿ ಪೊಲೀಸ್ ಠಾಣೆಯ ಹೆಡ್ ಕಾನ್‌ಸ್ಟೆಬಲ್ ಅವರನ್ನು ತಡೆದು ಹಲ್ಲೆ ಮಾಡಿದ ಆರೋಪದ ಮೇಲೆ ಆಡಳಿತಾರೂಢ ಎಎಪಿಯ ಇಬ್ಬರು ಸದಸ್ಯರಾದ ಅಶ್ಮಿತ್ ಮತ್ತು ಸಾಗರ್ ಮೆಹ್ತಾ ಅವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಕಲ್ಕಾಜಿಯ ಎಎಪಿ ಅಭ್ಯರ್ಥಿ ಅತಿಶಿ, ತಮ್ಮ ಪ್ರತಿಸ್ಪರ್ಧಿ ಬಿಜೆಪಿಯ ರಮೇಶ್ ಬಿಧುರಿ ವಿರುದ್ಧ ನೀತಿ ಸಂಹಿತೆಯನ್ನು ಬಹಿರಂಗವಾಗಿ ಉಲ್ಲಂಘಿಸಿ ಮಾತನಾಡಿದ್ದಕ್ಕಾಗಿ ದೆಹಲಿ ಪೊಲೀಸರನ್ನು ಶಿಕ್ಷಿಸಲಾಗುತ್ತಿದೆ ಎಂದು ಆರೋಪಿಸಿದ್ದಾರೆ. ಗೂಂಡಾಗಿರಿ ಬಹಿರಂಗವಾಗಿ ನಡೆಯುತ್ತಿದೆ.

ಇದರ ವಿರುದ್ಧ ದೂರು ನೀಡಿದ್ದಕ್ಕಾಗಿ ಚುನಾವಣಾ ಆಯೋಗವು ದೆಹಲಿ ಮುಖ್ಯಮಂತ್ರಿಯ ವಿರುದ್ಧ ಪೊಲೀಸ್ ಪ್ರಕರಣ ದಾಖಲಿಸಿದೆ ಎಂದು ಅರವಿಂದ್ ಕೇಜ್ರಿವಾಲ್ ಹೇಳಿದ್ದಾರೆ.

ಈಗ ಇದು ದೆಹಲಿ ಪೊಲೀಸರು ಮತ್ತು ಚುನಾವಣಾ ಆಯೋಗದ ಅಧಿಕೃತ ನಿಲುವು. ದೆಹಲಿ ಪೊಲೀಸರು ಮತ್ತು ಚುನಾವಣಾ ಆಯೋಗದ ಕೆಲಸವೆಂದರೆ ಆಮ್ ಆದ್ಮಿ ಪಕ್ಷದ ವಿರುದ್ಧ ಗೂಂಡಾಗಿರಿ ಮಾಡುವುದು, ಬಿಜೆಪಿಯ ಗೂಂಡಾಗಿರಿಯನ್ನು ರಕ್ಷಿಸುವುದು ಮತ್ತು ಮದ್ಯ, ಹಣ ಮತ್ತು ಸರಕುಗಳನ್ನು ವಿತರಿಸುವುದು. ಯಾರಾದರೂ ಅವರನ್ನು ತಡೆದರೆ, ಪೊಲೀಸರು ಮತ್ತು ಚುನಾವಣಾ ಆಯೋಗದ ಕೆಲಸಕ್ಕೆ ಅಡ್ಡಿಪಡಿಸಿದ್ದಕ್ಕಾಗಿ ಅವರ ವಿರುದ್ಧ ಪ್ರಕರಣ ದಾಖಲಿಸಲಾಗುವುದು ಎಂದು ಕೇಜ್ರಿವಾಲ್ ಹೇಳಿದ್ದಾರೆ.

ಫೆಬ್ರವರಿ 4 ರ ರಾತ್ರಿ ಫತೇ ಸಿಂಗ್ ಮಾರ್ಗದಲ್ಲಿ ಅತಿಶಿ ಅನೇಕ ಜನರು ಮತ್ತು ವಾಹನಗಳೊಂದಿಗೆ ಹಾಜರಿದ್ದರು ಎಂದು ದೆಹಲಿ ಪೊಲೀಸ್ ಡಿಸಿಪಿ ತಿಳಿಸಿದ್ದಾರೆ. ಪೊಲೀಸರ ಪ್ರಕಾರ, ಆತನೊಂದಿಗೆ 50 ರಿಂದ 70 ಜನರು ಮತ್ತು ಸುಮಾರು 10 ವಾಹನಗಳು ಇದ್ದವು. ಇದು ನೀತಿ ಸಂಹಿತೆಯ ಉಲ್ಲಂಘನೆಯಾಗಿದೆ. ಫ್ಲೈಯಿಂಗ್ ಸ್ಕ್ವಾಡ್ ತಂಡದ ದೂರಿನ ಮೇರೆಗೆ ಗೋವಿಂದಪುರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಬಿಎನ್‌ಎಸ್‌ನ ಸೆಕ್ಷನ್ 223 ಮತ್ತು ಆರ್‌ಪಿ ಕಾಯ್ದೆಯ ಸೆಕ್ಷನ್ 126 ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ದೆಹಲಿ ವಿಧಾನಸಭಾ ಚುನಾವಣೆಗೆ ಫೆಬ್ರವರಿ 5 ರಂದು ಮತದಾನ ನಡೆಯಲಿದ್ದು, ಫೆಬ್ರವರಿ 8 ರಂದು ಫಲಿತಾಂಶ ಪ್ರಕಟವಾಗಲಿದೆ. ದೆಹಲಿ ವಿಧಾನಸಭೆಯಲ್ಲಿ ಒಟ್ಟು 70 ಸ್ಥಾನಗಳಿದ್ದು, ಯಾವುದೇ ಪಕ್ಷಕ್ಕೆ ಕನಿಷ್ಠ 36 ಸ್ಥಾನಗಳು ಬೇಕಾಗುತ್ತವೆ.

ಸರ್ಕಾರ. ಪ್ರಸ್ತುತ, ಆಮ್ ಆದ್ಮಿ ಪಕ್ಷ (ಎಎಪಿ) ಅಧಿಕಾರದಲ್ಲಿದೆ ಆದರೆ ಭಾರತೀಯ ಜನತಾ ಪಕ್ಷ (ಬಿಜೆಪಿ) ಮತ್ತು ಕಾಂಗ್ರೆಸ್ ಮುಂಬರುವ ಚುನಾವಣೆಯಲ್ಲಿ ತಮ್ಮ ಸ್ಥಾನವನ್ನು ಬಲಪಡಿಸಲು ಪ್ರಯತ್ನಿಸುತ್ತಿವೆ.

## ಶಾಸಕ ಬಸವರಾಜ ಹುಟ್ಟುಹಬ್ಬ ಆಚರಣೆ



**ಕೆ.ಆರ್.ಪುರ,** ಕೆ.ಆರ್.ಪುರ ಕ್ಷೇತ್ರದ ಶಾಸಕ ಬಿ.ಎ.ಬಸವರಾಜ ಅವರ ಹುಟ್ಟುಹಬ್ಬವನ್ನು ಸಮಾಜಮುಖಿ ಕಾರ್ಯಗಳ ಮೂಲಕ ಸರಳವಾಗಿ ಆಚರಣೆ ಮಾಡಲಾಯಿತು.
ಹುಟ್ಟುಹಬ್ಬದ ಅಂಗವಾಗಿ ರಕ್ತದಾನ ಸಹ ಏರ್ಪಡಿಸಲಾಗಿದ್ದು,ನೂರಕ್ಕು ಹೆಚ್ಚು ಮಂದಿ ರಕ್ತದಾನ ಮಾಡಿದರು.
ಈ ಸಂದರ್ಭದಲ್ಲಿ ಹೊರಮಾವು ವಿಡಿಎಸ್ ಪ್ರದೀಪ್ ನೇತೃತ್ವದಲ್ಲಿ 500 ಕೆಜಿ ತೂಕದ ಮೆಟ್ರೋ ರೈಲು ಮಾದರಿಯ ಕೇಕ್ ಗಮನ ಸೆಳೆಯಿತು.
ಕ್ಷೇತ್ರದ ಸಾವಿರಾರು ಮಂದಿ ನಮ್ಮ ನೆಚ್ಚಿನ ನಾಯಕನಿಗೆ ಶುಭಾಶಯ ಕೋರಿದರು.
ಹುಟ್ಟುಹಬ್ಬದ ಆಚರಣೆ ಮಾಡಿಕೊಂಡು ಮಾತನಾಡಿದ ಶಾಸಕ ಬಿ.ಎ.ಬಸವರಾಜ ಅವರು ನಿಮ್ಮ ಪ್ರೀತಿ ಅಭಿಮಾನಕ್ಕೆ ಚಿರಋಣಿ ಎಂದು ತಿಳಿಸಿದರು.
ಕ್ಷೇತ್ರದ ಎಸ್ .ಸಿ.ಮೋರ್ಚಾ ಅಧ್ಯಕ್ಷ ಸಂಪತ್ ಹಾಗೂ ದುಶ್ಯಂತ್ ರಾಜ್ ಅವರು ಅಫೆಲ್ ಹಾರ ಹಾಕಿ ಶುಭಾಶಯ ಕೋರಿದರು.
ಈ ಸಂದರ್ಭದಲ್ಲಿ ಕ್ಷೇತ್ರದ ಮುನೇಗೌಡ,ಮಾಜಿ ಪಾಲಿಕೆ ಸದಸ್ಯ ಜಯಪ್ರಕಾಶ್, ಅಂತೋಣಿ ಸ್ವಾಮಿ, ಶ್ರೀಕಾಂತ್, ಹೊರಮಾವು ರಾಮಚಂದ್ರಪ್ಪ, ವಿಡಿಎಸ್ ಪ್ರದೀಪ್,ಪ್ರದೀಪ್ ಗೌಡ,ಸಂಪತ್ ಕುಮಾರ್,ಇಟಾಚಿ ಮಂಜುನಾಥ,ಶ್ರೀರಾಮ್ , ಸೇರಿದಂತೆ ಹಲವಾರು ಇದ್ದರು.

## ರಾಜ್‌ಘಾಟ್‌ನಲ್ಲಿ ಪ್ರಣಬ್ ಮುಖರ್ಜಿ ಸ್ಮಾರಕದ ಬಳಿ ಮನಮೋಹನ್ ಸಿಂಗ್ ಸ್ಮಾರಕ ನಿರ್ಮಾಣಕ್ಕೆ ಕೇಂದ್ರ ಚಿಂತನೆ

ರಾಜ್‌ಘಾಟ್‌ನಲ್ಲಿ ಮಾಜಿ ರಾಷ್ಟ್ರಪತಿ ಪ್ರಣಬ್ ಮುಖರ್ಜಿ ಅವರ ಸ್ಮಾರಕದ ಬಳಿಯೇ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಸ್ಮಾರಕ ನಿರ್ಮಿಸಲು ಕೇಂದ್ರ ಸರ್ಕಾರ ಚಿಂತನೆ ನಡೆಸುತ್ತಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಮನಮೋಹನ್ ಸಿಂಗ್ ಅವರ ಸ್ಮಾರಕಕ್ಕಾಗಿ ರಾಜ್‌ಘಾಟ್ ಸಂಕೀರ್ಣದಲ್ಲಿ ಸ್ಥಳಾವಕಾಶ ನೀಡಲಾಗಿದೆ. ಹಂಚಿಕೆಯಾಗಲಿರುವ ಜಾಗದೊಂದಿಗೆ, ಸರ್ಕಾರವು ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಸ್ಮಾರಕವನ್ನು ಸ್ಥಾಪಿಸುವ ಅಂತಿಮ ಹಂತದಲ್ಲಿದೆ.

ಕುಟುಂಬವು ಟ್ರಸ್ಟ್ ಸ್ಥಾಪಿಸುವವರೆಗೆ ಕೇಂದ್ರವು ಕಾಯುತ್ತಿದೆ, ನಂತರ ಸ್ಮಾರಕಕ್ಕಾಗಿ ಜಾಗವನ್ನು ಹಂಚಿಕೆ ಮಾಡಲಾಗುತ್ತದೆ. ಸ್ಮಾರಕ ನಿರ್ಮಾಣಕ್ಕಾಗಿ ಸರ್ಕಾರವು ಟ್ರಸ್ಟ್‌ಗೆ 25 ಲಕ್ಷ ರೂ.ಗಳನ್ನು ದೇಣಿಗೆ ನೀಡಲಿದೆ ಎಂದು ಅವರು ಹೇಳಿದರು.

ಹೊಸ ನೀತಿಯಡಿಯಲ್ಲಿ, ಸ್ಮಾರಕ ಭೂಮಿಯನ್ನು ಟ್ರಸ್ಟ್‌ಗೆ ಮಾತ್ರ ಹಂಚಿಕೆ ಮಾಡಬಹುದು, ಸ್ಟ್ ಸ್ಥಾಪನೆಯಾದ ನಂತರ, ಅದು ಭೂ ಹಂಚಿಕೆಗೆ ಅರ್ಜಿ ಸಲ್ಲಿಸುತ್ತದೆ, ನಂತರ ನಿರ್ಮಾಣಕ್ಕಾಗಿ ಕೇಂದ್ರ ಲೋಕೋಪಯೋಗಿ ಇಲಾಖೆಯೊಂದಿಗೆ (ಅಕಘಅ) ಒಪ್ಪಂದಕ್ಕೆ ಸಹಿ ಹಾಕುತ್ತದೆ. ದೆಹಲಿಯ ರಾಜ್‌ಘಾಟ್ ಆವರಣದಲ್ಲಿರುವ ರಾಷ್ಟ್ರೀಯ ಸಮಿತಿ' ಸಂಕೀರ್ಣದೊಳಗೆ ಪ್ರಣಬ್ ಮುಖರ್ಜಿ ಅವರ ಸ್ಮಾರಕಕ್ಕಾಗಿ ಸರ್ಕಾರ



ಒಂದು ಸ್ಥಳವನ್ನು ಮಂಜೂರು ಮಾಡಿದೆ ಎಂದು ಅವರ ಪುತ್ರಿ ಶರ್ಮಿಷ್ಠಾ ಮುಖರ್ಜಿ ಕಳೆದ ತಿಂಗಳು ದೃಢಪಡಿಸಿದ್ದರು. ಕಳೆದ ತಿಂಗಳು, ಸರ್ಕಾರವು ಕುಟುಂಬಕ್ಕೆ ಸಂಭಾವ್ಯ ಸ್ಥಳಗಳನ್ನು ಸೂಚಿಸುವ ಮೂಲಕ ಸ್ಮಾರಕವನ್ನು ನಿರ್ಮಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಿತು.

ರಾಜ್‌ಘಾಟ್, ರಾಷ್ಟ್ರೀಯ ಸ್ಮೃತಿ ಸ್ಥಳ ಅಥವಾ ಕಿಸಾನ್ ಘಾಟ್ ಬಳಿ ಸುಮಾರು 1 ರಿಂದ 1.5 ಎಕರೆ ಭೂಮಿ ಸ್ಮಾರಕಕ್ಕಾಗಿ ಪ್ರಸ್ತಾಪಿಸಲಾದ ಸ್ಥಳಗಳಲ್ಲಿ ಸೇರಿವೆ ಎಂದು ಮೂಲಗಳು ತಿಳಿಸಿವೆ. 92 ವರ್ಷದ ನಾಯಕ ಡಿಸೆಂಬರ್ 26, 2024 ರಂದು ನಿಧನರಾದರು. ಪ್ರಣಬ್ ಮುಖರ್ಜಿ ಆಗಸ್ಟ್ 31, 2020ರಲ್ಲಿ ನಿಧನರಾಗಿದ್ದಾರೆ.

# ಗೋ ಹತ್ಯೆ; ಸರ್ಕಲ್‌ನಲ್ಲಿ ಗುಂಡು ಹಾರಿಸಬೇಕಾಗುತ್ತದೆ

ಕಾರವಾರ: ಹಾಲು ಕೊಡುವ ಗೋ ಹತ್ಯೆ ಮಾಡುವುದನ್ನು ಸಹಿಸಲು ಸಾಧ್ಯವಿಲ್ಲ. ಮುಂದೆ ಇಂತಹ ಘಟನೆಗಳು ಮುಂದುವರಿದಲ್ಲಿ ತಪ್ಪತಸ್ಥರಿಗೆ ಸರ್ಕಲ್‌ನಲ್ಲಿ ನಿಲ್ಲಿಸಿ ಗುಂಡು ಹಾರಿಸಬೇಕಾಗುತ್ತದೆ ಎಂದು ಸಚಿವ ಮಂಕಾಳ್ ವೈದ್ಯ ಎಚ್ಚರಿಕೆ ನೀಡಿದ್ದಾರೆ. ಕಾರವಾರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಉತ್ತರ ಕನ್ನಡ ಜಿಲ್ಲೆಯಲ್ಲಿ ಹಸು ಕಳ್ಳತನ ಹಲವು ವರ್ಷಗಳಿಂದ ನಡೆದುಬಂದಿದೆ. ಇಂತಹ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ಕ್ರಮ ಕೈಗೊಳ್ಳಲು ಪೊಲೀಸ್ ಇಲಾಖೆಗೆ ಸೂಚಿಸಲಾಗಿದೆ. ಈಗಾಗಲೇ ಹಲವು ಪ್ರಕರಣದಲ್ಲಿ ಆರೋಪಿಗಳನ್ನು ಕೂಡ ಬಂಧಿಸಲಾಗಿದೆ. ಇನ್ನೂ ಮೇಲೆಯೂ ಇಂತಹ ಘಟನೆಗಳು ಮರುಕಳಿಸಿದರೇ ನಾವು ಸಹಿಸಲು ಸಾಧ್ಯವಿಲ್ಲ ಎಂದು ಎಚ್ಚರಿಸಿದ್ದಾರೆ.
ಶಾಸಕರ ವಿರುದ್ಧ ಅಸಮಾಧಾನ: ಇನ್ನು ಶಾಸಕ ದಿನಕರ್ ಶೆಟ್ಟಿ ವಿರುದ್ಧ ಅಸಮಾಧಾನ ಹೊರಹಾಕಿದ ಸಚಿವರು, ಕುಮಟಾದಲ್ಲೂ ಗೋಹತ್ಯೆ ನಡೆದಿದೆ. ಹಾಗಂತಾ ದಿನಕರ ಶೆಟ್ಟಿ ಅವರು ದಿನಕರ ಖಾನ್ ಆಗಿಬಿಡ್ತಾರಾ? ಮಾತನಾಡುವಾಗ ನೋಡಿಕೊಂಡು ಮಾತನಾಡಬೇಕು. ಬಿಜೆಪಿ ಸರ್ಕಾರದ ಅವಧಿಯಲ್ಲಿಯೂ ಗೋಹತ್ಯೆಗಳು ನಡೆದಿವೆ. ಬಿಜೆಪಿ ಕೆಟ್ಟ ರಾಜಕಾರಣ ಮಾಡುವುದನ್ನು ಬಿಡಬೇಕು. ನಮ್ಮ ಸರ್ಕಾರದಲ್ಲಿ ಗೋಹತ್ಯೆ ಮಾಡಿದ ಆರೋಪಿಗಳ ಬಂಧನವಾಗಿದೆ. ನಾವು ಸುಮ್ಮನೆ ಕುಳಿತಿಲ್ಲ, ಕೆಲಸ ಮಾಡುತ್ತಿದ್ದೇವೆ. ಮುಖ್ಯಮಂತ್ರಿ, ಗೃಹ ಸಚಿವರು ಕ್ರಮ ಕೈಗೊಳ್ಳುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಅದರಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದರು.
ಟೀಕೆಗಳಿಗೆ ಉತ್ತರಕೊಟ್ಟ ಸಚಿವರು: ಯಲ್ಲಾಪುರ ಅಪಘಾತದಲ್ಲಿ 13 ಮಂದಿ ಸತ್ತರೂ ಸಚಿವರು ಬಂದಿಲ್ಲ ಎನ್ನುತ್ತಾರೆ. ನಾನು ಬೆಂಗಳೂರಿನಲ್ಲಿದ್ರೂ ನಮ್ಮ ಶಾಸಕರು ಬಂದಿದ್ದಾರೆ. ಅಧಿಕಾರಿಗಳು ಇದ್ದಾರೆ. ಹಾವೇರಿ ಶಾಸಕ ಯಾಸೀರ್ ಪಠಾಣ್ ಇಡೀ ದಿನ ಅಲ್ಲೇ ಇದ್ದರು. ಯಲ್ಲಾಪುರ ಶಾಸಕ ಶಿವರಾಮ ಹೆಬ್ಬಾರ್ ಅವರೂ ಕೂಡ ನಮ್ಮವರೇ, ಅವರು ಕೂಡ ಸ್ಥಳದಲ್ಲಿದ್ದರು.
ಆದರೆ, ಮಂಕಾಳು ವೈದ್ಯ ಕ್ಷೇತ್ರದಿಂದ ಕಾಣೆಯಾಗಿದ್ದಾರೆ ಎಂದು ಸುಮ್ಮನೆ ಹೇಳಬೇಡಿ. ಮಂಕಾಳು ವೈದ್ಯ ಎಲ್ಲಿಯೂ ಮಂಕಾಗುವುದಿಲ್ಲ. ಸಮಸ್ಯೆಗಳಿದ್ದರೆ



ಗಮನಕ್ಕೆ ತನ್ನಿ, ಕೆಲಸ ಮಾಡಿಕೊಡುತ್ತೇವೆ ಎಂದು ತಿರುಗೇಟು ನೀಡಿದರು.ಹೆದ್ದಾರಿ ಕಾಮಗಾರಿ ಸರಿಯಾಗಿ ನಡೆಯುತ್ತಿಲ್ಲ, ಸರಿ ಆಗಬೇಕು. ಈ ಬಗ್ಗೆ ಎಲ್ಲ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ್ದೇನೆ. ನಮ್ಮ ಸರ್ಕಾರದಲ್ಲಿ ಶಾಸಕರಿಗೂ ಸಚಿವರಷ್ಟೇ ಪವರ್ ಇದೆ. ಯಲ್ಲಾಪುರದ ಶಾಸಕ ಶಿವರಾಮ ಹೆಬ್ಬಾರ್ ಬಿಜೆಪಿಯಲ್ಲಿದ್ರೂ ಕಾಂಗ್ರೆಸ್ ಜೊತೆಗಿದ್ದಾರೆ. ನಮ್ಮ ಶಾಸಕರು ನನಗಿಂತ ಸಕ್ರಿಯರಾಗಿದ್ದಾರೆ. ಶಾಸಕರು ಎಲ್ಲವನ್ನೂ ನನ್ನ ಬಳಿಯೇ ಕೇಳಬೇಕೆಂದೇನಿಲ್ಲ. ನೇರವಾಗಿ ಸಿಎಂ ಬಳಿ ಹೋಗಿ ಶಾಸಕರು ಕೆಲಸ ಮಾಡಿಕೊಂಡು ಬರುತ್ತಾರೆ ಎಂದು ತಿಳಿಸಿದರು.

### ಸಾವನ್ನಪ್ಪಿದವರ ಸಂಖ್ಯೆಯನ್ನು ಸರ್ಕಾರ ಮರೆಮಾಡುತ್ತಿದೆ

**ನವದೆಹಲಿ:** ಕೇಂದ್ರ ಸರ್ಕಾರ ನಿರಂತರವಾಗಿ ಬಜೆಟ್ ಅಂಕಿ–ಅಂಶಗಳನ್ನು ನೀಡುತ್ತಿದೆ. ಆದರೆ, ದಯವಿಟ್ಟು ಅದೇ ರೀತಿ ಮಹಾಕುಂಭದಲ್ಲಿ ಸಾವನ್ನಪ್ಪಿದವರ ಅಂಕಿ–ಅಂಶಗಳನ್ನು ಸಹ ನೀಡಿ. ಮಹಾಕುಂಭದ ವ್ಯವಸ್ಥೆಗಳ ಬಗ್ಗೆ ಸ್ಪಷ್ಟೀಕರಣ ನೀಡಲು ಸರ್ವಪಕ್ಷ ಸಭೆ ಕರೆಯಬೇಕೆಂದು ನಾನು ಒತ್ತಾಯಿಸುತ್ತೇನೆ. ವಿಪತ್ತು ನಿರ್ವಹಣೆ ಮತ್ತು ಕಳೆದುಹೋದ ಮತ್ತು ಪತ್ತೆಯಾದ ಕೇಂದ್ರದ ಜವಾಬ್ದಾರಿಯನ್ನು ಸೇನೆಗೆ ನೀಡಬೇಕು. ದುರಂತದಲ್ಲಿ ಸಾವನ್ನಪ್ಪಿದವರ ಅಂಕಿಅಂಶಗಳು, ಗಾಯಾಳುಗಳ ಚಿಕಿತ್ಸೆ, ಔಷಧಿಗಳ ಲಭ್ಯತೆ ಬಗ್ಗೆ ಸಂಸತ್ತಿನಲ್ಲಿ ಮಂಡಿಸಬೇಕು. ಕಠಿಣ ಶಿಕ್ಷಾರ್ಹ ಕ್ರಮ ಕೈಗೊಳ್ಳಬೇಕು. ಸತ್ಯವನ್ನು ಮರೆ ಮಾಡಿದವರಿಗೆ ಶಿಕ್ಷೆಯಾಗಬೇಕು ಎಂದು ಸಂಸತ್ ಅಧಿವೇಶನದಲ್ಲಿ ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಹೇಳಿದ್ದಾರೆ.

ಮೊದಲ ಪುಟದಿಂದ

## ರಾಹುಲ್ ಗಾಂಧಿ ವಿರುದ್ಧ ಹಕ್ಕುಚ್ಯುತಿ; ಬಿಜೆಪಿ ಚಿಂತನೆ!

ಮೋದಿ ಮಾತ್ರ ಚೀನಾದ ಅತಿಕ್ರಮಣವನ್ನು ನಿರಂತರವಾಗಿ ನಿರಾಕರಿಸುತ್ತಲೇ ಬಂದಿದ್ದಾರೆ. ಪ್ರಧಾನಿ ಮೋದಿ ಅವರು ಚೀನಾ ಅತಿಕ್ರಮಣದ ಕುರಿತು ಈಗಲಾದರೂ ದೇಶಕ್ಕೆ ಸತ್ಯ ಹೇಳಬೇಕು.." ಎಂದು ರಾಹುಲ್ ಗಾಂಧಿ ತಮ್ಮ ಭಾಷಣದಲ್ಲಿ ಆಗ್ರಹಸಿದ್ದರು. ಮುಂದುವರೆದು, "ಮೇಕ್ ಇನ್ ಇಂಡಿಯಾ ಉಪಕ್ರಮದ ಮೂಲಕ ಉತ್ಪಾದನಾ ವಲಯವನ್ನು ಹೆಚ್ಚಿಸಲು ಮೋದಿ ಸರ್ಕಾರ ವಿಫಲವಾಗಿದೆ. ಇದು ಭಾರತದ ನೆಲದಲ್ಲಿ ಚೀನಾ ಸೈನಿಕರ ಉಪಸ್ಥಿತಿಗೆ ಕಾರಣವಾಗಿದೆ.." ಎಂದು ರಾಹುಲ್ ಗಾಂಧಿ ಲೋಕಸಭೆಯಲ್ಲಿ ಮಾಡಿದ ತಮ್ಮ ಸುದೀರ್ಘ ಭಾಷಣದಲ್ಲಿ ಆರೋಪಿಸಿದ್ದರು.

ಕೂಡಲೇ ಮಧ್ಯಪ್ರವೇಶಿಸಿ ಕೇಂದ್ರ ಕಾನೂನು ಸಚಿವ ಕಿರಣ್ ರಿಜಿಜು, ವಿಪಕ್ಷ ನಾಯಕ ಸದನಕ್ಕೆ ತಪ್ಪು ನಿರೂಪಣೆ ನೀಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. "ರಾಹುಲ್ ಗಾಂಧಿ ಅವರ ಸತ್ಯಕ್ಕೆ ದೂರವಾದ ಆರೋಪಗಳು ಸಂಸದೀಯ ಮಾನದಂಡಗಳನ್ನು ದುರ್ಬಲಗೊಳಿಸುತ್ತದೆ. ಸದನಕ್ಕೆ ತಪ್ಪು ಮಾಹಿತಿ ನೀಡುತ್ತಿರುವ ರಾಹುಲ್ ಗಾಂಧಿ ಅವರಿಂದ ಸೂಕ್ತ ಪುರಾವೆ ಕೇಳಬೇಖು ಎಂದು ಸ್ಪೀಕರ್ ಓಂ ಬಿರ್ಲಾ ಅವರಲ್ಲಿ ಮನವಿ ಮಾಡುತ್ತೇನೆ.." ಎಂದು ಕಿರಣ್ ರಿಜಿಜು ಆಗ್ರಹಿಸಿದರು. ಇನ್ನು ರಾಹುಲ್ ಗಾಂಧಿ ಅವರು ಲೋಕಸಭೆಯಲ್ಲಿ ಮಾಡಿದ ಭಾಷಣಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ಬಿಜೆಪಿ ಸಂಸದ ಪ್ರವೀಣ್ ಖಂಡೇಲ್ವಾಲ್ ಅವರು "ರಾಹುಲ್ ಗಾಂಧಿ ಓರ್ವ ಬುದ್ದಿಹೀನ ನಾಯಕ.." ಎಂದು ಹರಿಹಾಯ್ದಿದ್ದಾರೆ. "ರಾಹುಲ್ ಏನು ಹೇಳುತ್ತಿದ್ದಾರೆ ಎಂಬುದು ಅವರಿಗೇ ಗೊತ್ತಿರುವುದಿಲ್ಲ. ಅವರು ಮೇಕ್ ಇನ್ ಇಂಡಿಯಾ ವಿಫಲವಾಗಿದೆ ಎಂದು ಹೇಳಿರುವುದು ಅತ್ಯಂತ ಬೇಜವಾಬ್ದಾರಿ.." ಎಂದು ಪ್ರವೀಣ್ ಖಂಡೇಲ್ವಾಲ್ ಕಿಡಿಕಾರಿದ್ದಾರೆ.

ಇದೀಗ ಸದನಕ್ಕೆ ತಪ್ಪು ಮಾಹಿತಿ ನೀಡಿದ ಆರೋಪದ ಹಿನ್ನೆಲೆಯಲ್ಲಿ, ರಾಹುಲ್ ಗಾಂಧಿ ವಿರುದ್ಧ ಹಕ್ಕುಚ್ಯುತಿ ನೋಟೀಸ್ ನೀಡಲು ಬಿಜೆಪಿ ಚಿಂತಿಸುತ್ತಿದೆ. ಒಂದು ವೇಳೆ ಹಕ್ಕುಚ್ಯುತಿ ನೋಟೀಸ್ ಮಂಡನೆಯಾದರೆ, ರಾಹುಲ್ ಗಾಂಧಿ ಅವರು ತಮ್ಮ ಆರೋಪಗಳಿಗೆ ಪೂರಕವಾದ ಸೂಕ್ತ ದಾಖಲೆಗಳನ್ನು ಸ್ಪೀಕರ್ ಓಂ ಬಿರ್ಲಾ ಅವರಿಗೆ ಸಲ್ಲಿಸಬೇಕಾಗುತ್ತದೆ.

ಹಕ್ಕುಚ್ಯುತಿ ನೋಟೀಸ್ ಶಾಸಕಾಂಗದ ಒಂದು ಪ್ರಮುಖ ಸಾಧನವಾಗಿದ್ದು, ಸದಸ್ಯರು ತಮ್ಮ ಯಾವುದೇ ಹಕ್ಕುಗಳನ್ನು ದುರುಪಯೋಗಪಡಿಸಿಕೊಳ್ಳುವುದು ಅಥವಾ ಸದನದ ದಾರಿ ತಪ್ಪಿಸುವುದು ಕಂಡುಬಂದರೆ ಅವರ ವಿರುದ್ಧ ಇದನ್ನು ಬಳಸಬಹುದಾಗಿದೆ.

ಮುಸ್ಸಂಜೆ



# ಚಿಕ್ಕಬಳ್ಳಾಪುರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷರಾಗಿ ಎನ್.ರಮೇಶ್ ನೇಮಕ

**ವರದಿ: ಮುಬಷೀರ್ ಅಹಮದ್**

ಚಿಕ್ಕಬಳ್ಳಾಪುರ: ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷರಾಗಿ ಕಾಂಗ್ರೆಸ್ ಹಿರಿಯ ಮುಖಂಡ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಮಾಜಿ ಅಧ್ಯಕ್ಷ ಯಲವಹಳ್ಳಿ ಎನ್. ರಮೇಶ್ ನೇಮಕವಾಗಿದ್ದು ಸೋಮವಾರ ನಗರದ ಜಿಲ್ಲಾಡಳಿತ ಭವನದಲ್ಲಿ ತಮ್ಮ ನೂತನ ಕಚೇರಿಯಲ್ಲಿ ಪೂಜೆ ಸಲ್ಲಿಸಿ ಅಧಿಕಾರ ಸ್ವೀಕರಿಸಿದರು.




ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಎನ್. ರಮೇಶ್ ರಾಜ್ಯ ಕಾಂಗ್ರೆಸ್ ನುಡಿದಂತೆ ನಡೆಯುವ ಪಕ್ಷವಾಗಿದ್ದು ಚುನಾವಣೆಗೆ ಮೊದಲು ನೀಡಿದ್ದ ಭರವಸೆಯನ್ನು ಈಡೇರಿಸಿದೆ, ರಾಜ್ಯ ಕಾಂಗ್ರೆಸ್ ಸರ್ಕಾರದ ಐದು ಗ್ಯಾರಂಟಿಗಳು ಜನಸಾಮಾನ್ಯರ ಬದುಕು ಕಟ್ಟಿಕೊಳ್ಳಲು ಬಹಳಷ್ಟು ಸಹಕಾರಿಯಾಗಿದ್ದು, ಪ್ರಮುಖವಾಗಿ ಶಕ್ತಿ ಯೋಜನೆಯಡಿ ಮಹಿಳೆಯರಿಗೆ ದೂರದ ದೇವಸ್ಥಾನದ ಪ್ರಯಾಣಕ್ಕೆ ಅನುಕೂಲವಾಗಿದೆ, ಇನ್ನು ಗೃಹ ಲಕ್ಷ್ಮಿ ಯೋಜನೆಯಿಂದ ಬಹಳಷ್ಟು ಕುಟುಂಬಗಳ ಆರ್ಥಿಕ ಪರಿಸ್ಥಿತಿ ಸುಧಾರಿಸಿದೆ ಒಟ್ಟಾರೆಯಾಗಿ ಸರ್ಕಾರದ ಐದು ಗ್ಯಾರಂಟಿಗಳು ಜನಸಾಮಾನ್ಯರಿಗೆ ಬಹಳಷ್ಟು ಉಪಯೋಗವಾಗಿದೆ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಜಿಲ್ಲಾಧ್ಯಕ್ಷದ ಸ್ಥಾನ ದೂಡ್ಡ ಜವಾಬ್ದಾರಿಯುತ ಸ್ಥಾನ ವಾಗಿದ್ದು ಜಿಲ್ಲೆಯಲ್ಲಿ ಗ್ಯಾರಂಟಿಗಳ ಅನುಷ್ಟಾನ ನೂರಕ್ಕೆ ನೂರರಷ್ಟು ಮಾಡಲಾಗುವುದು, ಸರ್ಕಾರದ ಐದು ಗ್ಯಾರಂಟಿಗಳ ಲಾಭಗಳನ್ನು ಫಲಾನುಭವಿಗಳಿಗೆ ತಲುಪಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿದ್ದೇನೆ ಎಂದರು.

ಜಿಲ್ಲೆಯಲ್ಲಿ ಐದು ಗ್ಯಾರಂಟಿಗಳ ಅನುಷ್ಟಾನದ ಬಗ್ಗೆ ಜಿಲ್ಲಾ ಕಮಿಟಿಯ ಸಭೆ ಕರೆದು ಕೂಲಂಕಷವಾಗಿ ಚರ್ಚಿಸಲಾಗುವುದು, ಗ್ಯಾರಂಟಿಗಳ ಅನುಷ್ಠಾನದ ಕುರಿತು ಸಂಭಂದಪಟ್ಟ ಇಲಾಖೆ ಅಧಿಕಾರಿಗಳಿಂದ ಮಾಹಿತಿ ಸಂಗ್ರಹಿಸಿ ಜಿಲ್ಲೆಯ ಎಲ್ಲಾ ತಾಲ್ಲೂಕು ಕಮಿಟಿಗಳ ಮುಖಾಂತರ ಐದು ಗ್ಯಾರಂಟಿಗಳಿಂದ ವಂಚಿತರಾಗಿರುವ ಫಲಾನುಭವಿಗಳನ್ನು ಗುರುತಿಸಿ

ಈ ಯೋಜನೆಯ ಲಾಭ ಪಡೆಯಲು ಎಲ್ಲಾ ರೀತಿಯ ಪ್ರಯತ್ನ ಮಾಡಲಾಗುವುದು ಎಂದರು.

ಗ್ಯಾರಂಟಿ ಅನುಷ್ಠಾನ ಜಿಲ್ಲಾಧ್ಯಕ್ಷನಾಗಿ ನೇಮಕ ನಿರಾಶೆ, ಅತೃಪ್ತಿ ತಂದಿಲ್ಲ ಪಕ್ಷ ನೀಡಿರುವ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿಷ್ಠೆಯಿಂದ ನಿಭಾಯಿಸುತ್ತೇನೆ, ನನ್ನನ್ನು ಶಾಸಕನಾಗಿ ನೋಡಲು ನನ್ನ ಬೆಂಬಲಿಗರ ಆಶಯವಾಗಿದೆ, ಅವರಿಗೆ ಸ್ವಲ್ಪ ಮಟ್ಟಿಗೆ ನಿರಾಶೆ ಆಗಿರಬಹುದು ಇದು ಸಹಜ ಒಟ್ಟಾರೆಯಾಗಿ ಅಧ್ಯಕ್ಷ ಸ್ಥಾನದ ಜವಾಬ್ದಾರಿ ಪ್ರಾಮಾಣಿಕವಾಗಿ ನಿಭಾಯಿಸುತ್ತೇನೆ ಎಂದರು.

ಗ್ಯಾರಂಟಿಗಳ ಯೋಜನೆಗಳ ಪ್ರಾಧಿಕಾರದ ರಾಜ್ಯಾಧ್ಯಕ್ಷ ಹೆಚ್.ಎಂ ರೇವಣ್ಣ, ಜಿಲ್ಲಾ ಉಸ್ತುವಾರಿ ಸಚಿವರು ಡಾ.ಎಂ.ಸಿ ಸುಧಾಕರ್,ಶಾಸಕರಾದ ಪ್ರದೀಪ್ ಈಶ್ವರ್ ರವರಿಗೆ ಕೃತಜ್ಞತೆಗಳನ್ನು ತಿಳಿಸುತ್ತೇನೆ ಎಂದರು.

ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ರವರು ಎನ್.ರಮೇಶ್ ರವರಿಗೆ ಶುಭಕೋರಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಅಪರ ಜಿಲ್ಲಾಧಿಕಾರಿ ಡಾ. ಎನ್. ಭಾಸ್ಕರ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಅತಿಕ್ ಪಾಷ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ವೆಂಕಟೇಶ್ ರೆಡ್ಡಿ, ಜಿಲ್ಲಾ ಉದ್ಯೋಗಾಧಿಕಾರಿ ಎಂ.ಪ್ರಸಾದ್, ಮಾಜಿ ಶಾಸಕರಾದ ಕೆ.ಪಿ.ಬಚ್ಚೇಗೌಡ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೇಶವರೆಡ್ಡಿ, ಪ್ರಧಾನ ಕಾರ್ಯದರ್ಶಿ ವಿ.ಸುರೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಯರಾಂ, ಮಾಜಿ ನಗರಸಭೆ ಸದಸ್ಯ ಮಹಮ್ಮದ್ ದಾವೂದ್, ಮಂಚನಬಲೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಮಧು, ಯುವ ಮುಖಂಡ ಯಲುವಹಳ್ಳಿ ಜನಾರ್ಧನ್, ಹೇಮಲತಾ ಜನಾರ್ಧನ್,ಲಕ್ಷ್ಮಣ್, ವಕೀಲ ವಿನೋದ್ ಕುಮಾರ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಹಾಡಿಗಳಿಗೆ ನಿರಂತರ ವಿದ್ಯುತ್:ಸಿ.ಪುಟ್ಟರಂಗಶೆಟ್ಟಿ

**ಚಾಮರಾಜನಗರ:** ಮುಂದಿನ ಮೂರು ತಿಂಗಳೊಳಗೆ ಬಿಳಿಗಿರಿರಂಗನಾಥ ಹುಲಿ ಸಂರಕ್ಷಿತ ಪ್ರದೇಶದೊಳಗಿನ ಬೇಡಗುಳಿ ಸೇರಿದಂತೆ ವಿವಿಧ ಹಾಡಿಗಳಿಗೆ ನಿರಂತರ ವಿದ್ಯುತ್ ಸಂಪರ್ಕ ಸಿಗಲಿದೆ ಎಂದು ಕ್ಷೇತ್ರದ ಎಂಎಸ್ಐಎಲ್ ಅಧ್ಯಕಶಾಸಕ ಸಿ.ಪುಟ್ಟರಂಗಶೆಟ್ಟಿ ಹೇಳಿದ್ದಾರೆ.



ಚಾಮರಾಜನಗರ ತಾಲೂಕಿನ ಅರಣ್ಯದಂಚಿನ ಗ್ರಾಮ ಬೇಡಗುಳಿಯಲ್ಲಿ ಮಾರಿಗುಡಿಪೋಡು, ಬಿಸಿಲುಗೆರೆ, ಕಾಡಿಗೆರೆ, ರಾಮಯ್ಯನಪೋಡು, ಮೊಣಕೈಪೋಡು, ಬೇಡಗುಳಿ ಹಾಡಿಗಳಿಗೆ ವಿದ್ಯುತ್ಸೌಲಭ್ಯ ಕಲ್ಪಿಸುವ 9ಕೋಟಿ ರೂ. ವೆಚ್ಚದ ನಿರಂತರ ವಿದ್ಯುತ್ ಸೌಲಭ್ಯ ಕಲ್ಪಿಸುವ ಕಾಮಗಾರಿಗೆ ಅವರು ಗುದ್ದಲಿಪೂಜೆ ನೆರವೇರಿಸಿದರು.

ನಂತರ ಅವರು ಮಾತನಾಡಿದ ಶಾಸಕ ಸಿ.ಪುಟ್ಟರಂಗಶೆಟ್ಟಿ, ಸ್ವಾತಂತ್ರ ಪೂರ್ವದಿಂದಲೂ ಗಿರಿಜನರು ವಾಸಿಸುವ ಪೋಡುಗಳಲ್ಲಿ ವಿದ್ಯುತ್ ಸೌಲಭ್ಯವಿರಲಿಲ್ಲ, ಇದೀಗ ಇಂಧನ ಇಲಾಖೆಯಿಂದ ಗಿರಿಜನರಿಗೆ ವಿದ್ಯುತ್ ಸೌಲಭ್ಯ ಕಲ್ಪಿಸಲು ಮುಂದಾಗಿರುವುದು ಹೆಮ್ಮೆಯ ಸಂಗತಿ. ಬರುವ ಮೂರುತಿಂಗಳೊಳಗೆ ಕಾಮಗಾರಿ ಪೂರ್ಣಗೊಳಿಸಿ,ನಿರಂತರ ವಿದ್ಯುತ್ ಪೂರೈಕೆಮಾಡಲಾಗುವುದು ಎಂದರು.


ಗಿರಿಜನರು ತಮ್ಮ ಮಕ್ಕಳಿಗೆ ಗುಣಮಟ್ಟದ ಶಿಕ್ಷಣಕೊಡಿಸಬೇಕು, ದುಶ್ಚಟಗಳಿಗೆ ಯಾರೂ ದಾಸರಾಗಬಾರದು, ಪ್ರತಿಯೊಬ್ಬರು ಶಿಕ್ಷಣಪಡೆದಾಗ ಸರ್ಕಾರಿಸೌಲಭ್ಯ ಪಡೆಯುವ ಅವಕಾಶಗಳಿವೆ ಎಂದರು.

ಇದೇ ವೇಳೆ ಹಾಡಿಗಳ ನಿವಾಸಿಗಳಿಗೆ ಮುಂದಿನದಿನಗಳಲ್ಲಿ 300 ಮನೆ ನಿರ್ಮಿಸಿಕೊಡಲು ಕ್ರಮವಹಿಸಲಾಗುವುದು ಎಂದು ಭರವಸೆ ನೀಡಿದರು.

ಗ್ರಾ.ಪಂ.ಉಪಾಧ್ಯಕ್ಷ ರಾಚಪ್ಪ, ತಾಪಂ ಮಾಜಿ ಸದಸ್ಯ ಕುಮಾರನಾಯಕ್, ಮಾಜಿ ಅಧ್ಯಕ್ಷ ಶಾಮಿರ್ ಪಾಷಾ, ಶಿವನಾಯಕ, ಜಡೆಯಪ್ಪ, ಉಲ್ಲೇಶ್ ನಾಯಕ, ಮಹದೇವು, ಶಿವಣ್ಣ, ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಸುಬ್ರಾಯ್, ಸೆಸ್ಕ್ ಇಇ ಪ್ರದೀಪ್, ಎಇಇ ಪ್ರಕಾಶ್, ಜೆಇ ಮಹದೇವಸ್ವಾಮಿ, ಲೆಕ್ಕಾಧಿಕಾರಿಭಾಸ್ಕರ್, ಲೆಕ್ಕಪರಿಶೋಧಕ ಮಹೇಶ್,ಸೇರಿದಂತೆ ಇತರರು ಹಾಜರಿದ್ದರು.

# ವೇಣುಗೋಪಾಲ ಸ್ವಾಮಿ ದೇವಾಲಯ ಜೀರ್ಣೋದ್ಧಾರ

**ಮಾಲೂರು:** ತಾಲ್ಲೂಕಿನ ಮಿಂಡಹಳ್ಳಿ ಗ್ರಾಮದ ಪುರಾತನ ಶ್ರೀ ಪ್ರಸನ್ನ ವೇಣುಗೋಪಾಲ ಸ್ವಾಮಿ ದೇವಾಲಯವನ್ನು ದಾನಿಗಳು, ಗ್ರಾಮಸ್ಥರ ಸಹಕಾರದಿಂದ ನೂತನವಾಗಿ ನವೀಕರಣಗೊಳಿಸಿ ಜೀರ್ಣೋದ್ಧಾರ ಮಾಡಲಾಯಿತು.





ತಾಲ್ಲೂಕಿನ ಶಿವಾರಪಟ್ಟಣ ಗ್ರಾ.ಪಂ. ವ್ಯಾಪ್ತಿಯ ಮಿಂಡಹಳ್ಳಿ ಗ್ರಾಮದಲ್ಲಿ ಶ್ರೀ ಪ್ರಸನ್ನವೇಣುಗೋಪಾಲಸ್ವಾಮಿ ದೇವಾಲಯ ಜೀರ್ಣೋದ್ಧಾರ ಕಾರ್ಯಕ್ರಮದ ಅಂಗವಾಗಿ 3 ದಿನಗಳಿಂದ ವಿವಿಧರೀತಿಯ ಪೂಜೆ, ಹೋಮ, ಹವನ,ಕಳಸ ಪೂಜೆ, ಮಹಾಮಂಗಳಾರತಿಯೊಂದಿಗೆ ದೇವಾಲಯಕ್ಕೆಬರುವ ಭಕ್ತಾಧಿಗಳಿಗೆ ತೀರ್ಥ,ಪ್ರಸಾದ, ಅನ್ನದಾನ ನಡೆಯಿತು.

ದೊಡ್ಡ ಬೈರಣ್ಣ, ಚಿಕ್ಕ ಬೈರಣ್ಣ, ಎಂ.ಎ.ವೆಂಕಟಸ್ವಾಮಿ ಅವರ ಕುಟುಂಬಸ್ಥರು ನಿರ್ಮಾಣ ಮಾಡಿದ ದೇವಾಲಯದಾನಿಗಳು, ಗ್ರಾಮಸ್ಥರ ಸಹಕಾರದಲ್ಲಿ ಅದ್ದೂರಿಯಾಗಿ ನಿರ್ಮಾಣ ಮಾಡಲಾಗಿದೆ.

ಈ ಸಂದರ್ಭದಲ್ಲಿ ಶಾಸಕ ಕೆ.ವೈ.ನಂಜೇಗೌಡ, ಗ್ರಾ.ಪಂ.ಅಧ್ಯಕ್ಷ ಮಿಂಡಹಳ್ಳಿಮುನೇಗೌಡ, ದರಖಾಸ್ತು ಸಮಿತಿ ಅಧ್ಯಕ್ಷ ಹನುಮಂತಪ್ಪ, ಚಂದ್ರೇಗೌಡ, ದೇವಾಲಯಕ್ಕೆ ಆಗಮಿಸಿ ದೇವರ ದರ್ಶನ ಪಡೆದರು. ಗ್ರಾಮಸ್ಥರಾದ ಸತ್ಯನಾರಾಯಣ, ಸೋಮಣ್ಣ,ಬೆಂಗಳೂರು, ಕೃಷ್ಣಮೂರ್ತಿ, ನಾಗವೇಣಿ ಚಂದ್ರು, ಶಿಕ್ಷಕ ಮುನಿರಾಜು, ಶ್ರೀನಿವಾಸ್, ಶೇಖರ್, ನಾರಾಯಣಸ್ವಾಮಿ, ನಾಗರಾಜ್, ಚಲಪತಿ, ಸೇರಿದಂತೆ ಗ್ರಾಮದ ಮುಖಂಡರು ಹಾಜರಿದ್ದರು.

# ಲಾರಿ ಕದ್ದೊಯ್ದ ಕಳ್ಳರಿಂದ 9 ಚಕ್ರ, ಬ್ಯಾಟರಿ ಕಳುವು

ಚಾಮರಾಜನಗರ: ನಿಂತಿದ್ದ ಖಾಸಗಿ ಬಸ್ ಕಳುವು ಪ್ರಕರಣದ ಬೆನ್ನ ಹಿಂದೆಯೇ ಲಾರಿಯನ್ನು ಕದ್ದ ಕಳ್ಳರು ಬೇರೊಂದು ಸ್ಥಳದಲ್ಲಿ ಲಾರಿಯನ್ನು ನಿಲ್ಲಿಸಿ ಲಾರಿಯಲ್ಲಿ ಅಳವಡಿಸಲಾಗಿದ್ದ 9 ಚಕ್ರ ಹಾಗೂ ಬ್ಯಾಟರಿಯನ್ನು ಕದ್ದು ಪರಾರಿಯಾಗಿರುವ ಘಟನೆ ಜಿಲ್ಲೆಯ ಹನೂರು ತಾಲ್ಲೂಕಿನ ರಾಮಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.




ಜಿಲ್ಲೆಯ ಹನೂರು ತಾಲ್ಲೂಕಿನ ರಾಮಪುರ ಗ್ರಾಮದ ನಿವಾಸಿ ಲಾರಿ ಮಾಲೀಕ ಪಂಚಾಕ್ಷರಿಗೆ ಸೇರಿದ ಲಾರಿಯನ್ನು ಫೆ.1ರಂದು ಕೌದಳ್ಳಿ ಪಂಚ ಅಂಗಡಿ ಬಳಿನಿಲ್ಲಿಸಿ ಚಾಲಕ ಮನೆಗೆ ತೆರಳಿದ್ದನು. ಈ ವೇಳೆ ನಿಂತಿದ್ದ ಲಾರಿ ನಾಪತ್ತೆಯಾಗಿದ್ದು, ಲಾರಿಯ ಮಾಲೀಕ ಪಂಚಾಕ್ಷರಿ ಹುಡುಕಾಡಿ ಸಿಗದಿದ್ದಾಗ ಪೊಲೀಸ್ ಠಾಣೆಗೆ ದೂರು ದಾಖಲಿಸಿದ್ದಾರೆ. ಕಳುವಾದ ಲಾರಿ ಹನೂರು ಪೊಲೀಸ್ ಠಾಣಾ ಸರಹದ್ದಿನ ಲೊಕ್ಕನಹಳ್ಳಿ ಮುಖ್ಯರಸ್ತೆಯಲ್ಲಿ ಲಾರಿಯ 9 ಚಕ್ರಗಳು ಸೇರಿದಂತೆ ಬ್ಯಾಟರಿಗಳನ್ನು ಕಳಚಿ ಸ್ಥಿತಿಯಲ್ಲಿ ಪತ್ತೆಯಾಗಿದೆ. ಜಿಲ್ಲೆಯ ಕೌದಳ್ಳಿ ಗ್ರಾಮದ ಪಂಚರ್ ಅಂಗಡಿ ಬಳಿ ನಿಲ್ಲಿಸಿದ್ದ ಲಾರಿಯನ್ನು ಕಳುವು ಮಾಡಿದ ಕಳ್ಳರು ಲೊಕ್ಕನಹಳ್ಳಿ ತನಕ ಚಾಲನೆ ಮಾಡಿಕೊಂಡು ಹೋಗಿ ಲಾರಿಯಲ್ಲಿದ್ದ 9 ಚಕ್ರವನ್ನು ಕಳಚಿಕೊಂಡು, ಬ್ಯಾಟರಿಯನ್ನು ತೆಗೆದುಕೊಂಡು ಲಾರಿಯನ್ನು ಅಲ್ಲೇ ಬಿಟ್ಟು ಪರಾರಿಯಾಗಿದ್ದಾರೆ.

ಲಾರಿ ಕಳ್ಳತನ ಪ್ರಕರಣದ ಕಳ್ಳರ ಪತ್ತೆಗೆ ಜಿಲ್ಲೆಯ ಹನೂರು ತಾಲ್ಲೂಕಿನ ರಾಮಪುರ ಪೊಲೀಸರು ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಪ್ರಕರಣದ ದಾಖಲಿಸಿ ಕೊಂಡು ಈ ಸಂಬಂಧ ತಂಡ ರಚನೆ ಮಾಡಿ ಕಳ್ಳರ ಪತ್ತೆಗೆ ಬಲೆ ಬೀಸಿದ್ದಾರೆ. ಕಳೆದ ವಾರವಷ್ಟೆ ನಗರದಲ್ಲಿ ವಜ್ರ ಎಂಬ ಖಾಸಗಿ ಬಸ್ ನ್ನು ರಾತ್ರೋ ರಾತ್ರಿ ಕಳುವು ಮಾಡಿಕೊಂಡು ಬೆಂಗಳೂರಿನ ಎಲೆಟ್ರಾನಿಕ್ಸ್ ಸಿಟಿ ಬಳಿ ಕಳ್ಳರು ಟೋಲ್ ಕಟ್ಟಲು ಹಣ ವಿಲ್ಲದೆ ಬಸ್ ಬಿಟ್ಟು ಪರಾರಿಯಾಗಿದ ಪ್ರಕರಣದ ಬೆನ್ನ ಹಿಂದಯೇ ಹನೂರು ತಾಲ್ಲೂಕಿನ ಕೌದಳ್ಳಿ ಬಳಿ ಲಾರಿ ಕಳುವು ಮಾಡಿರುವುದು ಗಮನಿಸಿದರೆ ವಾಹನಗಳ ಕಳುವು ಮಾಡುವ ಜಾಲ ಸಕ್ರಿಯವಾಗಿದೆ ಎಂಬ ಶಂಕೆ ಮೂಡುತ್ತಿದೆ.

ಪೊಲೀಸರು ರಾತ್ರಿ ವೇಳೆ ಸರಿಯಾಗಿ ಗಸ್ತು ಮಾಡಿದ್ದಲ್ಲಿ ಮಾತ್ರ ವಾಹನಗಳ ಕಳುವು ಪ್ರಕರಣ ನಿಯಂತ್ರಿಸಬಹುದಾಗಿದೆ ಎನ್ನುವುದು ಸಾರ್ವಜನಿಕರು ಮಾತಾಗಿದೆ

# ದೂರುದಾರೆ, ಪ್ರಿಯಕರನನ್ನೇ ಜೈಲಿಗಟ್ಟಿದ ಪೊಲೀಸರು!

**ವರದಿ: ರಾಮಸಮುದ್ರ ಎಸ್.ವೀರಭದ್ರಸ್ವಾಮಿ**

**ಚಾಮರಾಜನಗರ:** ಪತಿ ನಾಪತ್ತೆಯಾಗಿದ್ದಾರೆ ಎಂದು ದೂರುದಾಖಲಿಸಲು ಬಂದವರ ನಡೆ ಆಧರಿಸಿ ತನಿಖೆ ಮಾಡಿ ಪಿರ್ಯಾದುದಾರೆ ಹಾಗೂ ಪ್ರಿಯಕರನನ್ನೇಪೊಲೀಸರು ಜೈಲಿಗಟ್ಟಿದ ಘಟನೆ ಜಿಲ್ಲೆಯ ಕುದೇರು ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಜನ್ನೂರು ಗ್ರಾಮದ ನಿವಾಸಿ,ದೂರುದಾರೆಯ ಪತಿ ರಮೇಶ್ (45)ನಾಪತ್ತೆಯಾಗಿದ್ದಾರೆಂದು ಪತ್ನಿ ಗೀತಾ ದೂರು ದಾಖಲಿಸಿದ್ದರು. ಆದರೆ ದೂರುದಾರೆಯ ನಡೆ ಪೊಲೀಸರುಗೆ ಅನುಮಾನ ಮೂಡಿಸಿದ ಹಿನ್ನಲೆಯಲ್ಲಿ ತನಿಖೆ ಆರಂಬಿಸಿದಾಗ ಪ್ರಿಯಕರನೊಂದಿಗೆ ಸೇರಿ ಪತ್ನಿ ಗೀತಾ ಕೊಲೆ ಮಾಡಿರುವುದಾಗಿ ವಿಚಾರಣಾ ವೇಳೆ ಒಪ್ಪಿಕೊಂಡಿದ್ದು ಇದೀಗ ಇಬ್ಬರನ್ನು ಬಂದಿಸಿ ನ್ಯಾಯಾಂಗ ಬಂಧನಕ್ಕೊಪ್ಪಿಸಿದ್ದಾರೆ.

ಪಿರ್ಯಾದುದಾರೆ ಗೀತಾ ಕುದೇರು ಠಾಣೆಗೆ ಬಂದು ತನ್ನ ಪತಿ ರಮೇಶ ಅವರು ನಾಪತ್ತೆಯಾಗಿದ್ದು ,ಜ.14 ರಂದು ರಾತ್ರಿ ಹೊರ ಹೋಗಿದ್ದು ವಾಪಸ್ಸು ಬಂದಿಲ್ಲ. ಆಗಾಗ್ಗೆ ಹೊರಗೆ ಹೋಗುತ್ತಿದ್ದು ವಾಪಸ್ಸು ಬರುತ್ತಿದ್ದರು. ಆದರೆ, ಅಂದು ರಾತ್ರಿ ಹೋದವರು ಬಂದಿಲ್ಲ ಎಂದು ಜನವರಿ 21 ರಂದು ನಾಪತ್ತೆ ದೂರು ನೀಡಿದ್ದರು.

ನಾಪತ್ತೆ ಪ್ರಕರಣ ದಾಖಲಿಸಿ ಕೊಂಡ ಪೊಲೀಸರು ತನಿಖೆ ಆರಂಭಿಸಿದಾಗ ಕೊಲೆ ಪ್ರಕರಣ ಪತ್ತೆಯಾಗಿದೆ. ಪ್ರಿಯಕರ ಗುರುಪಾದಸ್ವಾಮಿಗೂ ನನಗೂ ಅಕ್ರಮ ಸಂಬಂಧವಿದ್ದು ಇಬ್ಬರು ಸೇರಿ ಮಾರಕಾಸ್ತ್ರದಿಂದ ಹೊಡೆದುಕೊಲೆ ಮಾಡಿ ಮೃತದೇಹವನ್ನ ಕುಪ್ಪೇಗಾಲದ ಕಪಿಲ ನದಿಗೆ ಬೀಸಾಡಿಯಾರಿಗೂ ಅನುಮಾನಬರಬಾರದೆಂದು ನಾಪತ್ತೆ ದೂರು ನೀಡಿದ್ದಾಗಿವಿಚಾರಣೆ ವೇಳೆ ಆಕೆ ಒಪ್ಪಿಕೊಂಡಿದ್ದಾರೆ.

ಪೊಲೀಸರು ಆರೋಪಿಗಳನ್ನು ಕುಪ್ಪೇಗಾಲ ಬಳಿಯ ಕಪಿಲ ನದಿಗೆ ಕರೆದೊಯ್ದು ಮಾಹಿತಿ ಪಡೆದುಕೊಂಡು ಬಳಿಕ ನದಿಯಿಂದ ಮೃತದೇಹವನ್ನು ಹೊರ ತೆಗೆದಿದ್ದು ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಒಪ್ಪಿಸಲಾಗಿದೆ.

ಅಪರಾಧ ಪ್ರಕರಣ ಭೇದಿಸುವಲ್ಲಿ ಸಂತೆಮರಳ್ಳಿ ವೃತ್ತ ಆರಕ್ಷಕ ಬಸವರಾಜು, ಸಂತೆಮರಳ್ಳಿ ಠಾಣೆಇನ್ಸ್‌ಪೆಕ್ಟರ್ ತಾಜುದ್ದೀನ್,ಸಿಬ್ಬಂದಿ ಸುರೇಶ್, ಕುದೇರು ಠಾಣೆಯ ಇನ್ಸ್‌ಪೆಕ್ಟರ್ ಎಸ್. ಕುಮುದಾ, ಸಿಬ್ಬಂದಿಗಳಾದ ಶಂಕರ್, ನಾಗ ನಾಯಕ, ಉಮೇಶ್ ಸೇರಿದಂತೆ ಇನ್ನಿತರರು ಪತ್ತೆಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ.ಸ್ಥಳಕ್ಕೆ ಎಸ್ಪಿಕವಿತಾರವರು ಭೇಟಿ ನೀಡಿ ಪರಿಶೀಲಿಸಿದರು.

# ಖೋಖೋ ಹೊನಲು ಬೆಳಕಿನ ಪಂದ್ಯಾವಳಿ ಸಮಾರೋಪ

**ಚಾಮರಾಜನಗರ:** ತಾಲ್ಲೂಕಿನ ವೆಂಕಟಯ್ಯನಛತ್ರ ಸರ್ಕಾರಿ ಪ್ರೌಢಶಾಲೆಯಲ್ಲಿ ಚಾಮರಾಜನಗರ ಜಿಲ್ಲಾ ಖೋಖೋ ಸಂಸ್ಥೆ ವತಿಯಿಂದಆಯೋಜಿಸಿದ್ದ ಜಿಲ್ಲಾ ಮಟ್ಟದ ಹೊನಲು ಬೆಳಕಿನ ಪಂದ್ಯಾವಳಿ ಸಮಾರೋಪ ಸಮಾರಂಭ ನಡೆದಿದೆ.




ಹದಿನಾಲ್ಕು ವರ್ಷ ವಯೋಮಾನದವರ ವಿಭಾಗದಲ್ಲಿ ಸಿದ್ದಯ್ಯನಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಪ್ರಥಮ,ಬಸವಾಪುರ ದ್ವಿತೀಯ ಸ್ಥಾನ ಪಡೆದವು. ಪುರುಷರ ವಿಭಾಗದಲ್ಲಿ ವೆಂಕಟಯ್ಯನಛತ್ರ ಫ್ರೆಂಡ್ಸ್‌ಕ್ಲಬ್ ಪ್ರಥಮ, ಕೊಳ್ಳೇಗಾಲತಂಡ ದ್ವಿತೀಯ, ವೆಂಕಟಯ್ಯನಛತ್ರ ಸರ್ಕಾರಿ ಪ್ರೌಢಶಾಲೆ ತೃತೀಯ ಸ್ಥಾನಗಳಿಸಿದವು. ದೊಡ್ಡಿಂದುವಾಡಿ ತಂಡ ನಾಲ್ಕನೇ ಸ್ಥಾನಗಳಿಸಿತು.

ಅಧ್ಯಕ್ಷತೆ ವಹಿಸಿದ್ದ ಚಾಮರಾಜನಗರ ಜಿಲ್ಲಾ ಖೋಖೋ ಸಂಸ್ಥೆ ಅಧ್ಯಕ್ಷ ಎಚ್.ಬಿ.ಶಮಿತ್‌ಕುಮಾರ್ ಮಾತನಾಡಿ, ಚಾಮರಾಜನಗರ ಜಿಲ್ಲೆಯಲ್ಲಿ ಖೋಖೋ ಸಂಸ್ಥೆ ಇಲ್ಲದೇ ನಮ್ಮ ಜಿಲ್ಲೆಯವರು ಬೇರೆ ಜಿಲ್ಲೆಯಲ್ಲಿ ಆಟವಾಡುವ ಸ್ಥಿತಿಯಿತ್ತು. ಈಗ ನಾವೇ ಜಿಲ್ಲಾ ಮಟ್ಟದ ಖೊಖೊ ಸಂಸ್ಥೆಯನ್ನು ಅಸ್ತಿತ್ವಕ್ಕೆ ತಂದಿದ್ದು, ನಾಲು ತಾಲ್ಲೂಕಿನವರು ರಾಷ್ಟ್ರ ಹಾಗೂ ರಾಜ್ಯ ಮಟ್ಟದಲ್ಲಿ ಉತ್ತಮ ಪ್ರದರ್ಶನ ನೀಡಿ, ಜಿಲ್ಲೆಗೆ ಕೀರ್ತಿ ತರಬೇಕು ಎಂದರು. ಜಿಲ್ಲಾ ನೆಟ್‌ಬಾಲ್ ಅಸೋಸಿಯೇಷನ್ ಅಧ್ಯಕ್ಷ ವಿ. ಶ್ರೀನಿವಾಸಪ್ರಸಾದ್ ಮಾತನಾಡಿ, ಕ್ರೀಡಾಪಟುಗಳಿಗೆ ಶಿಸ್ತು, ಸಮಯಪ್ರಜ್ಞೆ, ತಾಳ್ಮೆ ಅಗತ್ಯ, ಸೋಲುಗೆಲುವು ಮುಖ್ಯವಲ್ಲ, ಸೋಲು ಗೆಲುವಿನ ಹಾದಿಯಾಗಿದೆ,ಜಿಲ್ಲೆಯ ಕ್ರೀಡಾಪಟುಗಳು ಎಲ್ಲ ಆಟಗಳಲ್ಲೂಮುಂಚೂಣಿಯಲ್ಲಿದ್ದಾರೆಎಂದು ಪ್ರಶಂಸಿಸಿದರು.

ಚಾಮರಾಜನಗರ ಜಿಲ್ಲಾ ಖೊಖೊ ತರಬೇತಿದಾರರು ಎಂ.ನಟರಾಜು, ತಾಲ್ಲೂಕು ಕೃಷಿ ಪತ್ತಿನ ಸಹಕಾರ ಸಂಘದ ಸೋಮಣ್ಣ, ಗ್ರಾ.ಪಂ ಉಪಾಧ್ಯಕ್ಷ ಕೃಷ್ಣ ಮೂರ್ತಿ, ಮಾರ್ಣಿಕ ಚಂದು, ನಾಗೇಂದ್ರನಾಯಕ್ ಕಿಚ್ಚ ಸುದೀಪ್ ಫ್ಯಾನ್ಸ್ ಅಸೋಸಿಯಷೇನ್ ಅಧ್ಯಕ ರಾಘವೇಂದ್ರ, ಪ್ರಧಾನ ಕಾರ್ಯದರ್ಶಿ ನಟರಾಜು, ಹೂಸೂರು ರಾಜು, ಸೇರಿದಂತೆ ಚಾಮರಾಜನಗರ ಜಿಲ್ಲಾ ಖೊಖೊ ಸಂಸ್ಥೆ ಪದಾಧಿಕಾರಿಗಳು ಕ್ರೀಡಾಪಟುಗಳು ಹಾಜರಿದ್ದರು.

# ಯುವಪೀಳಿಗೆಗೆ ಜಾನಪದ ಕಲೆ ಉಳಿಸಬೇಕು: ಕೆ.ವೈ.ನಂಜೇಗೌಡ

**ಮಾಲೂರು:** ಭಾರತ ಸಂಸ್ಕೃತಿಯ ಜಾನಪದ ಕೀಲುಗೊಂಬೆಗಳಂತಹ ಕಲೆಗಳನ್ನು ಮುಂದಿನ ಯುವಪೀಳಿಗೆಗೆ ಉಳಿಸಿ ಪ್ರೋತ್ಸಾಹಿಸಬೇಕು ಎಂದು ಶಾಸಕ ಕೆ.ವೈ.ನಂಜೇಗೌಡ ಕರೆ ನೀಡಿದ್ದಾರೆ.


ತಾಲ್ಲೂಕಿನ ಟೇಕಲ್ ಹೋಬಳಿಯ ಶಾಸಕರ ಸ್ವಗ್ರಾಮ ಕೊಮ್ಮನಹಳ್ಳಿ ಗ್ರಾಮದಲ್ಲಿ ನಡೆದ ಕೀಲುಗೊಂಬೆ ನಾಟಕ ಪ್ರದರ್ಶನ ಕಾರ್ಯಕ್ರಮದಲ್ಲಿ ಶಾಸಕ ಕೆ ವೈ ನಂಜೇಗೌಡ ರವರು ಚಾಲನೆ ನೀಡಿಮಾತನಾಡಿದರು.

ನಮ್ಮ ತಾತ ಮುತಾತ ಅವರ ಕಾಲದಲ್ಲಿ ನಾಟಕ, ಭಜನೆ, ಕೀಲುಗೊಂಬೆಗಳನ್ನು ನೋಡುತ್ತ ಜೀವನವನ್ನು ಸಾಗಿಸುವ ಮೂಲಕ ನೆಮ್ಮದಿ ಜೀವನ ಸಾಗಿಸುತ್ತಿದ್ದರು. ಇತ್ತೀಚಿನ ದಿನಗಳಲ್ಲಿ ಸಿನಿಮಾ, ಧಾರವಾಹಿ, ಫೇಸ್ಬುಕ್, ವಾಟ್ಸ್ ಪ್ ಗಳ ಭೂತಕ್ಕೆ ಸಿಲುಕಿ ಒತ್ತಡದ ಜೀವನ ಸಾಹಿಸುವಂತಹಪರಿಸ್ಥಿತಿಯಾಗಿದೆ. ಮುಂದಿನ ಯುವ ಪೀಳಿಗೆಗೆ ಇಂತಹ ಸಂಸ್ಕೃತಿ, ಕಲೆ, ಜಾನಪದ, ನಾಟಕಗಳು ಜೀವಂತ ಉಳಿಯ ಬೇಕಾದರೆ ನೋಡುವ ಹಾಗೂ ಉಳಿಸಿ ಪ್ರೋತ್ಸಾಹಿಸಿದಾಗ ಮಾತ್ರ ಸಾಧ್ಯ ಎಂದರು.

ಈ ಸಮಯದಲ್ಲಿ ಕೃಷಿಕ ಸಮಾಜದ ಅಧ್ಯಕ್ಷ ಆನೇಪುರ ಹನುಮಂತಪ್ಪ , ಮಾಜಿ ಜಿಲ್ಲಾ ಪಂಚಾಯಿಅಧ್ಯಕ್ಷೆ ರತ್ನಮ್ಮ ನಂಜೇಗೌಡ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ರಮೇಶ್ ಗೌಡ, ನೂಟವೆ ಗ್ರಾ.ಪಂಚಾಯಿತಿ ಮಾಜಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯ ಕೆ. ವೈ. ಈರೇಗೌಡ, ಯುವ ನಾಯಕರಾದಹರೀಶ್ ನಂಜೇಗೌಡ, ಸುನೀಲ್ ನಂಜೇಗೌಡ, ಶೀನಪ್ಪ, ವೆಂಕಟಪ್ಪ, ಸುಭ್ರಮಣಿ ಹಾಗೂ ಗ್ರಾಮ ಪಂಚಾಯಿತಿ ಅಧ್ಯಕ್ಷರು ಸದಸ್ಯರು, ಮತ್ತು ಗ್ರಾಮಸ್ಥರು ಹಾಜರಿದ್ದರು.

# ಮೊಬೈಲ್ ತಂದಿಟ್ಟ ಅವಾಂತರ ಓರ್ವ ಸಾವು, 6 ಮಂದಿಗೆ ಶಿಕ್ಷೆ

ಹಾಸನ: ಎರಡು ವರ್ಷಗಳ ಹಿಂದೆ ಗಂಗಾಧರ ಎಂಬ ವ್ಯಕ್ತಿಯೊಬ್ಬನ ಕೊಲೆ ಪ್ರಕರಣದ ಸಂಬಂಧ 6 ಮಂದಿಗೆ ನ್ಯಾಯಾಧೀಶರು ತಲಾ 6 ವರ್ಷಗಳ ಕಾಲ ಶಿಕ್ಷೆ ವಿಧಿಸುವ ಮೂಲಕ ವಿಶೇಷ ಪ್ರಕರಣಕ್ಕೆ ಇತಿಶ್ರೀ ಹಾಡಿದ್ದಾರೆ.



ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲೂಕಿನ ಊಪಿನಹಳ್ಳಿ ಗ್ರಾಮದ ಗಂಗಾಧರ್ (42) ಕೊಲೆಯಾದ ವ್ಯಕ್ತಿ. ಚನ್ನರಾಯಪಟ್ಟಣ ತಾಲೂಕು ಜನಿವಾರ ಗ್ರಾಮದ ಭರತ್ (34), ಅಭಿಷೇಕ್ ಅಲಿಯಾಸ್ ಕಬಾಬ್ ಅಭಿ (29), ಚಿರಂಜೀವಿ (27), ಅಭಿ ಅಲಿಯಾಸ್ ರೆಬಲ್ ಅಭಿ (32), ಸೋಮಶೇಖರ್ ( 33), ಕುಮಾರ್ ಅಲಿಯಾಸ್ ಕಳ್ಳ ಕುಮಾರ್ ಶಿಕ್ಷೆಗೊಳಗಾದ ಆರೋಪಿಗಳು.

ಏನಿದು ಪ್ರಕರಣ?: ಮೃತ ವ್ಯಕ್ತಿ ಗಂಗಾಧರ್ ವೃತ್ತಿಯಲ್ಲಿ ಟೈಲರ್. ಕಳೆದ 20 ವರ್ಷಗಳಿಂದ ಪಟ್ಟಣದ ಕೆ.ಆರ್. ವೃತ್ತದ ಬಳಿ ಎಂ.ಜಿ. ಟೈಲರ್ ಎಂಬ ಅಂಗಡಿ ಇಟ್ಟುಕೊಂಡಿದ್ದರು. ಎರಡೂವರೆ ವರ್ಷಗಳ ಹಿಂದೆ ಮೃತ ಗಂಗಾಧರ್ ಟೈಲರ್ ಅಂಗಡಿಯಲ್ಲಿ ಕೆಲಸ ಮಾಡುವಾಗ, ತಮ್ಮ ಮೊಬೈಲ್‌ನಿಂದ ಗ್ರಾಹಕರೊಬ್ಬರಿಗೆ ಕರೆ ಮಾಡಲು ಹೋಗಿ ಒಂದು ನಂಬರ್ ತಪ್ಪಾಗಿ ಓರ್ವ ಮಹಿಳೆಗೆ ಡಯಲ್ ಆಗಿತ್ತು. ಆದರೆ, ಆ ಕರೆ ರಿಂಗ್ ಆದ ಬಳಿಕ ಕಟ್ ಮಾಡಿ, ಸರಿಯಾದ ನಂಬರ್‌ಗೆ ಫೋನ್ ಮಾಡಿ ಮಾತನಾಡಿದ್ದರು. ಕೆಲ ಸಮಯದ ಬಳಿಕ ಅದೇ ನಂಬರ್‌ನಿಂದ ಗಂಗಾಧರ್‌ಗೆ ಫೋನ್ ಬಂದಿತ್ತು. ಗಂಗಾಧರ್ "ಯಾರಿಗೋ ಕರೆ ಮಾಡಲು ಹೋಗಿ ಒಂದು ನಂಬರ್ ತಪ್ಪಾಗಿ ನಿಮಗೆ ಬಂತು" ಎಂದು ಕರೆ ಕಟ್ ಮಾಡಿದ್ದರು. ಆದರೆ ಆ ಮಹಿಳೆ ಮತ್ತೆ ಕರೆ ಮಾಡಿ "ನೀವು ಬೇಕು ಅಂತಲೆ ಕರೆ ಮಾಡಿದ್ದೀರಾ" ಎಂದು ಜೋರಾಗಿ ಮಾತಾನಾಡಲು ಪ್ರಾರಂಭಿಸಿದಾಗ, ಮೃತ ಗಂಗಾಧರ್ ಕೂಡ ಸ್ವಲ್ಪ ಜೋರಾಗಿ ಮಾತನಾಡಿದ್ದರು. ನಂತರ ಸಿಟ್ಟಿನಿಂದ ಆಕೆಗೆ ಬೈದು ಕರೆ ಕಟ್ ಮಾಡಿದ್ದರು. ಕೊನೆಗೆ ತನ್ನದಲ್ಲದ ತಪ್ಪಿಗೆ ಒಂದು ಮೆಸೇಜ್ ಮೂಲಕ ಕ್ಷಮೆಯನ್ನೂ ಕೇಳಿದ್ದರು.

ಭಯಗೊಳಿಸುವ ಭರದಲ್ಲಿ ಮನಸೋ ಇಚ್ಛೆ ಹಲ್ಲೆ: ಈ ವಿಚಾರವನ್ನು ಮಹಿಳೆ ತನ್ನ ಪತಿ ಭರತ್‌ಗೆ ಹೇಳಿದ್ದರು. ಸಿಟ್ಟಾದ ಭರತ್ ತನ್ನ ಸ್ನೇಹಿತರೊಂದಿಗೆ ಚನ್ನರಾಯಪಟ್ಟಣದ ಎಂ.ಜಿ. ಟೈಲರ್ ಶಾಪ್‌ಗೆ ಆಗಮಿಸಿ ಗಂಗಾಧರ್ ಅವರನ್ನು ಕಿಡ್ನಾಪ್ ಮಾಡಿದ್ದರು. ಶ್ರವಣಬೆಳಗೊಳ ರಸ್ತೆಯ ಜನಿವಾರ ಗ್ರಾಮದ ಬಳಿಯಿರುವ ರೈಲ್ವೆ ಟ್ರ್ಯಾಕ್ ಬಳಿಗೆ ಕರೆತಂದು ಭಯಗೊಳಿಸುವ ಭರದಲ್ಲಿ ಅವರಿಗೆ ಮನಸೋ ಇಚ್ಛೆ ಹಲ್ಲೆ ನಡೆಸಿದ್ದರು. ಈ ವೇಳೆ, ಆಕಸ್ಮಿಕವಾಗಿ ಗಂಗಾಧರ್ ಅಲ್ಲಿಯೇ ಕುಸಿದು ಬಿದ್ದಿದ್ದರು. ಸ್ಥಳಕ್ಕೆ ಬಂದ ಸ್ಥಳೀಯರನ್ನು ನೋಡಿ ಆರೋಪಿಗಳು ಪರಾರಿಯಾಗಿದ್ದರು.

37 ಲಕ್ಷಕ್ಕೆ ರಾಜಿ ಮಾಡಿಕೊಂಡಿದ್ದ ಆರೋಪಿಗಳು: ಬಳಿಕ ಗಂಗಾಧರ್ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲು ಮಾಡಿದ್ದು, ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದರು. ಬಳಿಕ ಪತ್ನಿ ಹಾಗೂ ಸ್ನೇಹಿತರು ನೀಡಿದ ದೂರಿನ ಆಧಾರದ ಮೇಲೆ 6 ಮಂದಿಯನ್ನು ಪೊಲೀಸರು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದರು. ಬಳಿಕ ಜಾಮೀನಿನ ಮೇಲೆ ಹೊರ ಬಂದಿದ್ದ ಆರೋಪಿಗಳು ಸಾಕ್ಷಿ ನಾಶ ಮಾಡುವ ಉದ್ದೇಶದಿಂದ ಮೃತ ಕುಟುಂಬಕ್ಕೆ 37 ಲಕ್ಷ ಕೊಡುವುದಾಗಿ ರಾಜಿ – ಸಂಧಾನ ಮಾಡಿಕೊಂಡು, ಮೃತನ ಕುಟುಂಬಕ್ಕೆ ಮುಂಗಡವಾಗಿ 25 ಲಕ್ಷ ನೀಡಿದ್ದರು. ಜೊತೆಗೆ ಶಿಕ್ಷೆಯಿಂದ ತಪ್ಪಿಸಿಕೊಳ್ಳಲು ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷಿ ಹೇಳಿಸಿದ್ದರು.

ಪರಮೋಚ್ಚ ಅಧಿಕಾರ ಬಳಸಿದ ನ್ಯಾಯಾಧೀಶರು: ಈ ವಿಚಾರ ನ್ಯಾಯಾಧೀಶರ ಗಮನಕ್ಕೆ ಬಂದು, ಆರೋಪಿಗಳು ತಮಗಿಷ್ಟ ಬಂದಂತೆ ಕೊಲೆ ಮಾಡಿ ರಾಜಿ ಸಂಧಾನ ಮಾಡಿಕೊಳ್ಳುವುದಾದರೇ, ಪೊಲೀಸರೇಕೆ? ನ್ಯಾಯಾಲಯವೇಕೆ? ಎಂದು ಗರಂ ಆಗಿದ್ದರು. ಆರೋಪಿಗಳು ಲಕ್ಷಾಂತರ ಹಣದಿಂದ ನಾಶ ಮಾಡಿದ್ದ ಮಾನವ ಸಾಕ್ಷಿಗಳ ಬದಲಿಗೆ ಡಿಜಿಟರ್ ಸಾಕ್ಷಿಗಳಾದ ಮರಣೋತ್ತರ ಪರೀಕ್ಷೆ ವರದಿ, ಶ್ವಾನದಳ ಪರೀಕ್ಷೆ, ಬೆರಳಚ್ಚು ತಜ್ಞರ ವರದಿ, ಫೋನ್ ರೆಕಾರ್ಡ್, ಕೊಲೆಗೆ ಬಳಸಿದ ವಾಹನ ಹೀಗೆ ಹತ್ತು ಹಲವು ಸಾಕ್ಷಿಗಳನ್ನು ತನಿಖಾಧಿಕಾರಿಗಳಿಂದ ಸಂಗ್ರಹಿಸಿಕೊಂಡು ವಿಶೇಷ ಪ್ರಕರಣ ಎಂದು ಭಾವಿಸಿದ ಚನ್ನರಾಯಪಟ್ಟಣ 4ನೇ ಜೆ.ಎಂ.ಎಫ್.ಸಿ ನ್ಯಾಯಾಧೀಶ ವಿ.ಎನ್. ಜಗದೀಶ್ ಡಿಜಿಟಲ್ ಸಾಕ್ಷ್ಯಾಧಾರಗಳ ಆಧಾರದ ಮೂಲಕ ಗಂಗಾಧರ್ ಕೊಲೆಯೂ ಈ 6 ಮಂದಿಯಿಂದಲೇ ನಡೆದಿರುವುದು ಎಂದು ತಮಗಿರುವ ಪರಮೋಚ್ಚ ಅಧಿಕಾರವನ್ನು ಬಳಸಿಕೊಂಡು ತೀರ್ಪು ನೀಡಿದ್ದಾರೆ. ಆರೋಪಿಗಳಿಗೆ ತಲಾ 6 ವರ್ಷಗಳ ಕಾಲ ಶಿಕ್ಷೆ ವಿಧಿಸಿದ್ದಾರೆ.

ತನಿಖಾಧಿಕಾರಿಯಾಗಿ ಚನ್ನರಾಯಪಟ್ಟಣ ನಗರ ಠಾಣೆಯ ವೃತ್ತ ನಿರೀಕ್ಷಕ ವಸಂತ್, ಸಹಾಯಕ ತನಿಖಾಧಿಕಾರಿ ಮುಖ್ಯ ಪೇದೆ ರಂಗಸ್ವಾಮಿ ಸೇರಿದಂತೆ ಹಲವರು ಪ್ರಕರಣಕ್ಕೆ ಸಂಬಂಧಿಸಿದ ತಾಂತ್ರಿಕ ಸಾಕ್ಷ್ಯಗಳನ್ನು ಒದಗಿಸಿದ್ದರು. ಸರ್ಕಾರಿ ಅಭಿಯೋಜಕ ವಕೀಲ ಸಿ.ಡಿ.ಶ್ರೀನಿವಾಸ್ ಮೃತರ ಪರ ವಾದ ಮಂಡಿಸಿದ್ದರು.

# ಸರ್ಕಾರಿ ಶಾಲೆ ಶಿಕ್ಷಕರಿಗೆ ಬೋಧನೆಗಿಂತ ಇತರೆ ಕೆಲಸಗಳೇ ಹೆಚ್ಚು



**ಮಾಲೂರು:** ಸರ್ಕಾರಿ ಶಾಲೆ ಶಿಕ್ಷಕರಿಗೆ ಬೋಧನೆಗಿಂತ ಇತರೆ ಕೆಲಸಗಳೇ ಹೆಚ್ಚಾಗಿ ಖಾಸಗಿ ಶಾಲೆಗಳವ್ಯಾಮೋಹಕ್ಕೆ ಸರ್ಕಾರಿ ಶಾಲೆಗಳು ಮುಚ್ಚುವ ಪರಿಸ್ಥಿತಿ ನಿರ್ಮಾಣವಾಗಿದ್ದು ಮುಂದಿನ ವರ್ಷ ಮಕ್ಕಳದಾಖಲಾತಿ ಪ್ರಮಾಣ ಹೆಚ್ಚಿಸಬೇಕು ಎಂದುಕ್ಷೇತ್ರ ಶಿಕ್ಷಣ ಅಧಿಕಾರಿ ಚಂದ್ರಕಲಾಗೆ ಶಾಸಕ ಕೆ ವೈ ವೈ ನಂಜೇಗೌಡ ಸೂಚಿಸಿದರು. ತಾಲ್ಲೂಕಿನ ತೊರ್ನಹಳ್ಳಿ ಗ್ರಾಮದಲ್ಲಿ ನೂತನ ಗ್ರಾಮ ಪಂಚಾಯ್ತಿ ಕಟ್ಟಡ ನಿರ್ಮಾಣಕ್ಕೆ ಗುದ್ದಲಿಪೂಜೆ ಹಾಗೂ ಒಸಾಟ್ ಸಂಸ್ಥೆ ಸಹಯೋಗದಲ್ಲಿ ನಿರ್ಮಾಣವಾದ ಶಾಲಾ ಕೊಠಡಿಗಳ ಉದ್ಘಾಟನಾಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು,

ಸರ್ಕಾರಿ ಶಾಲೆಗಳಿಗೆ ಸರ್ಕಾರಗಳ ಅನುದಾನದ ಜೊತೆಗೆ ದಾನಿಗಳು ಹಾಗೂ ಖಾಸಗಿ ಕಂಪೆನಿಗಳ ಸಿ ಎಸ್ಆರ್ ಅನುದಾನಗಳಿಂದ ಸರ್ಕಾರಿ ಶಾಲೆಗಳ ಉನ್ನತೀಕರಿಸಲಾಗುತ್ತಿದ್ದು ಈಗಾಗಲೇ ಸರ್ಕಾರದಿಂದಮಕ್ಕಳಿಗೆ ಹಾಲು ಮದ್ಯಾನ್ನದ ಊಟ ಉಚಿತ ಬಟ್ಟೆ,ಶೂ ,ಮತ್ತು ಮೊಟ್ಟೆಯನ್ನು ವಿತರಿಸುತ್ತಿದೆ,ಗ್ರಾಮೀಣ ಪ್ರದೇಶದಲ್ಲಿ ಖಾಸಗಿ ಶಾಲೆಗಳ ವ್ಯಾಮೋಹಕ್ಕೆ ಒಳಗಾಗಿ ಸರ್ಕಾರಿ ಶಾಲೆಗೆ ಮಕ್ಕಳನ್ನುದಾಖಲು ಮಾಡಲು ಪೋಷಕರು ಹಿಂದೇಟು ಹಾಕುತ್ತಿದ್ದು ಸರ್ಕಾರಿ ಶಾಲೆಗಳು ಮುಚ್ಚುವ ಪರಿಸ್ಥಿತಿನಿರ್ಮಾಣವಾಗಿದೆ,

ಖಾಸಗಿ ಶಾಲೆಗಳಿಗೆ ಹೋಲಿಸಿದರೆ ಸರ್ಕಾರಿ ಶಾಲೆ ಶಿಕ್ಷಕರಿಗೆ ಬೋಧನೆಗಿಂತ ಇತರೆ ಕೆಲಸಗಳೇ ಹೆಚ್ಚಾಗಿಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಕರು ಉತ್ತಮ ಶಿಕ್ಷಣ ಪದ್ಧತಿ ಇದ್ದರೂ ಜಾರಿ ಮಾಡಲು ಶಿಕ್ಷಕರಿಗೆಸಮಯವೇ ಸಿಗುತ್ತಿಲ್ಲ ಹಾಗಾಗಿ ಬೋಧನೆಗೆ ಶಿಕ್ಷಕರು ಹೆಚ್ಚು ಅವಕಾಶ ಕಲ್ಪಿಸಬೇಕು, ಅಲ್ಲದೇಶಿಕ್ಷಕರು ಉತ್ತಮ ಬೋಧನೆ ಜೊತೆಗೆ ಪ್ರತಿ ಪ್ರತಿ ಮನೆ ಮನೆಗೂ ತೆರಳಿ ಪೋಷಕರನ್ನುಮನವೊಲಿಸಿ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಪ್ರಮಾಣ ಹೆಚ್ಚಿಸಬೇಕು ಎಂದು ಶಾಸಕ ಕೆ ವೈನಂಜೇಗೌಡ ಕ್ಷೇತ್ರ ಶಿಕ್ಷಣ ಅಧಿಕಾರಿಗೆ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾ.ಪಂ.ಅಧ್ಯಕ್ಷೆ ಅಶ್ವಥಮ್ಮ ರಾಮಯ್ಯ, ಬಿಇಒ ಎಚ್. ಎಸ್.ಚಂದ್ರಕಲಾ, ತಾ.ಪಂ.ಇಒವಿ.ಕೃಷ್ಣಪ್ಪ, ಸಿ.ಆರ್.ಗೌಡ, ಹೊಂಡಾ ಕಂಪನಿಯ ಸುನೀಲ್ ಕುಮಾರ್ ಮಿಥೇಲ್, ಜಯಂತ್ ಶೆಟ್ಟಿ , ಒಸಾಟ್ಸಂಸ್ಥೆಯ ಮಂಜುನಾಥ್, ದರಖಾಸ್ತುಸಮಿತಿ ಅಧ್ಯಕ್ಷ ಹನುಮಂತಪ್ಪ, ಗ್ರಾ.ಪಂ.ಅಧ್ಯಕ್ಷಮಿಂಡಹಳ್ಳಿ ಮುನೇಗೌಡ, ಮಾಜಿ ಗ್ರಾ.ಪಂ. ಅಧ್ಯಕ್ಷ ಮುನಿಸ್ವಾಮಿ, ಪ್ರಾ.ಶಾ.ಶಿ.ಸಂಘದ ಅಧ್ಯಕ್ಷ ಷಣ್ಮುಖಯ್ಯ, ಮಂಜುನಾಥ್, ನಾಗವೇಣಿ, ರೂಪ,ನಾಗರಾಜ್, ವೀರಭದ್ರಪ್ಪ,ಸುವಿ ್ರತ್ರ,ತಿಮ್ಮರಾಯಪ್ಪ, ಬಿ.ವೈ.ಲೋಕೇಶ್, ಸುಶೀಲಮ್ಮ, ಬೈರನಹಳ್ಳಿ ಪಾಪಣ್ಣ, ಟಿ.ವಿ.ನಾರಾಯಣಸ್ವಾಮಿ,ಎಚ್. ಎಂ.ಶ್ರೀನಿವಾಸ್, ಶಶಿಧರ್,ಎಸ್. ಮೋಹನ್, ರಮೇಶ್, ಟಿ.ಎಂ. ವೆಂಕಟೇಶ್ ಸೇರಿದಂತೆ ಹಲವಾರು ಮುಖಂಡರುಹಾಜರಿದ್ದರು.



**ಮಹಾಲಕ್ಷ್ಮಿ ಲೇಔಟ್ ನ ಶಂಕರ ಮಠ ಸ್ವಾಮಿ ವಿವೇಕಾನಂದ ಆಟದ ಮೈದಾನದಲ್ಲಿ ಇಂದು ಮಹಾಲಕ್ಷ್ಮಿ ಎಜುಕೇಶನ್ ಟ್ರಸ್ಟ್, ನೆಮ್ಮದಿ ಯೋಗಶಾಲೆ ಹಾಗೂ ಪ್ರಣವ ಯೋಗ ಪ್ರತಿಷ್ಠಾನ ಸಂಯುಕ್ತ ಆಶ್ರಯದಲ್ಲಿ ರಥಸಪ್ತಮಿ ಪ್ರಯುಕ್ತ ಆಯೋಜಿಸಿದ್ದ ಸಾಮೂಹಿಕ ಸೂರ್ಯ ನಮಸ್ಕಾರ ಯೋಗ ಶಿಬಿರದಲ್ಲಿ ಸ್ಥಳೀಯ ಶಾಸಕರ ಕೆ ಗೋಪಾಲಯ್ಯನವರು ಪಾಲ್ಗೊಂಡಿದರು.**
**ಶಿಬಿರದಲ್ಲಿ ಪಾಲಿಕೆ ಮಾಜಿ ಉಪ ಮಹಾಪೌರರಾದ ಹೇಮಲತಾ ಗೋಪಾಲಯ್ಯ ನೆಮ್ಮದಿ ಯೋಗಶಾಲ ಸಂಸ್ಥಾಪಕ ಮುಕುಂದ ರಾವ್ ಬಿಜೆಪಿ ಮುಖಂಡರಾದ ವೆಂಕಟೇಶ್ ಮೂರ್ತಿ ಶಿವಾನಂದ , ಪ್ರೀತಿ ಡಾ. ಮಂಜುನಾಥ್ ಗೌಡ ಸೇರಿದಂತೆ ನೂರಾರು ಸಾರ್ವಜನಿಕರು ಪಾಲ್ಗೊಂಡಿದ್ದರು.**

## ಹಿಂದುಳಿದ ವರ್ಗಗಳ ಸಂಪಾದಕ ವರದಿಗಾರರ ಸಂಘದ ವಾರ್ಷಿಕ ವಿ.ಪಿ.ಸಿಂಗ್ ಪ್ರಶಸ್ತಿ ಪ್ರಕಟ

**ಬೆಂಗಳೂರು:** ಹಿಂದುಳಿದ ವರ್ಗಗಳ ಕರ್ನಾಟಕ ಮಾನ್ಯತೆ ಪಡೆದ ಸಂಪಾಧಕರ ಮತ್ತು ವರದಿಗಾರರ ಸಂಘ ಪ್ರಸಕ್ತ ವರ್ಷದ ದಿವಂಗತ ಮಾಜಿ ಪ್ರಧಾನಿ ವಿ.ಪಿ.ಸಿಂಗ್ ಪ್ರಶಸ್ತಿ ಪುರಸ್ಕೃತರ ಪಟ್ಟಿ ಪ್ರಕಟಿಸಿದೆ.
ಕಳೆದ ವರ್ಷದಂತೆ ಈ ವರ್ಷದಲ್ಲಿ 5ಜನ ಸಾಧಕರಿಗೆ ಪ್ರಶಸ್ತಿಯನ್ನು ನೀಡಿ ಗೌರವಿಸುತ್ತಿದೆ,ಇದೇ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷ ಮಣಿಯವರ ವಿರಚಿತ ಒಳಕೋರೆ ಪುಸ್ತಕವನ್ನು ಬಿಡುಗಡೆಗೊಳಿಸಲಾಗುತ್ತಿದೆ.
ತುಳಿತಕ್ಕೊಳಗಾದ ಸಮುದಾಯಗಳ ಪರ ಧ್ವನಿಯಾಗಿದ್ದ ಹಿರಿಯ ಸಾಹಿತಿ ಕೆ.ಶರೀಪಾ,ಲಂಕೇಶ್ ಸೇರಿದಂತೆ ಅನೇಕ ಪತ್ರಿಕೆಗಳಲ್ಲಿ ವರದಿಗಾರರಾಗಿ,ಸಂಪಾದಕರಾಗಿ ಸೇವೆ ಸಲ್ಲಿಸಿ ಹೆಸರು ಮಾಡಿರುವ ಹಿರಿಯ ಪತ್ರಕರ್ತ ಐ.ಎಚ್.ಸಂಗಮ್ ದೇವ್,ಹಿಂದುಳಿದ ವರ್ಗಗಳ ಮಹಿಳೆಯರ ಸಬಲೀಕರಣಕ್ಕೆ ಶ್ರಮಿಸಿರುವ ನಳಿನಾಕ್ಷಿ ಸಣ್ಣಪ್ಪ, ಸಮಾಜ ಸೇವೆಯಲ್ಲಿ ಅನುಪಮ ಸೇವೆ ಸಲ್ಲಿಸಿರುವ ಎಂ.ನಾಗವೇಣಿ,ಹೈದ್ರಾಬಾದ್ ಕರ್ನಾಟಕ ಭಾಗದಲ್ಲಿ ಕನ್ನಡ ಭಾಷಾ ಉಳಿವಿಗಾಗಿ ಕನ್ನಡ ಭಾಷೆ ಪತ್ರಿಕೆ ಆರಂಭಿಸಿ ಶೋಷಿತರ ಧ್ವನಿಯಾಗಿರುವ ಸಂಧ್ಯಾಕಾಲ ಪತ್ರಿಕೆಯ ಸಂಪಾದಕ ಶಿವಲಿಂಗಪ್ಪ ಅವರುಗಳಿಗೆ ವಿ.ಪಿ.ಸಿಂಗ್ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ ಎಂದು ಸಂಘದ ಅಧ್ಯಕ್ಷ ಗಂಧರ್ವ ಶ್ರೀನಿವಾಸ್, ಪ್ರಧಾನ ಕಾರ್ಯದರ್ಶಿ ವಿರೂಪಾಕ್ಷಪ್ಪ ಹೆಚ್.ಜಿ. ಕಾರ್ಯದರ್ಶಿ ಶಿವಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಪ್ರಶಸ್ತಿ ಪ್ರಧಾನ ಸಮಾರಂಭ ಇದೇ ತಿಂಗಳ 15ರಂದು ಕ್ವೀನ್ಸ್ ರಸ್ತೆಯ ಕೃಷಿ ತಂತ್ರಜ್ಞರ ಇಲಾಖೆಯ ಸಭಾಂಗಣದಲ್ಲಿ ನಡೆಯಲಿದೆ.

## ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಾಮರಾಜನಗರ:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಯ 2025-26ನೇ ಶೈಕ್ಷಣಿಕ ಸಾಲಿಗೆ 6ನೇ ತರಗತಿ ಪ್ರವೇಶಕ್ಕಾಗಿ ಅರ್ಹ ವಿದ್ಯಾರ್ಥಿಗಳಿಂದ ಸೇವಾ ಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ ವಿದ್ಯಾರ್ಥಿಗಳಿಗೆ ಶೇ.75ರಷ್ಟು ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಶೇ.25ರಷ್ಟು ಮೀಸಲಾತಿ ಇರುತ್ತದೆ.
ಅರ್ಜಿಯನ್ನು ವೆಬ್ ಸೈಟ್ https://sevasindhuservices.karnataka.gov.in ನಲ್ಲಿ ಮಾರ್ಚ್ 10ರೊಳಗೆ ಸಲ್ಲಿಸಬೇಕು. ಪ್ರವೇಶ ಪರೀಕ್ಷೆಯು (ತಾತ್ಕಾಲಿಕ) ಏಪ್ರಿಲ್ 13ರಂದು ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ ಮೊ.ಸಂ 9740052437, ಕೊಳ್ಳೇಗಾಲ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮೊ.ಸಂ 7829587596, ಯಳಂದೂರು ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮೊ.ಸಂ 7259980509, ಚಾಮರಾಜನಗರ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮೊ.ಸಂ 9620886393 ಹಾಗೂ ಗುಂಡ್ಲುಪೇಟೆ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮೊ.ಸಂ 8217593163 ಸಂಪರ್ಕಿಸಬಹುದು.
ಆಸಕ್ತ ಅಲ್ಪಸಂಖ್ಯಾತರ ಪೋಷಕರು, ವಿದ್ಯಾರ್ಥಿಗಳು ಎಲ್ಲಾದಾಖಲೆಗಳೊಂದಿಗೆ ಹತ್ತಿರವಿರುವ ಡಾ. ಎ.ಪಿ.ಜೆ ಅಬ್ದುಲ್ ಕಲಾಂವಸತಿ ಶಾಲೆ, ಜಿಲ್ಲಾ ಅಥವಾ ತಾಲ್ಲೂಕು ಮಾಹಿತಿ ಕೇಂದ್ರಗಳಲ್ಲಿ ಉಚಿತವಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿ, ಅಧಿಸೂಚನೆ,
ಪ್ರವೇಶ ಕೈಪಿಡಿ ಹಾಗೂ ಇತರೆ ವಿವರಗಳಿಗಾಗಿ ಇಲಾಖಾ ವೆಬ್‌ಸೈಟ್ https://dom.karnataka.gov.inಗೆ ಭೇಟಿ ನೀಡಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

## ಫೆ.7ರಂದು ನೇರ ಸಂದರ್ಶನ

**ಚಾಮರಾಜನಗರ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ನಗರದ ಅಪೋಲೋ ಹೋಂ ಕೇರ್ ಮತ್ತು ಭಾರತ್ ಫೈನಾನ್ಸ್ ಇನ್‌ಕ್ಲೂಷನ್ ಪ್ರೈ ಲಿ ಸಹಯೋಗದಲ್ಲಿ ವಿವಿಧ ಹುದ್ದೆಗಳ ನೇಮಕಾತಿಗೆ ನೇರ ಸಂದರ್ಶನವನ್ನು ಫೆಬ್ರವರಿ 7 ರಂದು ಬೆಳಗ್ಗೆ 10.30 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನಡೆಸಲಾಗುವುದು.
ಅಪೋಲೋ ಹೋಂ ಕೇರ್ ನಲ್ಲಿ ಖಾಲಿ ಇರುವ 50 ನರ್ಸಿಂಗ್ ಮತ್ತು ಡೇಟಾ ಎಂಟ್ರಿ ಆಪರೇಟರ್ ಹುದ್ದೆಗಳಿಗೆ 18 ರಿಂದ 30 ವರ್ಷದೊಳಗಿನ ಜಿ.ಎನ್.ಎಂ, ಎ.ಎನ್.ಎಂ, ಬಿ.ಎಸ್.ಸಿ, ಎಂ.ಎಸ್.ಸಿ ಮತ್ತು ಯಾವುದೇ ಪದವಿ, ಸ್ನಾತಕೋತ್ತರ ಪದವಿ ವಿದ್ಯಾರ್ಹತೆ ಹೊಂದಿರುವ ಹಾಗೂ ಭಾರತ್ ಫೈನಾನ್ಸ್ ಇನ್‌ಕ್ಲೂಷನ್ ಪ್ರೈ.ಲಿ ನಲ್ಲಿ ಖಾಲಿ ಇರುವ 30 ಟೆಲಿಕಾಲಿಂಗ್, ಫೀಲ್ಡ್ ಆಫೀಸರ್ ಮತ್ತು ಡೇಟಾ ಎಂಟ್ರಿ ಆಪರೇಟರ್ ಹುದ್ದೆಗಳಿಗೆ 18 ರಿಂದ 32 ವರ್ಷದೊಳಗಿನ ಎಸ್.ಎಸ್.ಎಲ್.ಸಿ. ಪಿಯುಸಿ, ಐ.ಟಿ.ಐ, ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಸಂದರ್ಶನದಲ್ಲಿ ಭಾಗವಹಿಸಬಹುದು.
ಆಸಕ್ತ ಅಭ್ಯರ್ಥಿಗಳು ತಮ್ಮ ಸ್ವ-ವಿವರ (ಬಯೋಡೆಟಾ) ಮತ್ತು ಅಂಕಪಟ್ಟಿಗಳ ಮೂಲ ಹಾಗೂ ಜೆರಾಕ್ಸ್ ಪ್ರತಿಗಳೊಂದಿಗೆ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗಬೇಕು.
ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ದೂ.ಸಂ 08226- 224430 ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಎ. ಮಹಮ್ಮದ್ ಅಕ್ಬರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಣ್ಣೂರು ಮಲ್ಲೇಶ್ವರಸ್ವಾಮಿಗೆ ಸ್ಪಟಿಕ ಲಿಂಗಪೂಜೆ




**ಮಾಗಡಿ:** ಕಣ್ಣೂರು ಮಲ್ಲೇಶ್ವರಸ್ವಾಮಿಕಣ್ಣೂರಿನ ಗ್ರಾಮದ ಶಕ್ತಿಯ ಬೆಳಕಾಗಿದೆ. ಈಅಪರೂಪದ ಸ್ಪಟಿಕ ಲಿಂಗಪೂಜೆಯಿಂದ ಮನುಜಕುಲಕ್ಕೆ ಸುಖ, ಶಾಂತಿ, ನೆಮ್ಮದಿಕುರಣಿಸಿದೆ ಎಂದು ಆರಾಧನಾ ಸಮಿತಿ ಅಧ್ಯಕ್ಷ ಪ್ರಭುದೇವರು ತಿಳಿಸಿದರು. ತಾಲೂಕಿನ ಕಣ್ಣೂರು ಗ್ರಾಮದಲ್ಲಿಮಲ್ಲೇಶ್ವರಸ್ವಾಮಿ ದೇಗುಲ ಉದ್ಘಾಟನೆ, ಮಲ್ಲೇಶ್ವರಸ್ವಾಮಿ ಸ್ಪಟಿಕ ಲಿಂಗ, ಗಣಪತಿ,ಪಾರ್ವತಿ,ವೀರಭದ್ರಸ್ವಾಮಿ, ಕಣ್ವ ಮಹರ್ಷಿಗಳಮೂತಿ ಪ್ರತಿಷ್ಠಾಪನೆ ಗೋಪುರಕಳಸಸ್ಥಾಪನೆ ಸಮಾರಂಭದಲ್ಲಿ ಅವರು ಮಾತನಾಡಿದರು.
ಪುರಾಣ ಪ್ರಸಿದ್ಧ ಕಣ್ವ ಮತ್ತುಶುಕಪುರಿ ಮಹರ್ಷಿಗಳ ತಪೋಭೂಮಿಕಣ್ಣೂರು. ಇಡೀ ಜಗತ್ತಿನ ಖ್ಯಾತಿಯ ಕ್ರಿಕೆಪಟುವಾಗಿ ಖ್ಯಾತಿ ಪಡೆದಿರುವಶಕ್ತಿಪುರುಷರಾದ ಕೆ. ಎಲ್ ರಾಹುಲ್,ಬೆಂಗಳೂರು ಉಪಮೇಯರ್ ಗಂಗಾಬಿಕೆ,ಇತರೆ ಸಿದ್ದಿಪುರುಷರಿಗೆ ಜನ್ಮ ಕೊಟ್ಟಿರುವ ಕಣ್ಣೂರು ದೇಶವಿದೇಶದಲ್ಲಿ ಹೆಸರುಗಳಿಸಿದೆ. ಇಂಥ ಪುಣ್ಯಪುರುಷರು ಹುಟ್ಟಿರುವ ಈಪುಣ್ಯಭೂಮಿಯಲ್ಲಿ ನಾವು ಹುಟ್ಟಿರುವುದು ಮಹಾಪುಣ್ಯಎಂದು ಭಾವಿಸಿದ್ದೇವೆ. ಕಾಶಿಯಿಂದತಂದ ಈ ಸ್ಪಟಿಕ ಲಿಂಗವನ್ನು ಇಲ್ಲಿಪ್ರತಿಷ್ಠಾಪಿಸಲಾಗಿದೆ. ಇಂಥಅಪರೂಪದ ಲಿಂಗದಕಿರಣ ಭಾಗ ಭಾಗದ ಜನರ ಭವಿಷ್ಯದಆಶಾಕಿರಣವಾಗಿದೆ ಬೆಳಕು ಚಲ್ಲಿದೆ. ಅಂಥಶಕ್ತಿಯುತ ಲಿಂಗಕ್ಕೆ ನಿತ್ಯ ಪೂಜೆಪುರಸ್ಕಾರಗಳು ನಡೆಸಿಕೊಂಡುಬರಲಾಗುವುದು.
ಇಲ್ಲಿ ಕಣ್ವ ಮಹರ್ಷಿಗಳಗದ್ದುಗೆ ಕಣ್ಣೂರು ಕೆರೆಯಲ್ಲಿ ಕಣ್ಮರೆಯಾಗಿದ್ದು, ಇದನ್ನು ಜೀರ್ಣೋದ್ಧಾರ ಗೊಳಿಸುವ ಕೆಲಸವನ್ನು ಮುಂದಿನ ದಿನಗಳಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದುತಿಳಿಸಿದರು.
ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯ್ತಿಮಾಜಿ ಅಧ್ಯಕ್ಷ ಕೆ.ಎನ್.ಜಯಶಂಕರ್ ಮಾತನಾಡಿ,ರಾಜ ಹರ್ಷವರ್ಧನ ಹೆಂಡತಿ ನಾಟ್ಯರಾಣಿಶಾಕುಂತಲ ಕಣ್ವ ಮಹರ್ಷಿಗಳ ಸಾಕುಮಗಳು. ಈಕೆ ಈಕೆ ಕಣ್ಣೂರಿನವಳುಕೆಲವೊಂದು ಕಾರಣದಿಂದ ಶಿವಗಂಗೆ ಬೆಟ್ಟದಮೇಲೆ ಆತ್ಮಹತ್ಯೆ ಮಾಡಿಕೊಂಡಳು ಎಂಬಇತಿಹಾಸವಿದೆ. ಹೀಗಾಗಿ ಕಣ್ಣೂರು ಚಿಕ್ಕ ಊರಲ್ಲಇದೊಂದು ಹತ್ತಾರು ಗ್ರಾಮಗಳಗೊಂಡು ದೊಡ್ಡ ಊರಾಗಿತ್ತು ಕಣ್ವ ಮತ್ತು ಶುಕಪುರಿಇಬ್ಬರು ಮಹರ್ಷಿಗಳು ಇದ್ದಂತಪುಣ್ಯಭೂಮಿಯಾಗಿದ್ದು,ದ ೇವಾನುದೇವತೆಗಳು ನೆಲೆಸಿರುವ ಬೀಡು.ಹೀಗಾಗಿ ಬಹುದೊಡ್ಡ ದೈವಿಶಕ್ತಿ ಸಂಚಾರಇರುವುದರಿಂದಲೇ ಕಣ್ಣೂರು ವಿಶ್ವಖ್ಯಾತಿಪಡೆದಿದೆ. 1969ರಲ್ಲಿ ಭಾರಿ ಮಳೆಗೆ ಕಣ್ಣೂರುಕೆರೆ ತುಂಬಿ ಊರು ಸಹಮುಳುಗಡೆಯಾಗಿತ್ತು. ದೈವಿಶಕ್ತಿಯಿಂದಯಾವುದೇ ಆನಾಹುತವಾಗಿರಲಿಲ್ಲ, ಈ ಗ್ರಾಮದಲ್ಲಿ ಹೆಚ್ಚು ಬುದ್ದಿವಂತರು, ಸಂಸ್ಕಾರವಂತರಿದ್ದಾರೆದೇವರ ಆರಾಧನೆ ನಿತ್ಯ ನಿರಂತರವಾಗಿನಡೆದುಕೊಂಡು ಬರುತ್ತಿರುವುದು ನಾವೂಕೂಡ ಈ ಧಾರ್ಮಿಕ ಕೈಂಕರ್ಯದಲ್ಲಿಭ ಾಗಿಯಾಗಿರುವುದು ನಮ್ಮ ಪೂರ್ವಜನ್ಮದಪುಣ್ಯದ ಫಲ ಎಂದು ತಿಳಿಸಿದರು.
ಕಣ್ಣೂರು ಗ್ರಾ.ಪಂ.ಮಾಜಿ ಅಧ್ಯಕ್ಷಕೆ. ಎಸ್.ಜಗದೀಶ್ ಮಾತನಾಡಿ, ಈ ಮಲ್ಲೇಶ್ವರಸ್ವಾಮಿದೇಗುಲ ನಿರ್ಮಾಣಕ್ಕೆ ಅನೇಕದಾನಿಗಳು, ಭಕ್ತರು, ಗ್ರಾಮಸ್ಥರು ಸಹಕಾರ ನೀಡಿದ್ದಾರೆ. ಸುಂದರವಾಗಿ ದೇಗುಲ ನಿರ್ಮಾಣಗೊಂಡಿದೆ. ಲೋಕಕಲ್ಯಾಣಕ್ಕಾಗಿ ಕಳೆದ ಎರಡು ದಿನಗಳಿಂದಲೂ ವಿವಿಧಧಾರ್ಮಿಕ ಕೈಂಕರ್ಯಗಳು,ಹೋಮ,ಹವನಾಧಿಗಳನ್ನುಗ ್ರಾಮಸ್ಥರೆಲ್ಲರೂ ಸೇರಿ ನಡೆಸಿದ್ದೇವೆ.ಕಣ್ಣೂರು ಮಹಾದೇಶ್ವರಸ್ವಾಮಿ ಶಕ್ತಿಜಗತ್ತನ್ನು ಬೆಳಗಲಿ ಎಂದು ಪ್ರಾರ್ಥಿಸಿದ್ದಾಗಿತಿಳಿಸಿದರು.ಕಣ್ಣೂರು ಮಹೇಶ್ವರಯ್ಯ ಮಾತನಾಡಿ, ಮಲ್ಲೇಶ್ವರಸ್ವಾಮಿ ಊರಿನ ಹೆಬ್ಬಾಗಿಲಲ್ಲಿ ಇರುವುದರಿಂದ ನಿತ್ಯ ಗ್ರಾಮದ ಜನರು ಶರಣುಎಂದು ಕೈಮುಗಿದು ನಡೆದರೆ ನಮ್ಮ ಹಿಂದೆಸದಾ ಮಲ್ಲೇಶ್ವರಸ್ವಾಮಿ ಇರುತ್ತದೆ. ಸ್ವಾಮಿಶಕ್ತಿಯಿಂದ ನಮ್ಮ ಊರು ಇನ್ನೂ ಮುಂದಿಪ್ರಜ್ವಲಿಸಲಿದೆ ಎಂದು ತಿಳಿಸಿದರು. ಇದೇ ವೇಳೆಅರ್ಚಕ ವೃಂದ ವಿವಿಧ ಧಾರ್ಮಿಕ ಪೂಜಾ ವಿಧಿವಿಧಾನಗಳನ್ನು ಶಾಸ್ತ್ರೋತ್ತವಾಗಿನೆರವೇರಿಸಿದರು. ಅನ್ನದಾನ ಏರ್ಪಡಿಸಲಾಗಿತ್ತು.
ಸಾಂಸ್ಕೃತಿಕ ಕಲಾತಂಡ, ಕುಂಭಕಳಸದೊಂದಿಗೆ ಕಳಸ ಮೆರವಣಿಗೆ, ಹಾಗೂಶಿಲಾಮೂರ್ತಿ, ಕಳಸ ಪ್ರತಿಷ್ಠಾಪನೆ ಕುಂಭಾಭಿಷೇಕ ನೆರವೇರಿಸಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿವೃತ್ತ ನಿರ್ದೇಶಕ ತ್ಯಾಗರಾಜು, ಗ್ರಾಮದ ಹಿರಿಯರಾದ ಚಂದ್ರಶೇಖರ್, ಬಸವರಾಜು, ಮಂಜುನಾಥ್, ನಾಗರಾಜು, ವೆಂಕಟೇಶಮೂರ್ತಿ, ಕೆ.ಎನ್. ರವೀಂದ್ರ, ಸಿದ್ದಲಿಂಗಮೂರ್ತಿ,ಗ್ರಾಪಂ ಅಧ್ಯಕ್ಷೆ ಮಮತಾ ಕಿರಣ್, ಉಪಾಧ್ಯಕ್ಷಕೆ. ಟಿ.ರವೀಶ್, ಮಾಜಿ ಅಧ್ಯಕ್ಷೆ ಮಹದೇವಮ್ಮ ಪುಟ್ಟರಾಜ್, ಸದಸ್ಯೆ ಚಂದ್ರಕಲಾ, ಲಕ್ಷ್ಮೀನರಸಿಂಹಸ್ವಾಮಿ, ಮುನಿಸ್ವಾಮಿ, ಕೆ.ಎಚ್.ಪ್ರಶಾಂತ್, ಭಾಗ್ಯಮ್ಮ ಶ್ರೀಧರ್, ಪಾರ್ವತಮ್ಮ, ಪಿಡಿಒ ಕಾಂತರಾಜು, ದೇಗುಲಸ್ಥಳದ ದಾನಿ ಮಂಗಳಮ್ಮ ಮಹದೇವಯ್ಯ, ಸುವರ್ಣಮ್ಮ ದಕ್ಷಿಣಮೂರ್ತಿ, ಶಿಲ್ಪಿ ತ್ಯಾಗರಾಜಾಚಾರ್ ಮುಖಂಡರು ಸುತ್ತಮುತ್ತಲ ಗ್ರಾಮಸ್ಥರು ಭಾಗವಹಿಸಿದ್ದರು.


## ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಹಾವಳಿ ಮೈಸೂರಿನಲ್ಲಿ ಮತ್ತೊಂದು ಬಲಿ

ಮೈಸೂರು: ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಹಾವಳಿ ಹೆಚ್ಚಾಗಿದ್ದು ಇದಕ್ಕೆ ಕಡಿವಾಣ ಹಾಕಲು ರಾಜ್ಯ ಸರ್ಕಾರ ಸುಗ್ರೀವಾಜ್ಞೆ ತರಲು ಮುಂದಾಗಿದ್ದು ಈ ಮಧ್ಯೆಯೂ ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಬೇಸತ್ತು ಸಾವನ್ನಪ್ಪುವುದು ಮುಂದುವರೆದಿದೆ.
ಇದೀಗ ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಮೈಸೂರಿನಲ್ಲಿ ಮತ್ತೊಬ್ಬ ವ್ಯಕ್ತಿ ಬಲಿಯಾಗಿದ್ದಾರೆ. ಜಯರಾಮು( 55) ಸಾವನ್ನಪ್ಪಿರುವ ರೈತ. ಹೆಚ್ ಡಿ ಕೋಟೆ ತಾಲೂಕಿನ ಕಣಿಯನಹುಂಡಿ ಗ್ರಾಮದಲ್ಲಿ ಈ ಘಟನೆ ನಡೆದಿದ್ದು, ಇಕ್ವಿಟಾಸ್, ಜನಬ್ಯಾಂಕ್ ಮೈಕ್ರೋ ಫೈನಾನ್ಸ್ ನಲ್ಲಿ ರೈತ ಜಯರಾಮು ಸುಮಾರು 5 ಲಕ್ಷ ಸಾಲ ಪಡೆದಿದ್ದರು.
ಜಯರಾಮು ಇಬ್ಬರು ಹೆಣ್ಣು ಮಕ್ಕಳನ್ನ ಮದುವೆ ಮಾಡಿದ್ದು, ಎರಡು ಎಕರೆ ಜಮೀನಿನಲ್ಲಿ ಕೃಷಿ ಮಾಡಿಕೊಂಡಿದ್ದರು. ಈ ಮಧ್ಯೆ ಮಕ್ಕಳ ಮದುವೆ ಹಾಗೂ ಕೃಷಿಗೆ ಮೈಕ್ರೋಫೈನಾನ್ಸ್ ನಿಂದ ಸಾಲ ಪಡೆದಿದ್ದರು. ಇತ್ತೀಚೆಗೆ ಮೈಕ್ರೋಫೈನಾನ್ಸ್ ಸಿಬ್ಬಂದಿ ಕಿರುಕುಳ ಹೆಚ್ಚಾಗಿದ್ದು, ಸಾಲ ತೀರಿಸಲಾಗದೆ ಜಮೀನಿನಲ್ಲಿ ವಿಷ ಸೇವಿಸಿ ಜಯರಾಮು ಆತ್ಮಹತ್ಯೆಗೆ ಶರಣಾಗಿದ್ದಾರೆ ಎನ್ನಲಾಗಿದೆ. ಹೆಚ್ ಡಿ ಕೋಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಚಾಮುಂಡೇಶ್ವರಿಗೆ ಚಿನ್ನ ಲೇಪಿತ ಕವಚ ಕೊಡುಗೆ



**ಚಾಮರಾಜನಗರ:** ಇಲ್ಲಿನ ಧಾರ್ಮಿಕ ದತ್ತಿ ಇಲಾಖೆಗೆ ಸೇರಿದ ಶ್ರೀ ಚಾಮರಾಜೇಶ್ವರ ದೇವಸ್ಥಾನದ ಆವರಣದಲ್ಲಿರುವ ಚಾಮುಂಡೇಶ್ವರಿ ತಾಯಿಗೆ ತಮಿಳುನಾಡಿನಲ್ಲಿರುವ ಶ್ರೀಕಂಠಸ್ವಾಮಿ ತಮ್ಮ ತಾಯಿ ತಂದೆಯ ಸ್ಮರಣಾರ್ಥ ಚಿನ್ನ ಲೇಪಿತ ಕವಚವನ್ನು ಕೊಡುಗೆಯಾಗಿ ನೀಡಿದ್ದಾರೆ.
ಚಾಮರಾಜನಗರ ಶ್ರೀ ಚಾಮರಾಜೇಶ್ವರ ದೇವಾಲಯದ ಶ್ರೀ ಚಾಮುಂಡೇಶ್ವರಿ ದೇವಸ್ಥಾನದ ಅವರಣಲ್ಲಿ ಕವಚಗಳನ್ನು ಇಟ್ಟು ಹೋಮ ಹವನ ಫಲಗಳನ್ನು ಇಟ್ಟು ಪೂಜೆ ಸಲ್ಲಿಸಿ, ನಂತರ ಚಾಮುಂಡೇಶ್ವರಿ ತಾಯಿಗೆ ಕವಚಗಳನ್ನು ತೊಡಿಸಿ, ವಿಶೇಷ ಪೂಜೆ ಸಲ್ಲಿಸಿ ಮಹಾ ಮಂಗಳಾರತಿ ಮಾಡಿ ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಲಾಯಿತು. ಇದಕ್ಕೂ ಮುನ್ನ ಚಿನ್ನ ಲೇಪಿತ ಕವಚಗಳನ್ನು ದೇವಸ್ಥಾನದ ಸುತ್ತ ಪ್ರದಕ್ಷಿಣೆ ಮಾಡಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಕಂಠಸ್ವಾಮಿ ನನ್ನ ತಂದೆ ಹಿಂದೆ ಚಾಮ ರಾಜೇಶ್ವರ ದೇವಸ್ಥಾನದಲ್ಲಿ ಪ್ರಧಾನ ಅರ್ಚಕರಾಗಿ ಸೇವೆ ಸಲ್ಲಿಸಿದ್ದರು. ನಂತರ ನಾವು ತಮಿಳುನಾಡಿಗೆ ಹೋಗಿ ನೆಲೆಸಿದವು, ಭಗವಂತ ನಮಗೆ ಸಕಲವನ್ನು ಕೊಟ್ಟು ಕಾಪಾಡುತ್ತಿದ್ದು, ನಮ್ಮ ತಂದೆ ತಾಯಿಯ ಸ್ಮರಣೆಗಾಗಿ ಈಗಾಗಲೇ ಶ್ರೀ ಚಾಮರಾಜೇಶ್ವರ ಉತ್ಸವ ಮೂರ್ತಿಗೆ ಚಿನ್ನಾಭರಣ ಮಾಡಿಸಿಕೊಟ್ಟಿದ್ದು ಈಗ ಚಾಮುಂಡೇಶ್ವರಿ ತಾಯಿಗೆ ಚಿನ್ನಲೇಪಿತ ಕವಚಗಳನ್ನು ಎರಡುವರೆ ಲಕ್ಷ ವೆಚ್ಚದಲ್ಲಿ ಕೊಡುಗೆಯಾಗಿ ನೀಡುತ್ತಿದ್ದೇವೆ, ಎಲ್ಲವು ಭಗವಂತನ ಇಚ್ಛೆ ಎಂದರು.
ಅರ್ಚಕ ಡಾ. ನಾಗರಾಜ ದೀಕ್ಷಿತ್ ಮಾತನಾಡಿ, ಇದು ಮಾಘ ಮಾಸ ಈ ಸಂದರ್ಭದಲ್ಲಿ ದೇವಿಯು ತನ್ನ ವಿರಾಟ ರೂಪದಲ್ಲಿ ಭಕ್ತರಿಗೆ ದರ್ಶನ ನೀಡಿ ಆಶೀರ್ವದಿಸುತ್ತಾಳೆ, ಇದು ಸುದಿನ ಶ್ರೀ ಚಾಮರಾಜೇಶ್ವರ ದೇವಸ್ಥನದ ಪ್ರಧಾನ ಅರ್ಚಕರಾಗಿ ಸೇವೆ ಸಲ್ಲಿಸಿದ್ದ ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿನ ಹುಲ್ಲಹಳ್ಳಿಯ ಎಚ್.ವಿ.ವಿಶ್ವೇಶ್ವರ ಪಂಡಿತ ಅವರ ಪುತ್ರ ಶ್ರೀಕಂಠಸ್ವಾಮಿ ದೇವರಿಗೆ ವಜ್ರಾಂಗಿ ಆಭರಣ ನೀಡಿದ್ದಾರೆ, ತಾಯಿ ಎಲ್ಲರಿಗೂ ಸನ್ಮಂಗಳವನ್ನುಂಟು ಮಾಡಲಿ ಎಂದರು.
ಈ ಸಂದರ್ಭದಲ್ಲಿ ಶ್ರೀಕಂಠಸ್ವಾಮಿ ಹಾಗೂ ಅವರ ಕುಟುಂಬ, ತಹಸೀಲ್ದಾರ್ ಗಿರಿಜಾ, ಹಿರಿಯರಾದ ಗಣೇಶ್ ದೀಕ್ಷಿತ್, ಆಗಮಿಕರಾದ ದರ್ಶನ್, ಅನಿಲ್, ಪ್ರದೀಪ್ ಕುಮಾರ್ ದೀಕ್ಷಿತ್, ರಮೇಶ್ ಇದ್ದರು.

## ಗ್ಯಾರಂಟಿ ಯೋಜನೆಗಳ ಕುರಿತು ಸಭೆ




**ಬೆಂಗಳೂರು:** ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ, ಅಧ್ಯಕ್ಷ ಜಿ.ಕೃಷ್ಣಪ್ಪ ಅವರು ಯಲಹಂಕ ವಿಧಾನ ಸಭಾ ಕ್ಷೇತ್ರದ ಕಛೇರಿಯಲ್ಲಿ ಪರಿವೀಕ್ಷಣೆ ಕೈಗೊಂಡು, ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಬಗ್ಗೆ ಸಭೆ ನಡೆಸಿದರು.
ಪ್ರತಿ ವಿಧಾನ ಸಭಾ ಕ್ಷೇತ್ರದಲ್ಲಿ ವಾರ್ಡ್ ವಾರು ಗ್ಯಾರಂಟಿ ಮನೆ-ಮನೆ ಭೇಟಿ ಕಾರ್ಯಕ್ರಮವನ್ನು ಕಡ್ಡಾಯವಾಗಿ ಹಮ್ಮಿಕೊಳ್ಳುವಂತೆ ಸಮಿತಿಯ ಸದಸ್ಯರುಗಳಿಗೆ ತಿಳಿಸಿದರು. ಜೊತೆಗೆ ತಿಂಗಳಿಗೆ ಕನಿಷ್ಠ ಒಂದು ಗರಿಷ್ಠ ಎರಡು ಸಭೆಗಳನ್ನು ನಡೆಸುವಂತೆ ಸದಸ್ಯ ಕಾರ್ಯದರ್ಶಿಗೆ ಸೂಚಿಸಿದರು.
ಬಿಬಿಎಂಪಿ ವ್ಯಾಪ್ತಿಯ 28 ವಿಧಾನ ಸಭಾ ಕ್ಷೇತ್ರಗಳಿಗಳಲ್ಲಿಯೂ ಪರಿಶೀಲನಾ ಸಭೆ ಹಮ್ಮಿಕೊಂಡಿದ್ದು, ಯಲಹಂಕ ಸೇರಿ ಇಲ್ಲಿಯವರೆಗೆ 10 ವಿಧಾನ ಸಭಾ ಕ್ಷೇತ್ರಗಳ ಕಛೇರಿ ಪರಿವೀಕ್ಷಣೆ ಸಭೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ.
ಈ ವೇಳೆ ಯಲಹಂಕ ವಿಧಾನ ಸಭಾ ಕ್ಷೇತ್ರದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪ್ರೇಮಲತ, ಸ್ಥಳೀಯ ಸಮಿತಿಯ ಸದಸ್ಯ ಕಾರ್ಯದರ್ಶಿ ಸುಹೇಲ್ ಅಹ್ಮದ್, ಸ್ಥಳೀಯ ಸಮಿತಿಯ ಸದಸ್ಯರುಗಳು ಭಾಗವಹಿಸಿದ್ದರು.

## ಫುಡ್‌ಡಿಲೆವರಿ ಬಾಯ್‌ಗೆ ಮೇಲೆ ಹಲ್ಲೆ

ಬೆಂಗಳೂರು: ಫುಡ್ ಡಿಲೆವರಿ ಬಾಯ್ ಮೇಲೆ ರೆಸ್ಟೋರೆಂಟ್ ಸಿಬ್ಬಂದಿ ಮಾಡಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಫೆಬ್ರವರಿ 2ರಂದು ರಾತ್ರಿ ಹೆಸರಘಟ್ಟ ರಸ್ತೆಯ ಸಪ್ತಗಿರಿ ಆಸ್ಪತ್ರೆಯ ಎದುರಿನಲ್ಲಿರುವ ಗಬ್ರು ಬಿಸ್ಟೋ ಅಂಡ್ ಕೆಫೆಯಲ್ಲಿ ಘಟನೆ ನಡೆದಿದ್ದು, ಸೋಲದೇವನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.
ಗ್ರಾಹಕರು ಆರ್ಡರ್ ಮಾಡಿದ್ದ ಫುಡ್ ನೀಡಲು ರೆಸ್ಟೋರೆಂಟ್ ಸಿಬ್ಬಂದಿ ವಿಳಂಬ ಮಾಡಿದ್ದಾರೆ. ಪದೇ ಪದೆ ಗ್ರಾಹಕರಿಂದ ಕರೆಗಳು ಬರುತ್ತಿದ್ದರಿಂದ ತನ್ನ ಕರ್ತವ್ಯದ ತುರ್ತುಸ್ಥಿತಿಯನ್ನು ಅರ್ಥಮಾಡಿಕೊಂಡ ಡೆಲಿವರಿ ಬಾಯ್, 'ಸಮಯಕ್ಕೆ ಸರಿಯಾಗಿ ಫುಡ್ ಡಿಲೆವರಿ ಮಾಡಲು ಸಾಧ್ಯವಾಗುವಂತೆ ಬೇಗನೆ ಫುಡ್ ನೀಡುವಂತೆ' ರೆಸ್ಟೋರೆಂಟ್ ಸಿಬ್ಬಂದಿ ಬಳಿ ಕೇಳಿದ್ದಾನೆ. ಈ ವೇಳೆ ರೆಸ್ಟೋರೆಂಟ್ ಸಿಬ್ಬಂದಿ ಹಾಗೂ ಡಿಲೆವರಿ ಬಾಯ್ ನಡುವೆ ಮಾತಿಗೆ ಮಾತು ಬೆಳೆದಿದೆ. ನೋಡ ನೋಡುತ್ತಿದ್ದಂತೆ ಗ್ರಾಹಕರ ಕಣ್ಣೆದುರೆ ಫುಡ್ ಡಿಲೆವರಿ ಬಾಯ್ ಮೇಲೆ ಮುಗಿಬಿದ್ದ ನಾಲ್ಕೈದು ಜನ ರೆಸ್ಟೋರೆಂಟ್ ಸಿಬ್ಬಂದಿ, ಆತನನ್ನ ಅಟ್ಟಾಡಿಸಿ ಹಲ್ಲೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ.
ಘಟನೆಯ ದೃಶ್ಯಗಳು ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ. ರೆಸ್ಟೋರೆಂಟ್ ಸಿಬ್ಬಂದಿಯ ಹಿಂಸಾತ್ಮಕವಾಗಿ ವರ್ತನೆಗೆ ಆಕ್ರೋಶ ವ್ಯಕ್ತವಾಗಿದೆ. ವೈರಲ್ ವಿಡಿಯೋ ಕುರಿತು ಪ್ರತಿಕ್ರಿಯಿಸಿರುವ ಎಕ್ಸ್ ಬಳಕೆದಾರರೊಬ್ಬರು 'ನಾವು ವಾಸಿಸುವ ಕಾನೂನಿನನ ಚೌಕಟ್ಟಿನೊಳಗೆ ಇಂತಹ ಕ್ರೌರ್ಯಗಳಿಗೆ ಪರಿಣಾಮಗಳ ಭಯವಿಲ್ಲವೇ? ಪ್ರಾಮಾಣಿಕ ಜೀವನಕ್ಕಾಗಿ ತಮ್ಮ ಕರ್ತವ್ಯಗಳನ್ನು ನಿರ್ವಹಿಸುತ್ತಿರುವ ವ್ಯಕ್ತಿಗಳು ಇಂತಹ ಹಿಂಸಾಚಾರಕ್ಕೆ ಒಳಗಾದಾಗ, ಇದು ಸಮಾಜದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ ಸ್ಥಿತಿಯ ಬಗ್ಗೆ ಹೇಳುತ್ತದೆ' ಎಂದು ಪೊಲೀಸರನ್ನ ಪ್ರಶ್ನಿಸಿದ್ದಾರೆ.
ಘಟನೆಯ ಕುರಿತು ಸೋಲದೇವನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಿದ್ದೇವೆ ಎಂದು ಪೊಲೀಸರು ತಿಳಿಸಿದ್ದಾರೆ.

# ಫೆ.12–14ರವರೆಗೆ ಮೋದಿ ಅಮೆರಿಕ ಪ್ರವಾಸ



**ನವದೆಹಲಿ:** ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಫೆಬ್ರವರಿ 12 ರಿಂದ ಎರಡು ದಿನಗಳ ಅಮೆರಿಕ ಪ್ರವಾಸ ಕೈಗೊಳ್ಳಲಿದ್ದು, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ವ್ಯಾಪಾರ ಮತ್ತು ರಕ್ಷಣೆ ಸೇರಿದಂತೆ ಹಲವಾರು ವಿಷಯಗಳ ಕುರಿತು ಮಾತುಕತೆ ನಡೆಸಲಿದ್ದಾರೆ. ಪ್ರವಾಸದ ಯೋಜನೆ ಪ್ರಕಾರ, ಎರಡು ದಿನಗಳ ಪ್ಯಾರಿಸ್ ಭೇಟಿಯನ್ನು ಮುಗಿಸಿದ ನಂತರ ವಾಷಿಂಗ್ಟನ್ ಡಿಸಿಗೆ ಪ್ರಯಾಣ ಬೆಳೆಸಲಿದ್ದಾರೆ. ಫೆಬ್ರವರಿ 12 ರ ಸಂಜೆ ಪ್ರಧಾನಿ ಅಮೆರಿಕ ರಾಜಧಾನಿಗೆ ಬಂದಿಳಿದು ಮರುದಿನ ಅವರು ಮತ್ತು ಟ್ರಂಪ್ ಮಾತುಕತೆ ನಡೆಸುವ ನಿರೀಕ್ಷೆಯಿದೆ.

ನವೆಂಬರ್‌ನಲ್ಲಿ ನಡೆದ ಚುನಾವಣಾ ಗೆಲುವಿನ ನಂತರ ಜನವರಿ 20 ರಂದು ಟ್ರಂಪ್ ಎರಡನೇ ಅವಧಿಗೆ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಇದು ಪ್ರಧಾನಿಯವರ ಮೊದಲ ದ್ವಿಪಕ್ಷೀಯ ಭೇಟಿಯಾಗಲಿದೆ. ಟ್ರಂಪ್ ಆಡಳಿತ ಅಧಿಕಾರಕ್ಕೆ ಬಂದ ಕೆಲವೇ ವಾರಗಳಲ್ಲಿ ದ್ವಿಪಕ್ಷೀಯ ಭೇಟಿಗಾಗಿ ವಾಷಿಂಗ್ಟನ್ ಡಿಸಿಗೆ ಪ್ರಯಾಣಿಸಲಿರುವ ಕೆಲವೇ ವಿದೇಶಿ ನಾಯಕರಲ್ಲಿ ಮೋದಿ ಕೂಡ ಒಬ್ಬರಾಗಿದ್ದಾರೆ.

ಪ್ರಧಾನಿ ಮೋದಿಯವರ ಭೇಟಿಯ ಕುರಿತು ಇನ್ನೂ ಯಾವುದೇ ಅಧಿಕೃತ ಮಾಹಿತಿ ಇಲ್ಲ. ಕಳೆದ ವಾರ, ವಿದೇಶಾಂಗ ಸಚಿವಾಲಯ ಪ್ರಧಾನಿ ಮೋದಿ ಅವರ ಅಮೆರಿಕ ಭೇಟಿಗಾಗಿ ದೆಹಲಿ ವಾಷಿಂಗ್ಟನ್‌ನೊಂದಿಗೆ ಕೆಲಸ ಮಾಡುತ್ತಿದೆ ಎಂದು ಹೇಳಿತ್ತು. ಫೆಬ್ರವರಿ 10 ಮತ್ತು 11 ರಂದು ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ಆಕ್ಷನ್ ಶೃಂಗಸಭೆಯಲ್ಲಿ ಭಾಗವಹಿಸಲು ಪ್ರಧಾನಿ ಪ್ಯಾರಿಸ್‌ಗೆ ಪ್ರಯಾಣಿಸುತ್ತಿದ್ದಾರೆ.

ಪ್ರಧಾನಿಯವರು ಫೆಬ್ರವರಿ 10–11 ರಂದು ಫ್ರಾನ್ಸ್‌ನಲ್ಲಿ ಗ್ರ್ಯಾಂಡ್ ಪಲೈಸ್‌ನಲ್ಲಿ ನಡೆಯಲಿರುವ ಂಖ ಕ್ರಿಯಾ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ಎಲಿಸೀ ಅರಮನೆಯ ಹೇಳಿಕೆಯ ಪ್ರಕಾರ, ಂಖ ಶೃಂಗಸಭೆಯು ರಾಷ್ಟ್ರ ಮತ್ತು ಸರ್ಕಾರದ ಮುಖ್ಯಸ್ಥರು, ಅಂತಾರಾಷ್ಟ್ರೀಯ ಸಂಸ್ಥೆಯ ನಾಯಕರು, ವ್ಯಾಪಾರ ಕಾರ್ಯನಿರ್ವಾಹಕರು, ಶಿಕ್ಷಣ ತಜ್ಞರು, ಕಲಾವಿದರು ಮತ್ತು ನಾಗರಿಕ ಸಮಾಜದ ಸದಸ್ಯರನ್ನು ಒಟ್ಟುಗೂಡಿಸುತ್ತದೆ. ಯುಎಸ್ ಪ್ರವಾಸವು ದೃಢಪಟ್ಟರೆ, ಫ್ರಾನ್ಸ್‌ನಲ್ಲಿ ಪ್ರಧಾನಿಯವರ ಅಂತಿಮ ಕಾರ್ಯಕ್ರಮಗಳನ್ನು ಅವಲಂಬಿಸಿ ಫೆಬ್ರವರಿ 12 ರಂದು ವಾಷಿಂಗ್ಟನ್‌ಗೆ ಆಗಮಿಸಲಿದ್ದಾರೆ.

ವಲಸೆ ಮತ್ತು ಸುಂಕದ ಸಂಘರ್ಷ ನಡೆಯುತ್ತಿರುವಾಗಲೇ ಮೋದಿಯವರ ಭೇಟಿ ಕುತೂಹಲ ಕೆರಳಿಸಿದೆ. ಕೆನಡಾ ಮತ್ತು ಮೆಕ್ಸಿಕನ್ ಆಮದುಗಳ ಮೇಲೆ ಶೇ.25ರಷ್ಟು ಸುಂಕವನ್ನು ಹಾಗೂ ಚೀನಾದ ಸರಕುಗಳ ಮೇಲೆ ಶೇ. 10 ರಷ್ಟು ಹೆಚ್ಚುವರಿ ತೆರಿಗೆಯನ್ನು ವಿಧಿಸುವುದಾಗಿ ಅಧ್ಯಕ್ಷ ಟ್ರಂಪ್ ಘೋಷಿಸಿದ್ದಾರೆ.

ಜನವರಿ 27 ರಂದು ನಡೆದ ದೂರವಾಣಿ ಸಂಭಾಷಣೆಯ ಸಂದರ್ಭದಲ್ಲಿ ಮೋದಿ ಮತ್ತು ಟ್ರಂಪ್, ವ್ಯಾಪಾರ, ಇಂಧನ ಮತ್ತು ರಕ್ಷಣಾ ಕ್ಷೇತ್ರಗಳಲ್ಲಿ ಭಾರತ–ಯುಎಸ್ ಸಹಕಾರವನ್ನು ಹೆಚ್ಚಿಸುವತ್ತ ಗಮನಹರಿಸುವ ವಿಶ್ವಾಸಾರ್ಹ ಪಾಲುದಾರಿಕೆಗೆ ಕೆಲಸ ಮಾಡುವುದಾಗಿ ಭರವಸೆ ನೀಡಿದ್ದರು. ದೂರವಾಣಿ ಮಾತುಕತೆಯ ನಂತರ, ಭಾರತವು ಅಮೆರಿಕ ನಿರ್ಮಿತ ಭದ್ರತಾ ಸಾಧನಗಳ ಖರೀದಿಯನ್ನು ಹೆಚ್ಚಿಸುವ ಮತ್ತು ನ್ಯಾಯಯುತ ದ್ವಿಪಕ್ಷೀಯ ವ್ಯಾಪಾರ ಸಂಬಂಧದತ್ತ ಸಾಗುವ ಮಹತ್ವವನ್ನು ಟ್ರಂಪ್ ಒತ್ತಿ ಹೇಳಿದರು.

ಈಗಿರುವ ಮಾಹಿತಿ ಪ್ರಕಾರ ಫೆಬ್ರವರಿ 13ರಂದು ಪ್ರಧಾನಿ ಮೋದಿಯವರು ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಲಿದ್ದಾರೆ. ಅಂದೇ ರಾತ್ರಿ ಟ್ರಂಪ್ ಅವರು ಮೋದಿಯವರಿಗೆ ಔತಣಕೂಟ ಏರ್ಪಡಿಸಿದ್ದಾರೆ ಎಂದು ಹೇಳಲಾಗುತ್ತಿದೆ.

ಇಬ್ಬರೂ ನಾಯಕರು ಅಮೆರಿಕ–ಭಾರತ ಕಾರ್ಯತಂತ್ರದ ಪಾಲುದಾರಿಕೆ ಮತ್ತು ಇಂಡೋ–ಪೆಸಿಫಿಕ್ ಕ್ವಾಡ್ ಪಾಲುದಾರಿಕೆಯನ್ನು ಮುನ್ನಡೆಸಲು ತಮ್ಮ ಬದ್ಧತೆಯನ್ನು ಒತ್ತಿ ಹೇಳಿದ್ದಾರೆ, ಭಾರತವು ಈ ವರ್ಷದ ಕೊನೆಯಲ್ಲಿ ಮೊದಲ ಬಾರಿಗೆ ಕ್ವಾಡ್ ನಾಯಕರನ್ನು ಆಯೋಜಿಸುತ್ತಿದೆ ಎಂದು ವಿದೇಶಾಂಗ ಸಚಿವಾಲಯ ಹೇಳಿದೆ.

ಭಾರತವು ಈಗಾಗಲೇ ಅಮೆರಿಕದೊಂದಿಗೆ ತನ್ನ ಇಂಧನ ಸಂಬಂಧಗಳನ್ನು ವಿಸ್ತರಿಸಲು, ವಿಶೇಷವಾಗಿ ಶುದ್ಧ ಇಂಧನ ವಲಯದಲ್ಲಿ ತನ್ನ ಉತ್ಸುಕತೆಯನ್ನು ತೋರಿಸಿದೆ. ಭಾರತದ ಪರಮಾಣು ಹಾನಿಗಾಗಿ ನಾಗರಿಕ ಹೊಣೆಗಾರಿಕೆ ಕಾಯ್ದೆ, 2010 ರಲ್ಲಿನ ಕೆಲವು ಷರತ್ತುಗಳು ಸುಮಾರು 16 ವರ್ಷಗಳ ಹಿಂದೆ ಎರಡು ಕಾರ್ಯತಂತ್ರದ ಪಾಲುದಾರರ ನಡುವೆ ದೃಢೀಕರಿಸಲ್ಪಟ್ಟ ಐತಿಹಾಸಿಕ ನಾಗರಿಕ ಪರಮಾಣು ಒಪ್ಪಂದದ ಅನುಷ್ಠಾನದಲ್ಲಿ ಮುಂದುವರಿಕೆಗೆ ಅಡಚಣೆ ಉಂಟುಮಾಡುತ್ತಿದೆ. ಸಣ್ಣ ಮಾಡ್ಯುಲರ್ ರಿಯಾಕ್ಟರ್‌ಗಳಲ್ಲಿ ಅಮೆರಿಕದೊಂದಿಗೆ ನಾಗರಿಕ ಪರಮಾಣು ಸಹಕಾರದ ಸಾಧ್ಯತೆಯನ್ನು ಭಾರತ ಪರಿಶೀಲಿಸುತ್ತಿದೆ, ಪರಮಾಣು ಇಂಧನ ಇಲಾಖೆಯು ಅಮೆರಿಕದ ಸಂಸ್ಥೆಯೊಂದಿಗೆ ಕೆಲವು ಸಹಯೋಗವನ್ನು ಹೊಂದಲು ಆಸಕ್ತಿ ಹೊಂದಿದೆ ಎಂದು ತಿಳಿದುಬಂದಿದೆ.

# ಮಹಾಕುಂಭ:ದಾರಿತಪ್ಪಿಸುವ ಮಾಹಿತಿ 8 ಮಂದಿ ವಿರುದ್ಧ ಎಫ್‌ಐಆರ್

**ಪ್ರಯಾಗ್ ರಾಜ್:** ಸಂಗಮದಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಜನರನ್ನು ದಾರಿತಪ್ಪಿಸುವ ಪೋಸ್ಟ್ ಮಾಡಿದ್ದ ಆರೋಪದ ಮೇಲೆಎಂಟು ಜನರ ವಿರುದ್ಧ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

ಮಹಾಕುಂಭ ಮೇಳ 2025 'ಸಾವಿನ ಹಬ್ಬ' ಎಂದು ಮಾಡಲಾದ X ಪೋಸ್ಟ್ ವೊಂದರಲ್ಲಿ ಒಂದೇ ಕುಟುಂಬದ ಮೂವರು ಕಾಲ್ತುಳಿತದಲ್ಲಿ ಸಾವನ್ನಪ್ಪಿದ್ದಾರೆ. ಅವರ ಕುಟುಂಬಸ್ಥರು ಶವಗಾರದಿಂದ ಮೃತದೇಹವನ್ನು ಪಡೆದು ಭುಜದ ಮೇಲೆ ಹೊತ್ತೊಯ್ದರು ಎಂದು ಬರೆಯಲಾಗಿತ್ತು.ಪರಿಶೀಲನೆ ನಂತರ ಈ ಪೋಸ್ಟ್ ನಲ್ಲಿ ಬಳಸಲಾದ ವಿಡಿಯೋ ನೇಪಾಳದ್ದು ಎಂದು ಕಂಡುಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ಏಳು ಎಕ್ಸ್ ಖಾತೆದಾರರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದ್ದು, ಕಾನೂನು ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ಹೇಳಿದ್ದಾರೆ.

ಇನ್ನೊಂದು ಪ್ರಕರಣದಲ್ಲಿ, ಇನ್‌ಸ್ಟಾಗ್ರಾಮ್‌ನಲ್ಲಿ ಪೋಸ್ಟ್ ಮಾಡಲಾದ ವಿಡಿಯೋವೊಂದರಲ್ಲಿ ಮೃತದೇಹಗಳು ಮಹಾಕುಂಭ ಮೇಳದ ನದಿಯಲ್ಲಿ ತೇಲುತ್ತಿವೆ. ಮೃತದೇಹಗಳನ್ನು ನದಿಗೆ ಎಸೆಯುವ ಮೊದಲು ಇನ್ನೂ ಜೀವಂತವಿರುವ ಮೂತ್ರಪಿಂಡಗಳನ್ನು ತೆಗೆಯಲಾಗುತ್ತಿದೆ ಎಂದು ತಪ್ಪಾಗಿ ಹೇಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಇಂತಹ ತಪ್ಪುದಾರಿಗೆಳೆಯುವ ವಿಡಿಯೋಗಳು ಉತ್ತರ ಪ್ರದೇಶ ಸರ್ಕಾರದ ಪ್ರತಿಷ್ಠೆಗೆ ಮಸಿ ಬಳಿಯುವ ಮತ್ತು ಸಾರ್ವಜನಿಕರ ಅಸಮಾಧಾನವನ್ನು ಕೆರಳಿಸುವ ಪ್ರಯತ್ನವಾಗಿದೆ. ಈ ಸಾಮಾಜಿಕ ಮಾಧ್ಯಮ ಖಾತೆದಾರರ ವಿರುದ್ಧ ಕೊತ್ವಾಲಿ ಮಹಾಕುಂಭ ನಗರ ಪೊಲೀಸ್ ಠಾಣೆಯಲ್ಲಿ ಅಧಿಕೃತ ದೂರು ದಾಖಲಿಸಲಾಗಿದೆ.

# ರಾಜ್ಯದಲ್ಲಿ ಗ್ಯಾರೆಂಟಿ ಪರಿಣಾಮ ಬಗ್ಗೆ ಶಾಸಕರೇ ಧ್ವನಿ ಎತ್ತುತ್ತಿದ್ದಾರೆ

**ನವದೆಹಲಿ:** "ದೆಹಲಿಯಲ್ಲಿ ಕಾಂಗ್ರೆಸ್ ಗ್ಯಾರೆಂಟಿ ಸದ್ದು ಮಾಡುತ್ತಿದೆ. ಆದರೆ, ಸ್ವತಃ ಕೆಪಿಸಿಸಿ ಅಧ್ಯಕ್ಷರೇ ಕರ್ನಾಟಕದಲ್ಲಿ ರಸ್ತೆ ಗುಂಡಿ ಮುಚ್ಚಲೂ ಹಣವಿಲ್ಲ ಎಂದಿದ್ದಾರೆ" ಎಂಬುದನ್ನು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ನೆನಪಿಸಿದರು.



ಮಾಧ್ಯಮದವರೊಂದಿಗೆ ಮಾತನಾಡಿ, ಈಗ ಇಂಡಿ ಒಕ್ಕೂಟ ಮತ್ತು ಅರವಿಂದ ಕೇಜ್ರಿವಾಲ್ ಗ್ಯಾರೆಂಟಿ ಸ್ಕೀಂ ಪ್ರಸ್ತಾಪಿಸುತ್ತಿದ್ದಾರೆ. ಆದರೆ, ಗ್ಯಾರೆಂಟಿಗಳನ್ನು ಕೊಟ್ಟ ಕರ್ನಾಟಕದಲ್ಲಿ ಅಭಿವೃದ್ಧಿಗೆ ಹಣವಿಲ್ಲ ಎಂಬ ವಾದವನ್ನು ಇಂಡಿ ನಾಯಕರೇ ಮುಂದಿಟ್ಟಿದ್ದಾರೆ ಎಂದರು.


ಸ್ವತಃ ಕೆಪಿಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಗ್ಯಾರೆಂಟಿಗಳಿಂದಾಗಿ ಕರ್ನಾಟಕದಲ್ಲಿ ರಸ್ತೆ ಗುಂಡಿ ಮುಚ್ಚಲು ಹಣವಿಲ್ಲ ಎಂಬುದನ್ನು ಹೇಳಿದ್ದಾರೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ನೆನಪಿಸಿದರು.

ಗ್ಯಾರೆಂಟಿ ಯೋಜನೆಗಳಿಂದಾಗಿ ಕರ್ನಾಟಕದಲ್ಲಿ ಅಭಿವೃದ್ಧಿಗೆ ಹಣವಿಲ್ಲ ಎಂಬುದನ್ನು ಆಡಳಿತ ಪಕ್ಷದ ಶಾಸಕರೇ ಹೇಳುತ್ತಿದ್ದಾರೆ. ರಾಜನೀತಿ ಸಲಹೆಗಾರ ಬಿ.ಆರ್.ಪಾಟೀಲ ಸಹ "ಗ್ಯಾರೆಂಟಿಗಳಿಂದಾಗಿ ಅಭಿವೃದ್ಧಿ ಸಂಪೂರ್ಣ ಸ್ಥಗಿತಗೊಂಡಿದೆ ಎಂದಿದ್ದಾರೆ" ಎಂದರು ಜೋಶಿ.

ರಾಜ್ಯದಲ್ಲಿ ಗ್ಯಾರೆಂಟಿಗಳಿಂದಾಗಿ ಅಭಿವೃದ್ಧಿಗೆ ಹಣ ಸಿಗುತ್ತಿಲ್ಲ ಎಂದು ಆಡಳಿತ ಪಕ್ಷದ ಶಾಸಕರು ಬಿ.ಆರ್.ಪಾಟೀಲ್ ಬಳಿ ಚರ್ಚಿಸುತ್ತಿದ್ದಾರೆ. ಕಾಂಗ್ರೆಸ್ ಪಕ್ಷ ಮುಂದಾಲೋಚನೆ ಮಾಡದೇ ಗ್ಯಾರೆಂಟಿ ರೂಪಿಸಿದ್ದೇ ಇಂಥ ಸ್ಥಿತಿಗೆ ಕರನ್ ಎಂದು ಸಚಿವ ಜೋಶಿ ಟೀಕಿಸಿದರು.

ಗ್ಯಾರೆಂಟಿ ಯೋಜನೆಗಳಿಂದಾಗಿ ರಾಜ್ಯದ ಸ್ಥಿತಿಗತಿ ಬಗ್ಗೆ ಶಾಸಕರಷ್ಟೇ ಅಲ್ಲ, ಈಗ ಜನರಿಗೂ ಅರಿವಾಗಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಪ್ರತಿಕ್ರಿಯಿಸಿದರು.

# ಮಹಾಕುಂಭ: ವೃದ್ಧರಿಗೆ ಪುಣ್ಯ ಸ್ನಾನಕ್ಕೆ ವ್ಯವಸ್ಥೆ



**ಪ್ರಯಾಗ್ ರಾಜ್:** ಸಂಗಮದಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳ 2025 ಮುಗಿಯುವುದರೊಳಗೆ 2,000 ವೃದ್ಧರಿಗೆ ಸಂಗಮದಲ್ಲಿ ಪುಣ್ಯ ಸ್ನಾನಕ್ಕಾಗಿ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಉತ್ತರ ಪ್ರದೇಶ ಸರ್ಕಾರ ತಿಳಿಸಿದೆ.

ಇದಕ್ಕಾಗಿ ಸಮಾಜ ಕಲ್ಯಾಣ ಇಲಾಖೆ ಸಂಗಮದ ದಡದಲ್ಲಿ ಪೆಂಡಲ್ ಹಾಕಲಾಗುತ್ತಿದೆ. ಶ್ರವಣ ಕುಂಭ ಉಪಕ್ರಮದಡಿ ಇದೊಂದು ಪ್ರಮುಖ ಕಾರ್ಯಕ್ರಮವಾಗಿದೆ. ಶ್ರವಣ ದೋಷವಿರುವವರಿಗೆ ತಪಾಸಣೆ ಮತ್ತು ನೆರವು ನೀಡುವ ಮೂಲಕ ಸಾವಿರಾರು ಜನರಿಗೆ ಸೇವೆ ನೀಡಲಾಗುತ್ತದೆ.

ಮಹಾಕುಂಭ ಮೇಳದಲ್ಲಿ ಇದೇ ಮೊದಲ ಬಾರಿಗೆ ಯೋಗಿ ಆದಿತ್ಯನಾಥ್ ಸರ್ಕಾರ ವೃದ್ಧರು ಮತ್ತು ಮತ್ತು ಶ್ರವಣದೋಷವುಳ್ಳವರಿಗೆ ವಿಶೇಷ ಶಿಬಿರವನ್ನು ಪ್ರಾರಂಭಿಸಿದೆ. ಸಮಾಜ ಕಲ್ಯಾಣ ಇಲಾಖೆ ಆಯೋಜಿಸಿರುವ ಈ ಶಿಬಿರದಲ್ಲಿಅಗತ್ಯವಿರುವವರಿಗೆ ಉಚಿತ ತಪಾಸಣೆ ನಡೆಸಿ, ಪರಿಕರಗಳನ್ನು ನೀಡಲಾಗುತ್ತದೆ ಎಂದು ಸರ್ಕಾರ ತಿಳಿಸಿದೆ.

ಈ ಉಪಕ್ರಮದ ಮೂಲಕ, ವಯಸ್ಸಾದವರು, ವಿಶೇಷವಾಗಿ ಸರ್ಕಾರಿ ವೃದ್ಧಾಶ್ರಮಗಳಿಂದ ಬಂದವರು ಕುಂಭಮೇಳವನ್ನು ಕಣ್ತುಂಬಿಕೊಳ್ಳಬಹುದಾಗಿದ್ದು,. ವಿವಿಧ ವೃದ್ಧಾಶ್ರಮಗಳ ಹಿರಿಯ ನಾಗರಿಕರಿಗಾಗಿ ಕುಂಭ ಪ್ರದೇಶದಲ್ಲಿ 100 ಹಾಸಿಗೆಗಳ ಆಶ್ರಮವನ್ನು ಸ್ಥಾಪಿಸಲಾಗಿದೆ.

ವಯಸ್ಸಾದ ಭಕ್ತರು ಆರಾಮವಾಗಿ ಉಳಿಯಲು, ಸಂಗಮ ಸ್ನಾನ ಮತ್ತು ಮಹಾ ಕುಂಭದ ಇತರ ಧಾರ್ಮಿಕ ಚಟುವಟಿಕೆಗಳಲ್ಲಿ ಭಾಗವಹಿಸಲು ಆಶ್ರಮದಲ್ಲಿ ವಿಶೇಷ ವಸತಿ ವ್ಯವಸ್ಥೆ ಮಾಡಲಾಗಿದೆ ಎಂದು ಸರ್ಕಾರ ಹೇಳಿದೆ.

ಇಲ್ಲಿಯವರೆಗೆ, ಮಿರ್ಜಾಪುರ, ಗೊಂಡಾ, ಸಿದ್ಧಾರ್ಥನಗರ, ಭದೋಹಿ, ಕೌಶಂಬಿ, ಹರ್ದೋಯಿ, ಸೀತಾಪುರ್ ಮತ್ತು ಲಖನೌ ಜಿಲ್ಲೆಗಳಿಂದ 500 ಕ್ಕೂ ಹೆಚ್ಚು ಹಿರಿಯ ನಾಗರಿಕರು ಮಹಾಕುಂಭದಲ್ಲಿ ಭಾಗವಹಿಸಿದ್ದಾರೆ. ಫೆಬ್ರವರಿ 26 ರೊಳಗೆ 2,000 ಹಿರಿಯ ಭಕ್ತರಿಗೆ ಪುಣ್ಯ ಸ್ನಾನವನ್ನು ಸರ್ಕಾರ ಯೋಜಿಸಿದೆ.

ಡಬಲ್ ಇಂಜಿನ್ ಸರ್ಕಾರವು ರಾಜ್ಯದಾದ್ಯಂತ ಹಿರಿಯ ನಾಗರಿಕರ ಸುರಕ್ಷತೆ, ಗೌರವ ಮತ್ತು ಆರೋಗ್ಯಕ್ಕಾಗಿ ನಿರಂತರವಾಗಿ ಕೆಲಸ ಮಾಡುತ್ತಿದೆ. ಈ ಹಿನ್ನೆಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಮಹಾಕುಂಭ ಪ್ರದೇಶದಲ್ಲಿ ಶ್ರಾವಣ ಕುಂಭ ಆಯೋಜಿಸುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಹಿರಿಯ ನಾಗರಿಕರು ಇದರ ಪ್ರಯೋಜನ ಪಡೆಯುತ್ತಿದ್ದಾರೆ ಎಂದು ತಿಳಿಸಲಾಗಿದೆ.

# ಭಾರತದತ್ತ ಅಕ್ರಮ ವಲಸಿಗರನ್ನು ಹೊತ್ತ ಅಮೆರಿಕ ಮಿಲಿಟರಿ ವಿಮಾನ

**ವಾಷಿಂಗ್ಟನ್:** ಅಕ್ರಮ ವಲಸಿಗರನ್ನು ಹೊತ್ತ ಅಮೆರಿಕದ ಮಿಲಿಟರಿ ವಿಮಾನ ಭಾರತದತ್ತ ಪ್ರಯಾಣ ಬೆಳೆಸಿದೆ ಎಂದು ವರದಿಗಳು ತಿಳಿಸಿವೆ. ಅಕ್ರಮ ವಲಸಿಗರನ್ನು ಕರೆದುಕೊಂಡು ಹೊರಟಿದ್ದ ಸಿ–17 ವಿಮಾನವು ಕನಿಷ್ಠ 24 ಗಂಟೆಗಳಲ್ಲಿ ಭಾರತವನ್ನು ತಲುಪುವ ನಿರೀಕ್ಷೆಯಿದೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ವಲಸೆ ನೀತಿಗಳನ್ನು ಬೆಂಬಲಿಸಲು ಮಿಲಿಟರಿಯನ್ನು ಹೆಚ್ಚಾಗಿ ಅವಲಂಬಿಸಿದ್ದಾರೆ, ಇದರಲ್ಲಿ ಅಮೆರಿಕ–ಮೆಕ್ಸಿಕೋ ಗಡಿಗೆ ಹೆಚ್ಚುವರಿ ಪಡೆಗಳನ್ನು ನಿಯೋಜಿಸುವುದು, ಗಡೀಪಾರು ಮಾಡಲು ಮಿಲಿಟರಿ ವಿಮಾನಗಳನ್ನು ಬಳಸುವುದು ಮತ್ತು ವಲಸಿಗರನ್ನು ಇರಿಸಲು ಮಿಲಿಟರಿ ನೆಲೆಗಳನ್ನು ತೆರೆಯುವುದು ಸೇರಿವೆ.

ಮಿಲಿಟರಿ ವಿಮಾನಗಳು ಈ ಹಿಂದೆ ಗ್ವಾಟೆಮಾಲಾ, ಪೆರು ಮತ್ತು ಹೊಂಡುರಾಸ್‌ನಂತಹ ದೇಶಗಳಿಗೆ ವಲಸಿಗರನ್ನು ಕರೆದೊಯ್ದಿವೆ. ಅಮೆರಿಕಾ ಅಧ್ಯಕ್ಷರಾಗಿ ಟ್ರಂಪ್ ಅವರು ಅಧಿಕಾರ ವಹಿಸಿಕೊಂಡ ನಂತರ ಅಕ್ರಮ ವಲಸಿಗರನ್ನು ಭಾರತಕ್ಕೆ ಗಡೀಪಾರು ಮಾಡುತ್ತಿರುವುದು ಇದೇ ಮೊದಲು.




ಪ್ರಧಾನಿ ನರೇಂದ್ರ ಮೋದಿ ಮತ್ತು ವಿದೇಶಾಂಗ ಸಚಿವ ಎಸ್. ಜೈಶಂಕರ್ ಸೇರಿದಂತೆ ಭಾರತೀಯ ನಾಯಕರೊಂದಿಗೆ ನಡೆದ ಚರ್ಚೆಯ ಸಂದರ್ಭದಲ್ಲಿ ಟ್ರಂಪ್ ಮತ್ತು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಭಾರತದ ಅಕ್ರಮ ವಲಸಿಗರ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಮೋದಿ ಮತ್ತು ಜೈಶಂಕರ್ ಸೇರಿದಂತೆ ಭಾರತೀಯ ನಾಯಕರೊಂದಿಗೆ ನಡೆದ ಚರ್ಚೆಯ ಸಂದರ್ಭದಲ್ಲಿ ಅಕ್ರಮವಾಗಿ ವಲಸೆ ತಮ್ಮ ಮಾತುಕತೆಯ ಭಾಗವಾಗಿದೆ ಎಂದು ಟ್ರಂಪ್ ಕಳೆದ ವಾರ ಹೇಳಿದ್ದರು.

# ಅಮೆರಿಕಕ್ಕೆ ಸೆಡ್ಡು: ಪ್ರತಿಸುಂಕ ಹೇರಿದ ಚೀನಾ, ಗೂಗಲ್ ವಿರುದ್ಧ ತನಿಖೆ

**ಬೀಜಿಂಗ್:** ಅಮೆರಿಕ ವಿರುದ್ಧ ಬಹು ಉತ್ಪನ್ನಗಳ ಮೇಲೆ ಪ್ರತಿ–ತೆರಿಗೆಗಳನ್ನು ಜಾರಿಗೆ ತರುತ್ತಿರುವುದಾಗಿ ಚೀನಾದ ವಾಣಿಜ್ಯ ಸಚಿವಾಲಯ ಮಂಗಳವಾರಘೋಷಿಸಿದ್ದು, ಗೂಗಲ್ ವಿರುದ್ಧ ತನಿಖೆ ಸೇರಿದಂತೆ ಇತರ ವ್ಯಾಪಾರ–ಸಂಬಂಧಿತ ಕ್ರಮಗಳ ಬಗ್ಗೆಯೂ ಎಚ್ಚರಿಕೆ ನೀಡಿದೆ.

ಕಲ್ಲಿದ್ದಲು ಮತ್ತು ದ್ರವೀಕೃತ ನೈಸರ್ಗಿಕ ಅನಿಲ ಉತ್ಪನ್ನಗಳ ಮೇಲೆ ಶೇ.15 ರಷ್ಟು ಸುಂಕವನ್ನು ಹಾಗೂ ಕಚ್ಚಾ ತೈಲ, ಕೃಷಿ ಯಂತ್ರೋಪಕರಣಗಳು, ದೊಡ್ಡ–ಸ್ಥಳಾಂತರ ಕಾರುಗಳ ಮೇಲೆ ಶೇ.10 ರಷ್ಟು ತೆರಿಗೆಯನ್ನು ಜಾರಿಗೆ ತರುವುದಾಗಿ ಚೀನಾ ಸರ್ಕಾರ ಹೇಳಿದೆ.

ಯುಎಸ್‌ನ ಏಕಪಕ್ಷೀಯ ಸುಂಕ ಹೆಚ್ಚಳವು ವಿಶ್ವ ವ್ಯಾಪಾರ ಸಂಸ್ಥೆಯ ನಿಯಮಗಳನ್ನು ಗಂಭೀರವಾಗಿ ಉಲ್ಲಂಘಿಸುತ್ತದೆ. ಇದು ತನ್ನದೇ ಆದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯಕವಾಗುರುವುದರ ಜೊತೆಗೆ ಚೀನಾ ಮತ್ತು ಯುಎಸ್ ನಡುವಿನ ಸಾಮಾನ್ಯ ಆರ್ಥಿಕ ಮತ್ತು ವ್ಯಾಪಾರ ಸಹಕಾರವನ್ನು ಹಾನಿಗೊಳಿಸುತ್ತದೆ ಎಂದು ಹೇಳಿದೆ.

ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಚೀನಾದ ಮೇಲೆ ವಿಧಿಸುವುದಾಗಿ ಹೇಳಿರುವ ಶೇಕಡಾ 10ರಷ್ಟು ತೆರಿಗೆಯು ಇಂದು ಜಾರಿಗೆ ಬರಬೇಕಿತ್ತು, ಆದರೆ ಟ್ರಂಪ್ ಮುಂದಿನ ಕೆಲವು ದಿನಗಳಲ್ಲಿ ಚೀನಾದ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರೊಂದಿಗೆ ಮಾತನಾಡಲು ಯೋಜಿಸಿದ್ದರು.

ಚೀನಾದ ಮಾರುಕಟ್ಟೆ ನಿಯಂತ್ರಣ ರಾಜ್ಯ ಆಡಳಿತವು ಗೂಗಲ್ ಕಾನೂನು ಉಲ್ಲಂಘಿಸುತ್ತಿದೆ ಎಂಬ ಅನುಮಾನದ ಮೇಲೆ ತನಿಖೆ ನಡೆಸುತ್ತಿದೆ ಎಂದು ಹೇಳಿದೆ. ಡೊನಾಲ್ಡ್ ಟ್ರಂಪ್ ಅವರ ಶೇಕಡಾ 10ರಷ್ಟು ಸುಂಕ ಜಾರಿಗೆ ಬಂದ ಕೆಲವೇ ನಿಮಿಷಗಳ ನಂತರ ಚೀನಾ ಈ ಘೋಷಣೆ ಮಾಡಿದೆ.

# ಸರಕು ರೈಲುಗಳು ಡಿಕ್ಕಿ ಹೊಡೆದು ಇಬ್ಬರಿಗೆ ಗಾಯ



**ಫತೇಪುರ (ಉತ್ತರ ಪ್ರದೇಶ):** ಉತ್ತರ ಪ್ರದೇಶದ ಫತೇಪುರ ಜಿಲ್ಲೆಯ ಪಂಭಿಪುರ ಬಳಿ ಮಂಗಳವಾರ ಬೆಳಗ್ಗೆ ಸರಕು ರೈಲು ನಿಂತಿದ್ದ ಮತ್ತೊಂದು ಸರಕು ರೈಲಿಗೆ ಡಿಕ್ಕಿ ಹೊಡೆದ ಪರಿಣಾಮ ಗಾರ್ಡ್ ಕೋಚ್ ಮತ್ತು ಎಂಜಿನ್ ಹಳಿ ತಪ್ಪಿ ಇಬ್ಬರು ಭಾರತೀಯ ರೈಲ್ವೆ ಅಧಿಕಾರಿಗಳಿಗೆ ಸಣ್ಣಪುಟ್ಟ ಗಾಯಗಳಾಗಿವೆ.

ಅಪಘಾತದಿಂದಾಗಿ ಮೇಲಿನ ಮಾರ್ಗದಲ್ಲಿ ರೈಲು ಸಂಚಾರಕ್ಕೆ ಅಡ್ಡಿಯಾಗಿದೆ. ಹಾನಿಗೊಳಗಾದ ವಿಭಾಗವನ್ನು ತೆರವುಗೊಳಿಸಲು ಮತ್ತು ರೈಲು ಸಂಚಾರವನ್ನು ಪುನರಾರಂಭಿಸಲು ರಕ್ಷಣಾ ಮತ್ತು ಪುನಃಸ್ಥಾಪನೆ ಕಾರ್ಯಾಚರಣೆಗಳು ಪ್ರಸ್ತುತ ನಡೆಯುತ್ತಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಗಾಯಗೊಂಡವರನ್ನು ಅನುಜ್ ರಾಜ್ (28) ಮತ್ತು ಶಿವಶಂಕರ್ ಯಾದವ್ (35) ಎಂದು ಗುರುತಿಸಲಾಗಿದೆ.

# 8ನೇ ವೇತನ ಆಯೋಗವನ್ನು ರಚಿಸಲು ಕೇಂದ್ರ ನಿರ್ಧಾರ

**ನವದೆಹಲಿ:** ದೇಶದಲ್ಲಿ ಹೊಸ ವೇತನ ಆಯೋಗ, ಮೂಲ ವೇತನ ಹೆಚ್ಚಳ, ಜನವರಿ 2025 ತುಟ್ಟಿಭತ್ಯೆ ಏರಿಕೆ ಕುರಿತು ಭಾರೀ ನಿರೀಕ್ಷೆಗಳು ಉಂಟಾಗಿವೆ. ಕೇಂದ್ರ ಸರ್ಕಾರ ಇತ್ತೀಚೆಗೆ 8ನೇ ವೇತನ ಆಯೋಗದ ಜಾರಿ ಮೂಲಕ ನೌಕರರ ವೇತನ ಹೆಚ್ಚಳಕ್ಕೆ ನಿರ್ಧರಿಸಿದೆ. ಸರ್ಕಾರಿ ನೌಕರರ ಆರ್ಥಿಕ ಹಿತದೃಷ್ಟಿಯಿಂದ 8ನೇ ವೇತನ ಆಯೋಗವನ್ನು ರಚಿಸಲು ನಿರ್ಧರಿಸಿದೆ ಎಂದು ಕೇಂದ್ರ ಸರ್ಕಾರವೇ ಅಧಿಕೃತಪಡಿಸಿದೆ.

ಇತ್ತೀಚೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಬಹು ನಿರೀಕ್ಷಿತ 8ನೇ ವೇತನ ಆಯೋಗದ ಬಗ್ಗೆ ಪ್ರಸ್ತಾಪಿಸಿದ್ದರು. ಸರ್ಕಾರಿ ನೌಕರರ ಕಲ್ಯಾಣಕ್ಕಾಗಿ 8ನೇ ಸಿಪಿಸಿ ರಚನೆಗೆ ಒಪ್ಪಿದೆ. ಪ್ರಧಾನಿ ನರೇಂದ್ರ ಮೋದಿಯವರು ಸಹ ಇದಕ್ಕೆ ಒಪ್ಪಿಗೆ ನೀಡಿದ್ದಾರೆ ಎಂದು ಹೇಳಿದ ಕೆಲವೇ ವಾರಗಳಲ್ಲಿ ದ್ರೌಪದಿ ಮುರ್ಮು ವಿವರಿಸಿದ್ದಾರೆ. ಹೊಸ ವೇತನ ಆಯೋಗವು ನೌಕರರ ವೇತನದಲ್ಲಿ ಮಹತ್ವದ ಬದಲಾವಣೆ, ಗಣನೀಯ ಹೆಚ್ಚಳಕ್ಕೆ ಪೂರಕವಾಗಿದೆ ಎಂದು ಅಭಿಪ್ರಾಯ ಹೊರ ಹಾಕಿದ್ದಾರೆ. ಕೇಂದ್ರ ಸರ್ಕಾರಿ ನೌಕರರಿಗೆ 8ನೇ ವೇತನ ಆಯೋಗ ಜಾರಿಗೆ ಕಾಯುತ್ತಿದ್ದಾರೆ. ಮೂಲ ವೇತನ ಎಷ್ಟು ಹೆಚ್ಚಾಗಲಿದೆ ಎಂಬುದರ ಕುರಿತು ನಿರೀಕ್ಷೆಗಳು ಹೆಚ್ಚಾಗಿವೆ. ಮೂಲ ವೇತನ, ಇನ್ನಿತರ ಭತ್ಯೆ ಹೆಚ್ಚಳಕ್ಕೆ ಫಿಟ್‌ಮೆಂಟ್ ಅಂಶ ಪ್ರಮುಖವಾಗಿರುತ್ತದೆ. ಉದಾಹರಣೆಗೆ 7ನೇ ವೇತನ ಆಯೋಗದಡಿ 2.57 ಫಿಟ್‌ಮೆಂಟ್ ಅಂಶಕ್ಕೆ ಶಿಫಾರಸು ಮಾಡಲಾಗಿತ್ತು. ಈಗಾಗಲೇ ನೌಕರರ ಕನಿಷ್ಠ ವೇತನ 7000 ರೂ.ನಿಂದ 18,000ಕ್ಕೆ ಹೆಚ್ಚಿಸಲಾಗಿದೆ. ಹೆಚ್ಚಿಸಲಾಗಿದೆ. ಇದೀಗ ಫಿಟ್ ಅಂಶ ಹೆಚ್ಚಿಸಿದರೆ ಈ ಕನಿಷ್ಠ ವೇತನ ಗಣನೀಯವಾಗಿ ಹೆಚ್ಚಾಗಲಿದೆ. ಈ ಹಿನ್ನೆಲೆಯಲ್ಲಿ ಹೊಸ ವೇತನ ಆಯೋಗ ಜಾರಿಗೆ ನೌಕರರ ಆಗ್ರಹಿಸಿದ್ದಾರೆ. 7ನೇ ವೇತನ ಆಯೋಗದ ದಾಖಲೆಯಡಿ ಕನಿಷ್ಠ ವೇತನವು ಕೇವಲ ಶೇ. 14.3 ರಷ್ಟಿತ್ತು. ಈ ಹಿಂದೆ ಕೇಂದ್ರ ಸರ್ಕಾರಿ ನೌಕರರು ಶೇ. 54 ರಷ್ಟು ವೇತನ ಹೆಚ್ಚಳವನ್ನು 6ನೇ ವೇತನ ಆಯೋಗದ ಪಡೆದುಕೊಂಡಿದ್ದಾರೆ.

ಇತ್ತೀಚಿನ ದಾಖಲೆಗಳು ನೀಡಿರುವ ಮಾಹಿತಿ ಪ್ರಕಾರ, 2ನೇ ವೇತನ ಆಯೋಗದಿಂದ 7ನೇ ವೇತನ ಆಯೋಗದವರೆಗೆ ನೌಕರರು 2ನೇ ವೇತನ ಆಯೋಗದಿಂದ – ಶೇಕಡಾ 14.2, 3ನೇ ವೇತನ ಆಯೋಗ – ಶೇಕಡಾ 20.6% 4ನೇ ವೇತನ ಆಯೋಗ – 27.6 ಶೇಕಡಾ 5ನೇ ವೇತನ ಆಯೋಗ – ಶೇಕಡಾ 31 6ನೇ ವೇತನ ಆಯೋಗ – 54 ಶೇಕಡಾ 7ನೇ ವೇತನ ಆಯೋಗದಿಂದ – ಶೇಕಡಾ 14.3 ಹೆಚ್ಚಳ ಪಡೆದಿದ್ದಾರೆ. 8ನೇ ವೇತನ ಆಯೋಗ ಜಾರಿಗೆ ಬಂದ ಬಳಿಕ ಕೇಂದ್ರ ಸರ್ಕಾರಿ ನೌಕರರು ವೇತನವು ಶೇಕಡಾ 25 ರಿಂದ 30 ರಷ್ಟು ಏರಿಕೆ ಆಗಲಿದೆ. ಇನ್ನೂ ಫಿಟ್‌ಮೆಂಟ್ ಅಂಶಗಳು 2.6 ಮತ್ತು 2.85 ರ ನಡುವಿನ ಫಿಟ್‌ಮೆಂಟ್ ಅಂಶ ಹೆಚ್ಚಳ ಪರಿಗಣಿಸುವ ಸಾಧ್ಯತೆ ಇದೆ. ಮೂಲವೇತನದೊಂದಿಗೆ ಕನಿಷ್ಠ ವೇತನ 40,000 ದಾಟುವ ಸಾಧ್ಯತೆ ಇದೆ ಎನ್ನಲಾಗಿದೆ. ಮೂಲವೇತನ, ತುಟ್ಟಿಭತ್ಯೆ, ತುಟ್ಟಿ ಪರಿಹಾರದಂತಹ ಇತರ ಭತ್ಯೆಗಳು ಎಂಟನೇ ವೇತನ ಆಯೋಗದಡಿ ಅಧಿಕ ಪ್ರಮಾಣದಲ್ಲಿ ಏರಿಕೆ ಆಗುವ ನಿರೀಕ್ಷೆ ಇದೆ. ಹಾಲಿ ವೇತನ ಆಯೋಗದ ಅವಧಿ ಮುಂದಿನ ಹನ್ನೊಂದು ತಿಂಗಳಲ್ಲಿ ಮುಗಿಯಲಿದೆ. ನಿಯಮದಂತೆ ಹತ್ತು ವರ್ಷಕ್ಕೆ ಒಮ್ಮೆ ಹೊಸ ವೇತನ ಆಯೋಗ ಜಾರಿಗೆ ತರಬೇಕು. ಅದರಂತೆ 2026ರಲ್ಲಿ 8ನೇ ವೇತನ ಆಯೋಗ ಜಾರಿ ಬರಲಿದ್ದು, ವೇತನ, ಭತ್ಯೆ ಹೆಚ್ಚಳದ ಮೇಲೆ ನೌಕರರ ಗಮನ ಕೇಂದ್ರಿಕೃತವಾಗಿದೆ.

# 2024ರಲ್ಲಿ 728 ಹುಸಿ ಬಾಂಬ್ ಬೆದರಿಕೆ 13 ಜನರ ಬಂಧನ: ಕೇಂದ್ರ

ನವದೆಹಲಿ: 2024 ರಲ್ಲಿ ವಿಮಾನಯಾನ ಸಂಸ್ಥೆಗಳಿಗೆ ಒಟ್ಟು 728 ಹುಸಿ ಬಾಂಬ್ ಬೆದರಿಕೆ ಕರೆಗಳು ಬಂದಿದ್ದು, ಈ ಪೈಕಿ ಇಂಡಿಗೋ ಏರ್‌ಲೈನ್ಸ್ ಅತಿ ಹೆಚ್ಚು ಬಾಂಬ್ ಬೆದರಿಕೆಗಳನ್ನು ಸ್ವೀಕರಿಸಿದೆ. ಏರ್ ಇಂಡಿಯಾ ಮತ್ತು ವಿಸ್ತಾರಾ ನಂತರದ ಸ್ಥಾನದಲ್ಲಿ ಇವೆ. ಆದಾಗ್ಯೂ, 2024 ರಲ್ಲಿ ವಿಮಾನಯಾನ ಸಂಸ್ಥೆಗಳಿಗೆ ಬಾಂಬ್ ಬೆದರಿಕೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಕೇವಲ 13 ಜನರನ್ನು ಮಾತ್ರ ಬಂಧಿಸಲಾಗಿದೆ.

ಕೇಂದ್ರ ನಾಗರಿಕ ವಿಮಾನಯಾನ ಸಚಿವಾಲಯದ ಪ್ರಕಾರ, 2024 ರಲ್ಲಿ 728 ಬಾಂಬ್ ಬೆದರಿಕೆಗಳು ಬಂದಿವೆ. ಅವುಗಳಲ್ಲಿ 714 ದೇಶೀಯ ವಿಮಾನಯಾನ ಸಂಸ್ಥೆಗಳು ಸ್ವೀಕರಿಸಿದ್ದು, ಉಳಿದವು ಕೆಲವು ಅಂತರರಾಷ್ಟ್ರೀಯ ವಿಮಾನಯಾನ ಸಂಸ್ಥೆಗಳು ಸ್ವೀಕರಿಸಿವೆ.

ಈ ಕುರಿತು ರಾಜ್ಯಸಭೆಯಲ್ಲಿ ಲಿಖಿತ ಉತ್ತರ ನೀಡಿದ ಕೇಂದ್ರ ನಾಗರಿಕ ವಿಮಾನಯಾನ ಖಾತೆ ರಾಜ್ಯ ಸಚಿವ ಮುರಳೀಧರ್ ಮೊಹೋಲ್ ಅವರು, ವಿದೇಶಿ ವಿಮಾನಯಾನ ಸಂಸ್ಥೆಗಳು ಒಟ್ಟು 14 ಬಾಂಬ್ ಬೆದರಿಕೆಗಳನ್ನು ಸ್ವೀಕರಿಸಿವೆ ಎಂದು ಹೇಳಿದರು.

ಅಂಕಿಅಂಶಗಳ ಪ್ರಕಾರ, ಕಳೆದ ವರ್ಷ ಎಮಿರೇಟ್ಸ್ ಮತ್ತು ಏರ್ ಅರೇಬಿಯಾ ಕ್ರಮವಾಗಿ ಐದು ಮತ್ತು ಮೂರು ಬಾಂಬ್ ಬೆದರಿಕೆಗಳನ್ನು ಸ್ವೀಕರಿಸಿದ್ದರೆ, ಏರೋಫ್ಲೋಟ್, ಏರ್ ಕೆನಡಾ, ಕ್ಯಾಥೆ ಪೆಸಿಫಿಕ್, ಎತಿಹಾದ್, ನೋಕ್ ಏರ್ ಮತ್ತು ಥಾಯ್ ಲಯನ್ ಏರ್ ತಲಾ ಒಂದು ಬೆದರಿಕೆಯನ್ನು ಸ್ವೀಕರಿಸಿವೆ.

ನಾಗರಿಕ ವಿಮಾನಯಾನ ಭದ್ರತಾ ಬ್ಯೂರೋ ಅಂಕಿಅಂಶಗಳ ಪ್ರಕಾರ, ಇಂಡಿಗೋಗೆ ಅತಿ ಹೆಚ್ಚು ಅಂದರೆ 216 ಬಾಂಬ್ ಬೆದರಿಕೆಗಳು ಬಂದಿವೆ. ನಂತರ ಏರ್ ಇಂಡಿಯಾ(179), ವಿಸ್ತಾರಾ(153), ಆಕಾಶ ಏರ್ (72), ಸ್ಪೈಸ್‌ಜೆಟ್ (35), ಅಲೈಯನ್ಸ್ ಏರ್ (26), ಏರ್ ಇಂಡಿಯಾ ಎಕ್ಸ್‌ಪ್ರೆಸ್ (19) ಮತ್ತು ಸ್ಟಾರ್ ಏರ್ (14) ಬೆದರಿಕೆ ಬಂದಿವೆ.


"ಹುಸಿ ಬಾಂಬ್ ಬೆದರಿಕೆಗಳಿಗೆ ಸಂಬಂಧಿಸಿದಂತೆ 2024 ರಲ್ಲಿ ಒಟ್ಟು 13 ಜನರನ್ನು ಬಂಧಿಸಲಾಗಿದೆ" ಎಂದು ಮೊಹೋಲ್ ಅವರು ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

# ರಾಷ್ಟ್ರಪತಿ ಭವನದಲ್ಲಿ ವಿವಾಹವಾಗುತ್ತಿರುವ ಮೊದಲ ವ್ಯಕ್ತಿ ಈಕೆ..!

**ನವದೆಹಲಿ:** ಹಲವರು ತಮ್ಮ ವಿವಾಹ ಯಾವ ಸ್ಥಳದಲ್ಲಿ ಆಗಬೇಕು ಅನ್ನೋದಕ್ಕೇ ದೊಡ್ಡ ಕನಸು ಕಂಡಿರುತ್ತಾರೆ. ಅದ್ಭುತ ರೆಸಾರ್ಟ್‌ಗಳು, ಹಿಲ್ ಸ್ಟೇಷನ್ ಹೀಗೆ ಹತ್ತ ಹಲವು ಡೆಸ್ಟಿನೇಷನ್ ವಿವಾಹಗಳ ನಾವು ನೋಡಬಹುದು. ಆದ್ರೆ ಮತ್ತೆ ಕೆಲವೊಂದು ವಿವಾಹಗಳು ಸಾಮಾನ್ಯ ಸಂಪ್ರದಾಯದಂತೆಯೂ ನಡೆಯುತ್ತವೆ. ಆದ್ರೆ ಇಲ್ಲೊಂದು ಮದುವೆ ಈಗ ಇಡೀ ದೇಶದಲ್ಲಿ ಸುದ್ದಿಯಾಗುವಂತೆ ಮಾಡಿದೆ. ಇದೇ ಮೊದಲ ಬಾರಿಗೆ ರಾಷ್ಟ್ರಪತಿ ಭವನದಲ್ಲಿ ಮದುವೆಯೊಂದು ನಿಶ್ಚಯವಾಗಿದೆ. ಆದ್ರೆ ಮದುವೆಯಾಗುತ್ತಿರುವುದು ದೊಡ್ಡ ಹುದ್ದೆಯಲ್ಲಿರುವ ವ್ಯಕ್ತಿ ಅಲ್ಲ. ಬದಲಿಗೆ ಸಾಮಾನ್ಯ ಸರ್ಕಾರಿ ಹುದ್ದೆಯಲ್ಲಿರುವ ಯುವತಿ.

ಕಳೆದ ಗಣರಾಜ್ಯೋತ್ಸವದಲ್ಲಿ ಭಾಗಿಯಾಗಿದ್ದ ಆಕೆಗೆ ಈಗ ರಾಷ್ಟ್ರಪತಿ ಭವನದಲ್ಲೇ ಮದುವೆಯಾಗುವ ಯೋಗ ಲಭಿಸಿದೆ. ಸಿಆರ್‌ಪಿಎಫ್ (ಸೆಂಟ್ರಲ್ ರಿಸರ್ವ್ ಪೊಲೀಸ್ ಫೋರ್ಸ್)ನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಯುವತಿಗೆ ಈ ಅವಕಾಶ ಬಂದೊದಗಿದೆ. ಪೂನಂ ಗುಪ್ತಾ ಎಂಬ ಯುವತಿ ಈಗ ರಾಷ್ಟ್ರಪತಿ ಭವನದಲ್ಲೇ ಮದುವೆಯಾಗುತ್ತಿದ್ದಾರೆ. ಫೆಬ್ರವರಿ 12 ರಂದು ಪೂನಂ ಗುಪ್ತಾ ಮದುವೆಯಾಗುತ್ತಿರುವುದಾಗಿ ತಿಳಿದುಬಂದಿದೆ. 74 ನೇ ಗಣರಾಜ್ಯೋತ್ಸವದ ಪರೇಡ್‌ನಲ್ಲಿ ಸಿಆರ್‌ಪಿಎಫ್‌ನ ಸಂಪೂರ್ಣ ಮಹಿಳಾ ತುಕಡಿಯ ನೇತೃತ್ವ ವಹಿಸಿದ್ದ ಸಹಾಯಕ ಕಮಾಂಡೆಂಟ್ ಪೂನಂ ಗುಪ್ತಾ ಅವರಿಗೆ ರಾಷ್ಟ್ರಪತಿ ಭವನವು ಈ ಅವಕಾಶ ನೀಡಿದೆ. ಆಕೆಯ ಸೇವೆ ಹಾಗೂ ಕರ್ತವ್ಯ ನಿಷ್ಠೆ ಮತ್ತು ಮಹಿಳಾ ಪ್ರತಿನಿಧಿಯಾಗಿ ಗಣರಾಜ್ಯೋತ್ಸವದಲ್ಲಿ ಭಾಗಿಯಾಗಿದ್ದ ಕಾರಣಕ್ಕೆ ಖುದ್ದು ರಾಷ್ಟ್ರಪತಿ ದ್ರೌಪದಿ ಮುರ್ಮು ಆಕೆಯ ವಿವಾಹಕ್ಕೆ ಅನುಮತಿ ನೀಡಿದ್ದಾರೆ. ರಾಷ್ಟ್ರಪತಿ ಭವನದ ಮದರ್ ತರೇಸಾ ಕ್ರೌನ್ ಕಾಂಪ್ಲೆಕ್ಸ್‌ನಲ್ಲಿ ಸಮಾರಂಭಕ್ಕೆ ಅವಕಾಶ ನೀಡಲಾಗಿದ್ದು, ಆಹ್ವಾನಿತರು ಭಾಗಿಯಾಗಲು ಸೂಚಿಸಲಾಗಿದೆಯಂತೆ. ಸದ್ಯ ಈಗ ಸಿಆರ್‌ಪಿಎಫ್ ಸಿಬ್ಬಂದಿ ಪೂನಂ ರಾಷ್ಟ್ರಪತಿ ಭವನದಲ್ಲಿ ಪಿಎಸ್‌ಒ ಆಗಿ ನೇಮಕಗೊಂಡಿದ್ದಾರೆ. ಹಾಗೆ ಸೀಮಿತ ಸಂಖ್ಯೆಯ ಆಹ್ವಾನಿತರಿಗೆ ಭಾಗಿಯಾಗಲು ಅವಕಾಶ ನೀಡಲಾಗಿದೆ. ಪೂನಂ ಗುಪ್ತಾ ಯುಪಿಎಸ್‌ಸಿ, ಸಿಎಪಿಎಫ್ ಪರೀಕ್ಷೆಯಲ್ಲಿ 81ನೇ ರ್‍ಯಾಂಕ್ ಗಳಿಸಿದ್ದರು. ಆರಂಭದಲ್ಲಿ ಅವರು ಬಿಹಾರದಲ್ಲಿ ಕರ್ತವ್ಯಕ್ಕೆ ನಿಯೋಜನೆಗೊಂಡಿದ್ದರು. ಅದರಲ್ಲೂ ನಕ್ಸಲ್ ಪೀಡಿತ ಪ್ರದೇಶದಲ್ಲಿ ಕರ್ತವ್ಯ ನಿರ್ವಹಿಸಿದ್ದಾರೆ. ಗ್ವಾಲಿಯರ್‌ನ ಶಿವಾಜಿ ವಿಶ್ವವಿದ್ಯಾಲ ಯದಲ್ಲಿ ಅವರು ಗಣಿತಶಾಸ್ತ್ರ ಪದವಿ ಹಾಗೂ ಇಂಗ್ಲಿಷ್‌ನಲ್ಲಿ ಸ್ನಾತಕೋತ್ತರ ಪದವಿ ಜೊತೆಗೆ ಬಿಎಡ್ ಕೂಡ ಪೂರ್ಣಗೊಳಿಸಿದ್ದಾರೆ. ಆದರೆ ಸರ್ಕಾರಿ ಹುದ್ದೆಗೇರುವ ಕನಸು ಕಂಡಿದ್ದ ಅವರು, ಯುಪಿಎಸ್‌ಸಿ ಸಿಆರ್‌ಪಿಎಫ್ ಪರೀಕ್ಷೆ ಬರೆದು 81ನೇ ರ್‍ಯಾಂಕ್ ಪಡೆದಿದ್ದರು. ಸದ್ಯ ಈಗ ರಾಷ್ಟ್ರಪತಿ ಭವನದಲ್ಲಿ ವಿವಾಹವಾಗುತ್ತಿರುವ ಮೊದಲ ಭಾರತೀಯ ಪ್ರಜೆಯಾಗಿದ್ದಾರೆ.

# ‘ಜೀವನದ ಅತ್ಯಂತ ಕಠಿಣ ದಿನ’



ಭಾರತೀಯ ಚಿತ್ರರಂಗದ ಅತ್ಯಂತ ಜನಪ್ರಿಯ ಗಾಯಕ ಸೋನು ನಿಗಮ್ ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡ ವಿಡಿಯೋ ಅವರ ಅಭಿಮಾನಿಗಳನ್ನು ಚಿಂತೆಗೀಡು ಮಾಡಿದೆ. ಇ

ತ್ತೀಚೆಗೆ ಪುಣೆಯಲ್ಲಿ ಕನ್ಸರ್ಟ್ (ಲೈವ್ ಮ್ಯೂಸಿಕ್ ಪ್ರೋಗ್ರಾಮ್) ನಡೆಸಿದ್ದರು. ಅಲ್ಲಿ ಅವರಿಗೆ ತೀವ್ರ ಬೆನ್ನು ನೋವು ಕಾಣಿಸಿಕೊಂಡಿತು. ಗಾಯಕ ತುಂಬಾನೇ ನೋವನ್ನು ಅನುಭವಿಸಿದರು ಎಂದು ವರದಿಯಾಗಿದೆ.

ಇಂಡಿಯನ್ ಪಾಪ್ಯುಲರ್ ಸಿಂಗರ್ ಸೋನು ನಿಗಮ್ ತಮ್ಮ ಅಧಿಕೃತ ಇನ್‌ಸ್ಟಾಗ್ರಾಮ್‌ನಲ್ಲಿ ನೋವಿನಿಂದ ನರಳುತ್ತಿರುವ ವಿಡಿಯೋವನ್ನು ಹಂಚಿಕೊಂಡಿದ್ದಾರೆ. ತಮ್ಮ ಬೆನ್ನುಮೂಳೆಗೆ ಸೂಜಿಯಿಂದ ಚುಚ್ಚಿದಂತೆ ಭಾಸವಾಯಿತು ಎಂದು ಅವರು ಹೇಳಿಕೊಂಡಿದ್ದಾರೆ. ವಿಡಿಯೋದಲ್ಲಿ, ಅವರು ನೋವಿನಿಂದ ನರಳುತ್ತಿರುವುದನ್ನು ಕಾಣಬಹುದು.

ನಂತರ ಬೆಡ್‌ನಲ್ಲಿ ವಿಶ್ರಾಂತಿ ಪಡೆಯುತ್ತಿದ್ದ ವೇಳೆ ಮಾತನಾಡಿದ ಗಾಯಕ, ’ಇದು ನನ್ನ ಜೀವನದ ಅತ್ಯಂತ ಕಠಿಣ ದಿನವಾಗಿತ್ತು. ಪ್ರದರ್ಶನದ ಸಂದರ್ಭ ತೀವ್ರ ನೋವನ್ನನುಭವಿಸಿದೆ. ಆದಾಗ್ಯೂ, ನಾನು ಅದನ್ನು ಹೇಗೋ ನಿಭಾಯಿಸಿ ನನ್ನ ಪ್ರದರ್ಶನವನ್ನು ಪೂರ್ಣಗೊಳಿಸಿದೆ. ನನ್ನ ಪ್ರದರ್ಶನ ಚೆನ್ನಾಗಿತ್ತು ಎಂದು ನನಗೆ ಸಂತೋಷವಾಗಿದೆ’ ಎಂದು ತಿಳಿಸಿದರು.

ಗಾಯಕ ತಮ್ಮ ಇನ್‌ಸ್ಟಾಗ್ರಾಮ್ ಪೋಸ್ಟ್‌ಗೆ, ’ ಸರಸ್ವತಿ ನನ್ನ ಕೈ ಹಿಡಿದಳು’ ಎಂದು ಬರೆದುಕೊಂಡಿದ್ದಾರೆ. ಈ ವಿಡಿಯೋ ಹೊರಬಿದ್ದ ಬೆನ್ನಲ್ಲೇ ಗಾಯಕನ ಅಪಾರ ಸಂಖ್ಯೆಯ ಅಭಿಮಾನಿಗಳು ಚಿಂತಿತರಾದರು. ಕಾಮೆಂಟ್ ವಿಭಾಗದಲ್ಲಿ ತಮ್ಮ ಪ್ರತಿಕ್ರಿಯೆ ನೀಡಲು ಶುರು ಮಾಡಿದರು.

ಸಾಮಾಜಿಕ ಜಾಲತಾಣ ಬಳಕೆದಾರರೋರ್ವರು ಪ್ರತಿಕ್ರಿಯಿಸಿ, ’ಸೋನು ಜಿ ದೇವರು ನಿಮ್ಮನ್ನು ಆಶೀರ್ವದಿಸಲಿ, ನೀವು ನಮಗೆಲ್ಲರಿಗೂ ಸ್ಫೂರ್ತಿ’ ಎಂದು ತಿಳಿಸಿದ್ದಾರೆ. ’ಸರಸ್ವತಿ ಜಿ ತಮ್ಮ ಮೆಚ್ಚಿನ ಮಗುವಿಗೆ ಏನೂ ಆಗಲು ಬಿಡುವುದಿಲ್ಲ’ ಎಂದು ಅಭಿಮಾನಿಯೋರ್ವರು ತಿಳಿಸಿದ್ದಾರೆ. ಮತ್ತೋರ್ವ ಫ್ಯಾನ್ ಪ್ರತಿಕ್ರಿಯಿಸಿ, ’ನಿಮ್ಮ ಬಗ್ಗೆ ಕಾಳಜಿ ವಹಿಸಿ ಸೋನು ಜಿ’ ಎಂದು ತಿಳಿಸಿದ್ದಾರೆ.

ತಮ್ಮ ಅಭಿಮಾನಿಯ ಇನ್‌ಸ್ಟಾಗ್ರಾಮ್ ಸ್ಟೋರಿಯನ್ನು ಗಾಯಕ ರೀಶೇರ್ ಮಾಡಿದ್ದು, ಅದರಲ್ಲಿ ’ಸೋನು ನಿಗಮ್ ನಿನ್ನೆ ರಾತ್ರಿ ಪುಣೆಯಲ್ಲಿ ಒಂದು ಕಾರ್ಯಕ್ರಮವನ್ನು ಹೊಂದಿದ್ದರು’ ಎಂದು ಬರೆಯಲಾಗಿದೆ. ’ಕಾರ್ಯಕ್ರಮದ ಸಂದರ್ಭ ಅವರಿಗೆ ತೀವ್ರ ಬೆನ್ನು ನೋವಿತ್ತು. ಇದನ್ನೆಲ್ಲಾ ಬದಿಗಿಟ್ಟು, ಅವರು ವೇದಿಕೆಗೆ ಬಂದ ತಕ್ಷಣ, ತಮ್ಮ ಅಭಿಮಾನಿಗಳಿಗೆ ಯಾವ ಸುಳಿವನ್ನೂ ಬಿಟ್ಟುಕೊಡಲಿಲ್ಲ. ಎರಡು ಪಟ್ಟು ಹೆಚ್ಚು ಶಕ್ತಿ ಹಾಕಿ ಪ್ರದರ್ಶನ ನೀಡಿದರು. ಇದು ನಿಜಕ್ಕೂ ಅದ್ಭುತವಾಗಿತ್ತು. ಈ ಶಕ್ತಿ ನಿಮ್ಮೊಂದಿಗೆ ಶಾಶ್ವತವಾಗಿ ಉಳಿಯಲಿ ಎಂದು ಆಶಿಸುತ್ತೇನೆ’ ಎಂದು ಬರೆಯಲಾಗಿದೆ.

# ವಿದ್ಯಾಪತಿ ಚಿತ್ರಕ್ಕೆ ಕೆಜಿಎಫ್ ವಿಲನ್

‘ಟಗರುಪಲ್ಯ’ ಚಿತ್ರದ ನಂತರ ನಾಗಭೂಷಣ್ ನಟನೆಯ ’ವಿದ್ಯಾಪತಿ’ ಚಿತ್ರಕ್ಕೆ ಕೆಜಿಎಫ್ ಚಿತ್ರದ ಖ್ಯಾತಿಯ ಗರುಡ ರಾಮ್ ಖಳನಾಯಕನಾಗಿ ಎಂಟ್ರಿ ಆಗಿದ್ದಾರೆ.

ಹೊಸ ಪೋಸ್ಟರ್ ಮೂಲಕ ಗರುಡರಾಮ್ ಪಾತ್ರವನ್ನು ಚಿತ್ರತಂಡ ರಿವಿಲ್ ಮಾಡಿದೆ. ಡಾಲಿ ಧನಂಜಯ್ ನಿರ್ಮಾಣದ ಈ ಚಿತ್ರವನ್ನು ಇಶಾಂ ಹಾಗೂ ಹಸೀಂ ಖಾನ್ ನಿರ್ದೇಶನ ಮಾಡುತ್ತಿದ್ದಾರೆ.

ಆಕ್ಷನ್, ಕಾಮಿಡಿ ಕತೆ ಹೊಂದಿರುವ ಈ ಚಿತ್ರದಲ್ಲಿ ನಾಗಭೂಷಣ್ ಅವರಿಗೆ ನಾಯಕಿಯಾಗಿ ’ಉಪಾಧ್ಯಕ್ಷ’ ಚಿತ್ರದ ನಟಿ ಮಲೈಕಾ ವಸೂಪಾಲ್ ಕಾಣಿಸಿಕೊಳ್ಳಲಿದ್ದಾರೆ. ಕರಾಟೆ ಮಾಸ್ಟರ್ ಅವತಾರದಲ್ಲಿ ರಂಗಾಯಣ ರಘು ನಟಿಸುತ್ತಿರುವುದು ಚಿತ್ರದ ಮತ್ತೊಂದು ವಿಶೇಷ.

ಲವಿತ್ ಛಾಯಾಗ್ರಹಣ, ಡಾಸ್ಮೋಡ್ ಸಂಗೀತ ನಿರ್ದೇಶನ, ಮುರುಳಿ ನೃತ್ಯ ನಿರ್ದೇಶನ, ಸುಜಿತ್ ವೆಂಕಟರಾಮಯ್ಯ ಸಾಹಿತ್ಯ, ಅರ್ಜುನ್ ಮಾಸ್ಟರ್ ಆಕ್ಷನ್ ಚಿತ್ರಕ್ಕಿದೆ. ಏಪ್ರಿಲ್ 10ಕ್ಕೆ ಸಿನಿಮಾ ತೆರೆಗೆ ಬರಲಿದೆ.

# ಸಂಪೂರ್ಣ ಬೆತ್ತಲಾದ ಬಿಯಾಂಕಾ; ಬಂಧನಕ್ಕೆ ಆಗ್ರಹ




ಅಮೆರಿಕದ ಜನಪ್ರಿಯ ರ್‍ಯಾಪ್ ಗಾಯಕ ಕಾನ್ಯೇ ವೆಸ್ಟ್ ಅವರು ಒಂದಷ್ಟು ವಿವಾದಗಳನ್ನು ಮಾಡಿಕೊಂಡಿದ್ದಾರೆ. ಆ ವಿವಾದಗಳ ಸಾಲಿಗೆ ಈಗ ಹೊಸದೊಂದು ಸೇರಿಕೊಂಡಿದೆ.

ಫೆಬ್ರವರಿ 2ರಂದು ನಡೆದ ಗ್ರ್ಯಾಮಿ ಅವಾರ್ಡ್ ಸಮಾರಂಭದಲ್ಲಿ ಕಾನ್ಯೇ ವೆಸ್ಟ್ ಅವರು ಪತ್ನಿ ಬಿಯಾಂಕಾ ಸೆನ್ಸೊರಿ ಜೊತೆ ಕಾಣಿಸಿಕೊಂಡರು. ಈ ವೇಳೆ ಬಿಯಾಂಕಾ ಅವರು ಸಂಪೂರ್ಣ ಬೆತ್ತಲಾದರು! ಈ ಘಟನೆಯಿಂದ ಅಲ್ಲಿದ್ದ ಅನೇಕರಿಗೆ ಮುಜುಗರ ಆಯಿತು. ಕೂಡಲೇ ಕಾನ್ಯೇ ವೆಸ್ಟ್ ಮತ್ತು ಬಿಯಾಂಕಾ ಸೆನ್ಸೊರಿ ಅವರನ್ನು ಅಲ್ಲಿಂದ ಹೊರಗೆ ಕಳಿಸಲಾಯಿತು.

ಅವಾರ್ಡ್ ಫಂಕ್ಷನ್ ಎಂದರೆ ರೆಡ್ ಕಾರ್ಪೆಟ್ ಇರಲೇಬೇಕು. ರೆಡ್ ಕಾರ್ಪೆಟ್ ಮೇಲೆ ಹೆಜ್ಜೆ ಹಾಕಿ ಪೋಸ್ ನೀಡುವ ಸೆಲೆಬ್ರಿಟಿಗಳು ಬಗೆಬಗೆಯ ಕಾಸ್ಟ್ಯೂಮ್ ಧರಿಸಿ ಬರುತ್ತಾರೆ. ಕೆಲವು ಸೆಲೆಬ್ರಿಟಿಗಳ ಬಟ್ಟೆಗಳು ತುಂಬ ಬೋಲ್ಡ್ ಆಗಿರುತ್ತವೆ. ಆದರೆ ಎಲ್ಲದಕ್ಕೂ ಇತಿ ಮಿತಿ ಇರಬೇಕು. ಕಾನ್ಯೇ ವೆಸ್ಟ್ ಪತ್ನಿ ಬಿಯಾಂಕಾ ಸೆನ್ಸೊರಿ ಅವರು ಆ ಎಲ್ಲ ಮಿತಿಗಳನ್ನು ಮೀರಿದ್ದಾರೆ.

ಮೊದಲು ರೆಡ್ ಕಾರ್ಪೆಟ್‌ಗೆ ಬರುವಾಗ ಬಿಯಾಂಕಾ ಸೆನ್ಸೊರಿ ಅವರು ದೊಡ್ಡದಾಗಿ ಕೋಟ್ ಧರಿಸಿದ್ದರು. ಮಾಧ್ಯಮಗಳ ಕ್ಯಾಮೆರಾ ಎದುರು ಬಂದು ನಿಂತ ಬಳಿಕ ಅವರು ಆ ಕೋಟ್ ಬಿಚ್ಚಿದರು. ಆಗ ಎಲ್ಲರಿಗೂ ಶಾಕ್ ಆಯಿತು. ಯಾಕೆಂದರೆ, ಪ್ಲಾಸ್ಟಿಕ್ ರೀತಿಯ ಸಂಪೂರ್ಣ ಪಾರದರ್ಶಕವಾದ ಉಡುಗೆಯನ್ನು ಧರಿಸಿ ಅವರು ಕಾಣಿಸಿಕೊಂಡರು. ಅವರು ಒಳಉಡುಪು ಕೂಡ ಧರಿಸಿರಲಿಲ್ಲ!

ಪತ್ನಿಯ ಈ ಹುಚ್ಚಾಟಕ್ಕೆ ಕಾನ್ಯೇ ವೆಸ್ಟ್ ಕೂಡ ಸಾಥ್ ನೀಡಿದರು. ಆದರೆ ಈ ದಂಪತಿಯ ಅತಿರೇಕವನ್ನು ಆಯೋಜಕರು ಸಹಿಸಲಿಲ್ಲ. ಕೂಡಲೇ ಅವರಿಬ್ಬರನ್ನು ಹೊರಗೆ ಕಳಿಸಲಾಯಿತು ಎಂದು ವರದಿ ಆಗಿದೆ.

ಸೋಶಿಯಲ್ ಮೀಡಿಯಾದಲ್ಲಿ ಬಿಯಾಂಕಾ ಅವರ ವಿರುದ್ಧ ಖಂಡನೆ ವ್ಯಕ್ತವಾಗುತ್ತಿದೆ. ಅವರನ್ನು ಬಂಧಿಸಬೇಕು ಎಂದು ಕೂಡ ನೆಟ್ಟಿಗರು ಒತ್ತಾಯಿಸಿದ್ದಾರೆ. ರೆಡ್ ಕಾರ್ಪೆಟ್‌ನಲ್ಲಿ ಬಿಯಾಂಕಾ ಬೆತ್ತಲಾದ ವಿಡಿಯೋ ವೈರಲ್ ಆಗಿದೆ.

# ರುದ್ರನಾದ ರೆಬೆಲ್ ಸ್ಟಾರ್

ಕೊರಳಲ್ಲಿ ರುದ್ರಾಕ್ಷಿ ಮಾಲೆ ಇದೆ. ಹೆಗಲಿಗೆ ಕೇಸರಿ ವಸ್ತ್ರವನ್ನು ಹೊದ್ದಿದ್ದಾರೆ. ಹಣೆಯಲ್ಲಿ ವಿಭೂತಿ, ಮುಖದಲ್ಲಿ ಮಂದಹಾಸದೊಂದಿಗೆ ಪ್ರಭಾಸ್

ಪೌರಾಣಿಕ ಕಥಾಹಂದರ ಇರುವ ‘ಕಣ್ಣಪ್ಪ’ ಸಿನಿಮಾ ಪ್ಯಾನ್ ಇಂಡಿಯಾ ಮಟ್ಟದಲ್ಲಿ ಮೂಡಿಬರುತ್ತಿದೆ. ಈ ಸಿನಿಮಾದಲ್ಲಿ ಕಣ್ಣಪ್ಪನ ಪಾತ್ರವನ್ನು ಟಾಲಿವುಡ್ ನಟ ವಿಷ್ಣು ಮಂಚು ಅವರು ಮಾಡುತ್ತಿದ್ದಾರೆ. ಅಲ್ಲದೇ ಅನೇಕ ಘಟಾನುಘಟಿ ಸ್ಟಾರ್ ಕಲಾವಿದರು ಈ ಚಿತ್ರದಲ್ಲಿ ಅಭಿನಯಿಸುತ್ತಿದ್ದಾರೆ. ಪ್ರಭಾಸ್ ಕೂಡ ಈ ಸಿನಿಮಾದ ಪಾತ್ರವರ್ಗದಲ್ಲಿ ಇದ್ದಾರೆ ಎಂಬುದು ವಿಶೇಷ. ಇಷ್ಟು ದಿನಗಳ ತನಕ ಪ್ರಭಾಸ್ ಅವರ ಲುಕ್ ಬಹಿರಂಗ ಆಗಿರಲಿಲ್ಲ. ಈಗ ‘ಕಣ್ಣಪ್ಪ’ ಚಿತ್ರದಿಂದ ಪ್ರಭಾಸ್ ಅವರ ಪಾತ್ರದ ಫಸ್ಟ್ ಲುಕ್ ಬಿಡುಗಡೆ ಮಾಡಲಾಗಿದೆ.

ಹಲವು ಕಾರಣಗಳಿಂದಾಗಿ ‘ಕಣ್ಣಪ್ಪ’ ಸಿನಿಮಾ ನಿರೀಕ್ಷೆ ಮೂಡಿಸಿದೆ. ದಕ್ಷಿಣ ಭಾರತದ ಹಲವು ಸ್ಟಾರ್ ಕಲಾವಿದರು ಈ ಸಿನಿಮಾದಲ್ಲಿ ಅಭಿನಯಿಸುತ್ತಿದ್ದಾರೆ. ಪ್ರಭಾಸ್ ಅವರ ಪಾತ್ರದ ಬಗ್ಗೆ ಅಭಿಮಾನಿಗಳಿಗೆ ನಿರೀಕ್ಷೆ ಹೆಚ್ಚಿದೆ. ಅವರು ಈ ಸಿನಿಮಾದಲ್ಲಿ ರುದ್ರನಾಗಿ ಕಾಣಿಸಿಕೊಳ್ಳಲಿದ್ದಾರೆ. ಈ ಪಾತ್ರದ ಪೋಸ್ಟರ್ ನೋಡಿ ಅಭಿಮಾನಿಗಳಿಗೆ ಖುಷಿ ಆಗಿದೆ. ರುದ್ರನ ಪಾತ್ರದಲ್ಲಿ ಪ್ರಭಾಸ್ ಅವರು ರಗಡ್ ಆಗಿ ಪೋಸ್ ನೀಡಿದ್ದಾರೆ.

ಈ ಸಿನಿಮಾವನ್ನು ಅತ್ಯಾಧುನಿಕ ತಂತ್ರಜ್ಞಾನದ ಮೂಲಕ ಕಟ್ಟಿ ಕೊಡುವಲ್ಲಿ ಚಿತ್ರತಂಡ ನಿರತವಾಗಿದೆ. ಪ್ರಭಾಸ್ ಲುಕ್ ಹೀಗಿದೆ.. ಹರಡಿದ ತಲೆಗೂದಲು, ಕೈಯಲ್ಲಿ ಅರ್ಧ ಚಂದ್ರಾಕೃತಿಯ ಕೋಲು ಹಿಡಿದು ಪ್ರಭಾಸ್ ಕಾಣಿಸಿಕೊಂಡಿದ್ದಾರೆ. ಕೊರಳಲ್ಲಿ ರುದ್ರಾಕ್ಷಿ ಮಾಲೆ ಇದೆ. ಹೆಗಲಿಗೆ ಕೇಸರಿ ವಸ್ತ್ರವನ್ನು ಹೊದ್ದಿದ್ದಾರೆ. ಹಣೆಯಲ್ಲಿ ವಿಭೂತಿ, ಮುಖದಲ್ಲಿ ಮಂದಹಾಸದೊಂದಿಗೆ ಪ್ರಭಾಸ್ ಅವರು ಕಾಣಿಸಿಕೊಂಡಿದ್ದು, ಈ ಲುಕ್ ವೈರಲ್ ಆಗುತ್ತಿದೆ.

ಮುಖೇಶ್ ಕುಮಾರ್ ಸಿಂಗ್ ಅವರು ಕಣ್ಣಪ್ಪ ಸಿನಿಮಾಗೆ ನಿರ್ದೇಶನ ಮಾಡುತ್ತಿದ್ದಾರೆ. ಈ ಸಿನಿಮಾವನ್ನು ಬಹುಕೋಟಿ ವೆಚ್ಚದಲ್ಲಿ ವಿಷ್ಣು ಮಂಚು ಅವರ ತಂದೆ ಮೋಹನ್ ಬಾಬು ನಿರ್ಮಾಣ ಮಾಡುತ್ತಿದ್ದಾರೆ. ಈ ಚಿತ್ರದಲ್ಲಿ ಶಿವನ ಪಾತ್ರವನ್ನು ಅಕ್ಷಯ್ ಕುಮಾರ್ ಮಾಡುತ್ತಿದ್ದಾರೆ. ಅವರ ಪೋಸ್ಟರ್ ಕೂಡ ಬಿಡುಗಡೆ ಆಗಿ ಹೈಪ್ ಸೃಷ್ಟಿ ಮಾಡಿತ್ತು. ‘ಕಣ್ಣಪ್ಪ’ ಮೂಲಕ ಅಕ್ಷಯ್ ಕುಮಾರ್ ಅವರು ತೆಲುಗು ಚಿತ್ರಕ್ಕೆ ಎಂಟ್ರಿ ನೀಡುತ್ತಿದ್ದಾರೆ.

2025ರ ಏಪ್ರಿಲ್ 25ಕ್ಕೆ ಪ್ಯಾನ್ ಇಂಡಿಯಾ ಮಟ್ಟದಲ್ಲಿ ‘ಕಣ್ಣಪ್ಪ’ ರಿಲೀಸ್ ಆಗಲಿದೆ. ಕಾನ್ ಚಿತ್ರೋತ್ಸವದಲ್ಲಿ ‘ಕಣ್ಣಪ್ಪ’ ಸಿನಿಮಾದ ಟೀಸರ್ ಬಿತ್ತರ ಆಗಿತ್ತು. ಸಿನಿಮಾದ ಮೇಕಿಂಗ್ ಗಮನ ಸೆಳೆಯುತ್ತಿದೆ. ವಿಷ್ಣು ಮಂಚು ಜೊತೆ ಪ್ರೀತಿ ಮುಕುಂದನ್, ಅಕ್ಷಯ್ ಕುಮಾರ್, ಮೋಹನ್ ಲಾಲ್, ಕಾಜಲ್ ಅಗರ್‌ವಾಲ್, ಪ್ರಭಾಸ್ ಸೇರಿದಂತೆ ಹಲವು ಸ್ಟಾರ್ ಕಲಾವಿದರು ಈ ಸಿನಿಮಾದ ಪಾತ್ರವರ್ಗದಲ್ಲಿ ಇದ್ದಾರೆ.



# ನಾಯಕಿಯಾಗಿ ಬದಲಾದ ಜಯಂತ್




ಲಕ್ಷ್ಮೀ ನಿವಾಸ’ ಧಾರಾವಾಹಿ ಸೈಕೋ ಜಯಂತ್ ಪಾತ್ರಧಾರಿ ದೀಪಕ್ ಸುಬ್ರಹ್ಮಣ್ಯ ಅವರ ನಟನೆಗೆ ಬಹಳ ಅಭಿಮಾನಿಗಳಿದ್ದಾರೆ. ಇದೀಗ ಅವರು ರಾಣಿ ಪಾತ್ರದಲ್ಲಿ ನಟಿಸಿರುವ ಮಿಸ್ಟರ್ ರಾಣಿ ಚಿತ್ರಕ್ಕೂ ಮೆಚ್ಚುಗೆ ವ್ಯಕ್ತವಾಗಿದೆ. ವಿಶೇಷವೆಂದರೆ ದೀಪಕ್ ಸುಬ್ರಹ್ಮಣ್ಯ ಅವರು ಇದರಲ್ಲಿ ರಾಣಿ ಪಾತ್ರದಲ್ಲಿ ನಟಿಸಿದ್ದಾರೆ. ಹೀರೋ ಆಗಬೇಕು ಎಂದು ಚಿತ್ರರಂಗಕ್ಕೆ ಬರುವ ವ್ಯಕ್ತಿಯೊಬ್ಬ ಹೀರೋಯಿನ್ ಆಗಿ ನಟಿಸುವ ಸನ್ನಿವೇಶ ಸೃಷ್ಟಿಯಾಗುವ ಕುತೂಹಲಕಾರಿ ಮತ್ತು ತಮಾಷೆಯ ಕಥಾ ಹಂದರ ವನ್ನು ಹೊಂದಿರುವ ಚಿತ್ರವಿದು.



ಈಗಾಗಲೇ ಚಿತ್ರದ ಟ್ರೇಲರ್, ಪಾತ್ರದ ಲುಕ್ ಎಲ್ಲವೂ ಸಿನಿಮಾ ಪ್ರೇಮಿಗಳ ಗಮನ ಸೆಳೆದಿದೆ. ’ಸೆಲ್ಸಿ ಮಮ್ಮಿ ಗೂಗಲ್ ಡ್ಯಾಡಿ’ ಸಿನಿಮಾ ಖ್ಯಾತಿಯ ಮಧುಚಂದ್ರ ನಿರ್ದೇಶನದ ಸಿನಿಮಾ ಇದು. ಪಾರ್ವತಿ ನಾಯರ್ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಬಾಹುಬಲಿ ಸಿನಿಮಾದ ಅಸಿಸ್ಟೆಂಟ್ ಕ್ಯಾಮೆರಾಮನ್ ಆಗಿದ್ದ ರವೀಂದ್ರನಾಥ ಈ ಚಿತ್ರದ ಛಾಯಾಗ್ರಹಣ ಮಾಡಿದ್ದಾರೆ. ಚಿತ್ರಕ್ಕೆ ರೂ.99 ಟಿಕೆಟ್ ನಿಗದಿ ಮಾಡಿರುವುದಾಗಿ ಚಿತ್ರತಂಡ ತಿಳಿಸಿದ್ದು, ಪ್ರೇಕ್ಷಕರು ಈ ಅವಕಾಶವನ್ನು ಸದುಗಪಡಿಸಿಕೊಳ್ಳಬಹುದು. ಈ ಸಿನಿಮಾ ಫೆ.7ರಂದು ಅದ್ದೂರಿಯಾಗಿ ಬಿಡುಗಡೆಯಾಗುತಿದೆ. ‘ಮಿಸ್ಟರ್ ರಾಣಿ’ ಹಾಸ್ಯ ಪ್ರಧಾನವಾದ ಚಲನಚಿತ್ರವು ಫೆ.7 ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿದೆ. ಈ ಸಿನಿಮಾದಲ್ಲಿ ಮಹಿಳಾ ಗೆಟಪ್‌ಗಳಲ್ಲಿ ಕಾಣಿಸಿಕೊಂಡಿರುವೆ. ಕುಟುಂಬ ಸಮೇತ ಈ ಚಿತ್ರವನ್ನು ವೀಕ್ಷಿಸಬಹುದಾಗಿದೆ. ಪ್ರೇಕ್ಷಕರು ಚಿತ್ರಮಂದಿರದಲ್ಲಿ ಚಲನಚಿತ್ರ ವೀಕ್ಷಿಸುವಂತೆ ಅವರು ಸುದ್ದಿಗೋಷ್ಠಿಯಲ್ಲಿ ನಟ ದೀಪಕ್ ಸುಬ್ರಹ್ಮಣ್ಯ ಮನವಿ ಮಾಡಿದರು.

# ಮತ್ತೆ ದೆಹಲಿ ಹೈಕೋರ್ಟ್ ಮೆಟ್ಟಿಲೇರಿದ ಐಶ್ವರ್ಯಾ ರೈ ಪುತ್ರಿ ಆರಾಧ್ಯಾ ಬಚ್ಚನ್



ಬಾಲಿವುಡ್ ನಟ ಅಭಿಷೇಕ್ ಬಚ್ಚನ್ ಹಾಗೂ ಐಶ್ವರ್ಯ ರೈ ಪುತ್ರಿ ಆರಾಧ್ಯಾ ಬಚ್ಚನ್ ಸ್ಟಾರ್ ಕಿಡ್. ಯಾವುದೇ ಸಿನಿಮಾಗಳಲ್ಲಿ ನಟಿಸದೇ ಇದ್ದರೂ ಆಕೆಗೆ ತಂದೆ, ತಾಯಿಯಿಂದ ಹೆಸರು ಬಂದುಬಿಟ್ಟಿದೆ. ತಾಯಿ ಸದಾ ಸಾರ್ವಜನಿಕವಾಗಿ ಆರಾಧ್ಯ ಕಾಣಿಸಿಕೊಳ್ಳುತ್ತಿರುತ್ತಾಳೆ. ಸದ್ಯ ಆಕೆ ದೆಹಲಿ ಹೈಕೋರ್ಟ್ ಮೆಟ್ಟಿಲೇರಿರುವುದು ಚರ್ಚೆ ಹುಟ್ಟು ಹಾಕಿದೆ.

ಅಭಿ– ಐಶ್ ದಂಪತಿ ದೂರಾಗುತ್ತಾರೆ ಎಂದು ಸೋಶಿಯಲ್ ಮೀಡಿಯಾದಲ್ಲಿ ಪದೇ ಪದೆ ವದಂತಿ ಹರಡುತ್ತಲೇ ಇರುತ್ತದೆ. ಇದು ಸುಳ್ಳು ಎಂದು ಹೇಳಿದರು ಕೆಲವರು ಕೇಳುತ್ತಿಲ್ಲ. ಇನ್ನು ಆರಾಧ್ಯ ಬಚ್ಚನ್ ಬಗ್ಗೆ ಕೂಡ ಇಲ್ಲಸಲ್ಲದ ಸುದ್ದಿ ಹರಡಲಾಗುತ್ತಿದೆ. ಮುಖ್ಯವಾಗಿ ಆಕೆಯ ಆರೋಗ್ಯದ ಬಗ್ಗೆ ಸುಳ್ಳು ವದಂತಿ ವೈರಲ್ ಆಗುತ್ತಿದೆ. ಇದನ್ನು ಪ್ರಶ್ನಿಸಿ ಆಕೆ ಈಗ ಕೋರ್ಟ್ ಮೆಟ್ಟಿಲೇರಿದ್ದಾಳೆ.

ಕೆಲ ವೆಬ್‌ಸೈಟ್ ಹಾಗೂ ಸೋಶಿಯಲ್ ಮೀಡಿಯಾದಲ್ಲಿ ಪ್ರಕಟವಾದ ಇಂತಹ ಸುಳ್ಳು ಸುದ್ದಿ ತೆಗೆಯಬೇಕು ಎಂದು ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದಾರೆ.

ಆರಾಧ್ಯ ಬಚ್ಚನ್ ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದಾರೆ ಎಂದು ಕೆಲ ಯೂಟ್ಯೂಬ್ ಚಾನೆಲ್‌ಗಳಲ್ಲಿ ಸುಳ್ಳು ಮಾಹಿತಿ ಹರಡಲಾಗಿದೆ. ಇನ್ನು ಕೆಲ ಯೂಟ್ಯೂಬ್ ಚಾನೆಲ್‌ಗಳಲ್ಲಿ ಆಕೆ ನಿಧನರಾಗಿದ್ದಾರೆಂದು ಕೂಡ ತಪ್ಪು ಸುದ್ದಿ ತೇಲಿ ಬಿಟ್ಟಿದ್ದಾರೆ. ಇದನ್ನು ವಿರೋಧಿಸಿ ಆರಾಧ್ಯ ಮತ್ತು ಆಕೆಯ ತಂದೆ ಅಭಿಷೇಕ್ ನ್ಯಾಯಾಲಯದ ಮೊರೆ ಹೋಗಿದ್ದಾರೆ.

ಈ ಹಿಂದೆ 2013ರಲ್ಲಿ ಕೂಡ ಇದೇ ವಿಚಾರವಾಗಿ ಆರಾಧ್ಯ ಕೋರ್ಟ್ ಅನ್ನು ಆಶ್ರಯಿಸಿದ್ದರು. ಆದರೂ ಕೆಲ ವೆಬ್‌ಸೈಟ್‌ಗಳು, ಸೋಶಿಯಲ್ ಮೀಡಿಯಾ ಪೇಜ್‌ಗಳು ಹೈಕೋರ್ಟ್ ಆದೇಶ ಪಾಲಿಸದ ಕಾರಣ ಮತ್ತೆ ಅರ್ಜಿ ಸಲ್ಲಿಸುವಂತಾಗಿದೆ. ಈ ಹಿಂದೆ ದಾಖಲಾಗಿದ್ದ ಅರ್ಜಿಯ ವಿಚಾರಣೆ ನಡೆಸಿದ್ದ ಹೈಕೋರ್ಟ್, ಪ್ರತಿಯೊಂದು ಮಗುವನ್ನು ಗೌರವಿಸಬೇಕು. ಅವರ ಆರೋಗ್ಯದ ಬಗ್ಗೆ ಸುಳ್ಳು ಮಾಹಿತಿ ಹರಡುವುದನ್ನು ಕಾನೂನು ಸಹಿಸುವುದಿಲ್ಲ ಎಂದು ಹೇಳಿತ್ತು.

ಜಸ್ಟೀಸ್ ಸಿ ಹರಿ ಶಂಕರ್ ಇದನ್ನು ತೀವ್ರವಾಗಿ ಖಂಡಿಸಿದ್ದರು. ಸುಳ್ಳು ವೀಡಿಯೊಗಳನ್ನು ಯೂಟ್ಯೂಬ್ ಪ್ಲಾಟ್‌ಫಾರ್ಮ್‌ನಿಂದ ತೆಗೆದುಹಾಕುವಂತೆ ಗೂಗಲ್‌ಗೆ ಆದೇಶಿಸಿತು. ಇಂತಹ ಯಾವುದೇ ಸುಳ್ಳು ಮಾಹಿತಿ ಗಮನಕ್ಕೆ ಬರುತ್ತಿದ್ದಂತೆ ಗೂಗಲ್ ಅಳಿಸಿ ಹಾಕಬೇಕು ಎಂದು ಕೋರ್ಟ್ ಆದೇಶ ನೀಡಿತ್ತು.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: 9448074878